# ಪೌಲನು ಕೊರಿಂಥಿಯರಿಗೆ ಬರೆದ ಮೊದಲನೆಯ ಪತ್ರ

## ಮುನ್ನುಡಿ

ರೋಮ್ ಸಾಮ್ರಾಜ್ಯಕ್ಕೆ ಸೇರಿದ ಅಖಾಯ ಪ್ರಾಂತ್ಯದ ರಾಜಧಾನಿಯಾಗಿದ್ದ ಕೊರಿಂಥ, ಗ್ರೀಕರ ಪ್ರಮುಖ ನಗರ. ವಿವಿಧ ಭಾಷೆಗಳ ಹಾಗೂ ಸಂಸ್ಕೃತಿಗಳ ಜನರು ಸುತ್ತಮುತ್ತಲಿನ ಪ್ರಾಂತ್ಯಗಳಿಂದ ಬಂದು ಅಲ್ಲಿ ನೆಲೆಸಿದ್ದರು. ಚುರುಕಾದ ವ್ಯಾಪಾರ ಉದ್ಯಮಕ್ಕೂ ಹೊಚ್ಚಹೊಸ ಸಂಸ್ಕೃತಿಗೂ ಸುಪ್ರಸಿದ್ಧವಾದ ಈ ನಗರ ವಿವಿಧ ಧರ್ಮಗಳ ಬೀಡಾಗಿತ್ತು. ಇತರ ಗ್ರೀಕ್ ಮಹಾ ನಗರಗಳಂತೆ ಕೊರಿಂಥವೂ ಅನೈತಿಕತೆಗೆ ಹೆಸರುವಾಸಿಯಾಗಿತ್ತು.

ಕ್ರೈಸ್ತ ಸಭೆಯಲ್ಲೂ ಭಿನ್ನಭೇದಗಳುಂಟಾಗಿದ್ದವು. ಅನೈತಿಕತೆ ಕಾಣಿಸಿಕೊಂಡಿತ್ತು. ಲೈಂಗಿಕ ನೀತಿನಿಯಮ, ವೈವಾಹಿಕ ಜೀವನ, ಮನಸ್ಸಾಕ್ಷಿಯ ಸಮಸ್ಯೆಗಳು, ಸಭಾಜೀವನದಲ್ಲಿ ಕ್ರಮಬದ್ಧತೆ, ಪವಿತ್ರಾತ್ಮ ಅವರ ವರದಾನ, ಪುನರುತ್ಥಾನದ ಪ್ರಶ್ನೆ – ಈ ಮುಂತಾದ ವಿಷಯಗಳು ಪೌಲನ ಗಮನವನ್ನು ಸೆಳೆಯುತ್ತಿದ್ದವು. ಇವುಗಳನ್ನು ಲೇಖಕನು ಶುಭಸಂದೇಶದ ದೃಷ್ಟಿಯಿಂದ ಸೂಕ್ಷ್ಮವಾಗಿ ಈ ಪತ್ರದಲ್ಲಿ ಪರಿಶೀಲಿಸುತ್ತಾನೆ.

ದೇವರು ಮಾನವನಿಗೆ ನೀಡಿರುವ ವರದಾನಗಳಲ್ಲಿ ಪ್ರೀತಿಯೇ ಉತ್ಕೃಷ್ಟವಾದುದು. ಇದನ್ನು ಕವನದ ರೂಪದಲ್ಲಿ ನಿರೂಪಿಸಿರುವ ಹದಿಮೂರನೆಯ ಅಧ್ಯಾಯವು ಜನಪ್ರಿಯವಾದುದು.

### ಪರಿವಿಡಿ

| | |
|---|---|
| ಪೀಠಿಕೆ | – 1.1 – 1.9 |
| ಧರ್ಮಸಭೆಯಲ್ಲಿದ್ದ ವಿವಿಧ ಪಂಗಡಗಳು | – 1.10 – 4.21 |
| ಲೈಂಗಿಕ ನಿಯಮ, ವೈವಾಹಿಕ ಜೀವನ | – 5.1 – 7.40 |
| ಕ್ರೈಸ್ತರು ಮತ್ತು ಕ್ರೈಸ್ತೇತರರು | – 8.1 – 11.1 |
| ಸಭಾಜೀವನ ಮತ್ತು ಆರಾಧನೆ | – 11.2 – 14.40 |
| ಯೇಸುವಿನ ಹಾಗೂ ಕ್ರೈಸ್ತಭಕ್ತರ ಪುನರುತ್ಥಾನ | – 15.1 – 15.58 |
| ಜುದೇಯದ ಕ್ರೈಸ್ತರಿಗೆ ಕಾಣಿಕೆ | – 16.1 – 16.4 |
| ವೈಯಕ್ತಿಕ ಶುಭಾಶಯಗಳೊಂದಿಗೆ ಸಮಾಪ್ತಿ | – 16.5 – 16.24 |

### ಪೀಠಿಕೆ

**1** ಕ್ರಿಸ್ತಯೇಸುವಿನಲ್ಲಿ ಪುನೀತರಾಗಿ ದೇವಜನರಾಗಲು ಕರೆಹೊಂದಿರುವ ಕೊರಿಂಥದ ಶ್ರೀಸಭೆಯವರಿಗೂ
ಹಾಗೂ ಪ್ರಭು ಯೇಸುಕ್ರಿಸ್ತರನ್ನು ಎಲ್ಲೆಡೆಯೂ ನಾಮಸ್ಮರಣೆ ಮಾಡುವ ಸರ್ವಜನರಿಗೂ –
ದೇವರ ಚಿತ್ತಾನುಸಾರ ಕ್ರಿಸ್ತಯೇಸುವಿನ ಪ್ರೇಷಿತನಾಗಲು ಕರೆಹೊಂದಿದ ಪೌಲನಾದ ನಾನು
ಸಹೋದರ ಸೊಸ್ಥೆನನೊಂದಿಗೆ ಸೇರಿ ಬರೆಯುವ ಪತ್ರ.
2ಯೇಸುಕ್ರಿಸ್ತರು ನಮಗೂ ಸಮಸ್ತ ದೇವಜನರಿಗೂ
ಪ್ರಭುವಾಗಿದ್ದಾರೆ.

3 ನಮ್ಮ ತಂದೆಯಾದ ದೇವರಿಂದಲೂ ಪ್ರಭುವಾದ ಯೇಸುಕ್ರಿಸ್ತರಿಂದಲೂ ನಿಮಗೆ ಅನುಗ್ರಹ ಮತ್ತು
ಶಾಂತಿಸಮಾಧಾನ ಲಭಿಸಲಿ!

**ಕ್ರಿಸ್ತರಲ್ಲಿ ಕೃಪಾಶೀರ್ವಾದ**

4 ಕ್ರಿಸ್ತಯೇಸುವಿನಲ್ಲಿ ನಿಮಗೆ ಕೊಡಲಾಗಿರುವ ದೇವಾನುಗ್ರಹದ ಸಲುವಾಗಿ ನಾನು ನಿಮಗೋಸ್ಕರ
ನನ್ನ ದೇವರಿಗೆ ಸತತವಾಗಿ ಕೃತಜ್ಞತೆಯನ್ನು ಸಲ್ಲಿಸುತ್ತೇನೆ. 5ಏಕೆಂದರೆ, ಕ್ರಿಸ್ತಯೇಸುವಿನಲ್ಲಿ ನೀವು ಎಲ್ಲ
ದೃಷ್ಟಿಯಿಂದಲೂ ಶ್ರೀಮಂತರು, ಜ್ಞಾನಸಂಪನ್ನರು ಮತ್ತು ವಾಕ್ ಚತುರರು ಆಗಿದ್ದೀರಿ. 6ಇದಲ್ಲದೆ,
ಕ್ರಿಸ್ತಯೇಸುವನ್ನು ಕುರಿತ ಸಾಕ್ಷ್ಯವು ನಿಮ್ಮಲ್ಲಿ ನೆಲೆಗೊಂಡಿದೆ. 7ಇದರಿಂದಾಗಿ ನಮ್ಮ ಪ್ರಭು ಯೇಸುಕ್ರಿಸ್ತರು
ಪ್ರತ್ಯಕ್ಷವಾಗುವುದನ್ನೇ ಎದುರು ನೋಡುತ್ತಿರುವ ನಿಮಗೆ ಯಾವ ಕೃಪಾಶೀರ್ವಾದಗಳ ಕೊರತೆಯು ಇಲ್ಲ.
8ನಮ್ಮ ಪ್ರಭು ಯೇಸುಕ್ರಿಸ್ತರ ದಿನದಂದು ನೀವು ನಿರ್ದೋಷಿಗಳಾಗಿರುವಂತೆ ಆ ದೇವರೇ, ನಿಮ್ಮನ್ನು
ಕಡೆಯವರೆಗೂ ಸ್ಥಿರವಾಗಿ ಕಾಪಾಡುವರು. 9ತಮ್ಮ ಪುತ್ರನೂ ನಮ್ಮ ಪ್ರಭುವೂ ಆದ ಯೇಸುಕ್ರಿಸ್ತರ
ಅನ್ಯೋನ್ಯತೆಗೆ ನಿಮ್ಮನ್ನು ಕರೆದಿರುವ ದೇವರು ನಿಜಕ್ಕೂ ವಿಶ್ವಾಸ ಪಾತ್ರರು.

**ಧರ್ಮಸಭೆಯಲ್ಲಿ ಭಿನ್ನಭೇದ**

10 ಸಹೋದರರೇ, ನಮ್ಮ ಪ್ರಭು ಯೇಸುಕ್ರಿಸ್ತರ ಹೆಸರಿನಲ್ಲಿ ನಾನು ಕೇಳಿಕೊಳ್ಳುವುದೇನೆಂದರೆ:
ವಾದವಿವಾದವಿಲ್ಲದೆ, ಭಿನ್ನಭೇದಗಳಿಲ್ಲದೆ ಒಂದೇ ಮನಸ್ಸಿನಿಂದಲೂ ಒಂದೇ ಉದ್ದೇಶದಿಂದಲೂ ನೀವು
ಐಕ್ಯಮತ್ಯದಿಂದ ಬಾಳಿರಿ. 11ಸಹೋದರರೇ, ನೀವು ಜಗಳವಾಡುತ್ತಿದ್ದೀರಿ ಎಂಬುದು ಖ್ಲೋಯೇಯನ
ಮನೆಯವರಿಂದ ತಿಳಿದುಬಂದಿದೆ. 12ನಿಮ್ಮ ಪೈಕಿ, ತಾನು ಪೌಲನ ಕಡೆಯವನು ಎಂದು ಒಬ್ಬ, ತಾನು
ಅಪೊಲೋಸನ ಕಡೆಯವನು ಎಂದು ಇನ್ನೊಬ್ಬ, ತಾನು ಕೇಫನ ಕಡೆಯವನು ಎಂದು ಮತ್ತೊಬ್ಬ, ತಾನು
ಕ್ರಿಸ್ತನ ಕಡೆಯವನು ಎಂದು ಮಗದೊಬ್ಬ. ಹೀಗೆ ಒಬ್ಬೊಬ್ಬರು ಒಂದೊಂದು ತೆರನಾಗಿ ಹೇಳಿಕೊಳ್ಳುತ್ತಾರಂತೆ.
13ಕ್ರಿಸ್ತಯೇಸು ಭಾಗಭಾಗವಾಗಿ ವಿಂಗಡಿಸಿ ಹೋಗಿದ್ದಾರೆಯೇ? ನಿಮಗೋಸ್ಕರ ಶಿಲುಬೆಯ ಮೇಲೆ
ಮಡಿದವನು ಪೌಲನೇ? ನೀವು ದೀಕ್ಷಾಸ್ನಾನ ಪಡೆದದ್ದು ಪೌಲನ ಹೆಸರಿನಲ್ಲೇ?

14 ಸದ್ಯ ! ಕ್ರಿಸ್ಪನು ಮತ್ತು ಗಾಯನು ಇವರಿಬ್ಬರನ್ನು ಬಿಟ್ಟರೆ ನಿಮ್ಮ ಪೈಕಿ ಯಾರಿಗೂ ನಾನು
ದೀಕ್ಷಾಸ್ನಾನವನ್ನು ಕೊಟ್ಟಿಲ್ಲ. 15ಆದ್ದರಿಂದ ನಿಮ್ಮಲ್ಲಿ ಯಾರೂ ದೀಕ್ಷಾಸ್ನಾನವನ್ನು ನನ್ನ ಹೆಸರಿನಲ್ಲಿ ಪಡೆದಿರಿ
ಎಂದು ಹೇಳಿಕೊಳ್ಳುವಂತಿಲ್ಲ. 16ಹೌದು, ಸ್ತೇಫನನ ಮನೆಯವರಿಗೂ ದೀಕ್ಷಾಸ್ನಾನವನ್ನು ಕೊಟ್ಟಿದ್ದೇನೆ.
ಇವರಲ್ಲದೆ ಇನ್ನಾರಿಗೂ ದೀಕ್ಷಾಸ್ನಾನವನ್ನು ಕೊಟ್ಟ ನೆನಪು ನನಗಿಲ್ಲ. 17ಯೇಸುಕ್ರಿಸ್ತರು ನನ್ನನ್ನು
ಕಳುಹಿಸಿರುವುದು ದೀಕ್ಷಾಸ್ನಾನವನ್ನು ಕೊಡುವುದಕ್ಕಲ್ಲ, ಶುಭಸಂದೇಶವನ್ನು ಸಾರುವುದಕ್ಕೆ. ಅದೂ
ವಾಕ್‌ಚಾತುರ್ಯದಿಂದಲ್ಲ. ಹಾಗೆ ಸಾರಿದ್ದೇ ಆದರೆ, ಕ್ರಿಸ್ತಯೇಸುವಿನ ಶಿಲುಬೆಯೇ ನಿರರ್ಥಕವಾದೀತು.

**ಶಿಲುಬೆಯ ಶಕ್ತಿ**

18 ವಿನಾಶಮಾರ್ಗದಲ್ಲಿರುವವರಿಗೆ ಶಿಲುಬೆಯ ಸಂದೇಶ ಹುಚ್ಚು ಸಂಗತಿಯಾಗಿದೆ.
ಮುಕ್ತಿಮಾರ್ಗದಲ್ಲಿರುವ ನಮಗಾದರೋ ಅದು ದೈವಶಕ್ತಿಯಾಗಿದೆ.

19 “ಜ್ಞಾನಿಗಳ ಜ್ಞಾನವನ್ನು ನಾಶಮಾಡುವೆನು;
ಜಾಣರ ಜಾಣತನಕ್ಕೆ ಭಂಗತರುವೆನು”

– ಎಂದು ಪವಿತ್ರ ಗ್ರಂಥದಲ್ಲಿ ಇದೆಯಲ್ಲವೇ?

20ಹೀಗಿರುವಾಗ ಜ್ಞಾನಿಯೆಲ್ಲಿ? ಶಾಸ್ತ್ರಜ್ಞನೆಲ್ಲಿ? ಜಗತ್ತಿನ ತರ್ಕನಿಪುಣನೆಲ್ಲಿ? ಪ್ರಪಂಚದ ಜ್ಞಾನವನ್ನು ದೇವರು
ಹುಚ್ಚುತನವಾಗಿಸಿಲ್ಲವೇ?

21 ಲೋಕವು ತನ್ನ ಸ್ವಂತ ಜ್ಞಾನದಿಂದ ದೇವರನ್ನು ಅರಿಯಲಾರದೆ ಹೋಯಿತು. ಇದು
ದೈವಸಂಕಲ್ಪವೇ ಸರಿ. ಆದ್ದರಿಂದಲೇ ನಾವು ಸಾರುವ ‘ಹುಚ್ಚುತನ’ವೆಂಬ ಸಂದೇಶದ ಮೂಲಕ
ವಿಶ್ವಾಸವುಳ್ಳವರನ್ನು ಉದ್ಧರಿಸುವುದು ದೇವರಿಗೆ ಉಚಿತವೆನಿಸಿತು. 22ಯೆಹೂದ್ಯರು ಸೂಚಕಕಾರ್ಯಗಳನ್ನು

ಕೇಳುತ್ತಾರೆ. ಗ್ರೀಕರು ಜ್ಞಾನವನ್ನು ಅರಸುತ್ತಾರೆ. [23]ನಾವಾದರೋ ಶಿಲುಬೆಗೇರಿಸಲಾದ ಕ್ರಿಸ್ತಯೇಸುವನ್ನು
ಪ್ರಚುರಪಡಿಸುತ್ತೇವೆ. ಯೆಹೂದ್ಯರಿಗೆ ಇದು ಅಸಹ್ಯವಾಗಿದೆ; ಅನ್ಯಜನರಿಗೆ ಹಾಸ್ಯಾಸ್ಪದವಾಗಿದೆ. [24]ಆದರೆ
ಯೆಹೂದ್ಯರಾಗಿರಲಿ, ಗ್ರೀಕರಾಗಿರಲಿ, ದೇವರಿಂದ ಕರೆಹೊಂದಿದ್ದರೆ ಅಂಥವರಿಗೆ ಯೇಸುಕ್ರಿಸ್ತರು ದೇವರ
ಶಕ್ತಿಯಾಗಿದ್ದಾರೆ ಹಾಗೂ ದೇವರ ಜ್ಞಾನವಾಗಿದ್ದಾರೆ. [25]'ದೇವರ ಹುಚ್ಚುತನ' ಎಂಬುದು ಮಾನವನ
ಜ್ಞಾನಕ್ಕಿಂತಲೂ ಶ್ರೇಷ್ಠವಾದುದು. 'ದೇವರ ದೌರ್ಬಲ್ಯ' ಎಂಬುದು ಮಾನವ ಶಕ್ತಿಗಿಂತಲೂ ಪ್ರಬಲವಾದುದು.

26 ಸಹೋದರರೇ, ನಿಮ್ಮನ್ನು ದೇವರು ಕರೆದಾಗ ನೀವು ಹೇಗಿದ್ದಿರಿ ಎಂದು ಜ್ಞಾಪಿಸಿಕೊಳ್ಳಿ.
ಲೋಕದ ಎಣಿಕೆಯಲ್ಲಿ ನಿಮ್ಮೊಳಗೆ ಜ್ಞಾನಿಗಳು ಅನೇಕರಿಲ್ಲ, ಪರಾಕ್ರಮಿಗಳು ಅನೇಕರಿಲ್ಲ, ಕುಲೀನರು
ಅನೇಕರಿಲ್ಲ. [27]ಜ್ಞಾನಿಗಳನ್ನು ನಾಚಿಕೆಗೀಡು ಮಾಡಲು ದೇವರು ಲೋಕದ ದೃಷ್ಟಿಯಲ್ಲಿ ಮೂರ್ಖರನ್ನು
ಆರಿಸಿಕೊಂಡರು; ಅಂತೆಯೇ ಬಲಿಷ್ಠರನ್ನು ಲಜ್ಜೆಗೀಡುಮಾಡಲು ಲೋಕದ ದೃಷ್ಟಿಯಲ್ಲಿ ಬಲಹೀನರನ್ನು
ಆರಿಸಿಕೊಂಡರು. [28]ಲೋಕದ ದೃಷ್ಟಿಯಲ್ಲಿ ಗಣ್ಯವಾದುದನ್ನು ನಿರ್ನಾಮಗೊಳಿಸಲು ಗಣನೆಗೆ ಬಾರದುದನ್ನು,
ಕೀಳಾದುದನ್ನು, ಬೀಳಾದುದನ್ನು ಆರಿಸಿಕೊಂಡರು. [29]ಯಾವ ಮಾನವನೂ ತಮ್ಮ ಸಮ್ಮುಖದಲ್ಲಿ
ಅಹಂಕಾರಪಡದಂತೆ ದೇವರು ಹೀಗೆ ಮಾಡಿದರು. [30]ಅವರ ಕೃಪೆಯಿಂದಲೇ ನೀವು ಕ್ರಿಸ್ತಯೇಸುವಿನಲ್ಲಿ
ಬಾಳುತ್ತಾ ಇದ್ದೀರಿ; ಅವರ ಕೃಪೆಯಿಂದಲೇ ಕ್ರಿಸ್ತಯೇಸು ನಮಗೆ ಜ್ಞಾನಮೂಲವಾಗಿದ್ದಾರೆ. ದೇವರಿಂದ
ನಮಗೆ ದೊರಕುವ ಸತ್ಸಂಬಂಧ, ಪಾವನತೆ ಹಾಗೂ ವಿಮೋಚನೆ ಆ ಕ್ರಿಸ್ತಯೇಸುವಿನಿಂದಲೇ. [31]ಆದ್ದರಿಂದ
ಪವಿತ್ರಗ್ರಂಥದಲ್ಲಿ ಹೇಳಿರುವಂತೆ:

'ಹೆಚ್ಚಳಪಡುವವನು ಪ್ರಭುವಿನಲ್ಲಿ
ಹೆಚ್ಚಳಪಡಲಿ.'

### ವಿಶ್ವಾಸದ ಬುನಾದಿ

**2** ಸಹೋದರರೇ, ದೇವರ ಸತ್ಯಾರ್ಥವನ್ನು ಸಾರಲು ನಿಮ್ಮಲ್ಲಿಗೆ ನಾನು ಬಂದಾಗ
ವಾಕ್ಚಾತುರ್ಯವನ್ನಾಗಲಿ, ಜ್ಞಾನಾಡಂಬರವನ್ನಾಗಲಿ ಪ್ರದರ್ಶಿಸುತ್ತಾ ಬರಲಿಲ್ಲ. [2]ನಾನು ನಿಮ್ಮೊಡನೆ ಇದ್ದಾಗ,
ಯೇಸುಕ್ರಿಸ್ತರನ್ನು, ಅದೂ ಶಿಲುಬೆಗೇರಿಸಲಾದ ಯೇಸುವನ್ನು ಹೊರತು ಬೇರೆ ಯಾವುದನ್ನೂ ಅರಿಯಲು
ಆಶಿಸಲಿಲ್ಲ. [3]ಈ ಕಾರಣ, ನಾನು ನಿಮ್ಮ ನಡುವೆ ದುರ್ಬಲನೂ ಭಯಭೀತನೂ ಆಗಿದ್ದೆ. [4]ನನ್ನ ಬೋಧನೆ
ಹಾಗೂ ಮಾತುಕತೆ ಕೇವಲ ಬುದ್ಧಿವಂತಿಕೆಯಿಂದಾಗಲಿ ಮಾತಿನ ಚಮತ್ಕಾರದಿಂದಾಗಲಿ ಕೂಡಿರಲಿಲ್ಲ; ಅದಕ್ಕೆ
ಬದಲಾಗಿ ದೇವರ ಆತ್ಮವನ್ನು, ಅವರ ಶಕ್ತಿಯನ್ನು ಸಮರ್ಥಿಸುತ್ತಿದ್ದವು. [5]ಅಂತೆಯೇ ನಿಮ್ಮ ವಿಶ್ವಾಸವು
ಮನುಷ್ಯ ಜ್ಞಾನವನ್ನು ಆಧರಿಸದೆ, ದೇವರ ಶಕ್ತಿಯನ್ನು ಆಧರಿಸಬೇಕೆಂಬುದೇ ನನ್ನ ಉದ್ದೇಶವಾಗಿತ್ತು.

### ದೇವರ ನಿಗೂಢ ಜ್ಞಾನ

6 ನಾನು ಪರಿಣಿತರೊಂದಿಗೆ ಜ್ಞಾನವನ್ನೇ ಕುರಿತು ಮಾತನಾಡುತ್ತೇನೆ. ಆದರೆ ಇದು ಇಹಲೋಕದ
ಜ್ಞಾನವಲ್ಲ, ಅಳಿದು ಹೋಗುವಂಥ ಅಧಿಪತಿಗಳ ಜ್ಞಾನವೂ ಅಲ್ಲ. [7]ನಾನು ಸಾರುವ ಜ್ಞಾನ ದೇವರ ನಿಗೂಢ
ಜ್ಞಾನ. ಮಾನವರಿಗೆ ಮುಚ್ಚಿಟ್ಟ ಜ್ಞಾನ. ನಮ್ಮನ್ನು ಮಹಿಮೆಗೊಳಿಸುವುದಕ್ಕಾಗಿ ಲೋಕದ ಉತ್ಪತ್ತಿಗೆ ಮೊದಲೇ
ದೇವರು ನಿಯೋಜಿಸಿದ ಜ್ಞಾನ. [8]ಲೋಕಾಧಿಪತಿಗಳಾರಿಗೂ ಇದರ ಅರಿವಿರಲಿಲ್ಲ. ಹಾಗೆ ಅರಿತಿದ್ದರೆ ಆ
ಮಹಿಮಾನ್ವಿತ ಪ್ರಭುವನ್ನು ಅವರು ಶಿಲುಬೆಗೇರಿಸುತ್ತಿರಲಿಲ್ಲ. [9]ಪವಿತ್ರಗ್ರಂಥದಲ್ಲಿ ಹೇಳಿರುವಂತೆ:

"ಕಣ್ಣಾವುದೂ ಕಂಡಿಲ್ಲ,
ಕಿವಿಯಾವುದೂ ಕೇಳಿಲ್ಲ.
ಮನುಜಕಲ್ಪನೆಗೂ ಎಟುಕಲಿಲ್ಲ.
ಅಂಥ ಅತಿಶಯಗಳನ್ನು ಸಜ್ಜುಗೊಳಿಸಿರುವನು,
ತನ್ನನ್ನೊಲಿದವರಿಗೆ ಪರಮದೇವನು."

10 ನಮಗಾದರೋ ದೇವರು ಪವಿತ್ರಾತ್ಮ ಅವರ ಮುಖಾಂತರ ಇವುಗಳನ್ನು ಪ್ರಕಟಿಸಿದ್ದಾರೆ. ಸಕಲವನ್ನು ಹಾಗೂ ದೇವರ ಅಂತರಾಳವನ್ನು ಅವಲೋಕಿಸುವವರು ಈ ಪವಿತ್ರಾತ್ಮರೇ. [11]ಮಾನವನ ಆಲೋಚನೆಗಳನ್ನು ಅವನ ಅಂತರಾತ್ಮವಲ್ಲದೆ ಮತ್ತಾರು ಬಲ್ಲರು? ಅಂತೆಯೇ, ದೇವರ ಆಲೋಚನೆಗಳನ್ನು ಪವಿತ್ರಾತ್ಮರಲ್ಲದೆ, ಬೇರೆ ಯಾರೂ ಅರಿಯಲಾರರು. [12]ನಾವಾದರೋ ಪ್ರಾಪಂಚಿಕ ಆತ್ಮವನ್ನು ಹೊಂದಿದವರಲ್ಲ. ದೇವರು ನಮಗೆ ದಯಪಾಲಿಸಿರುವ ವರಪ್ರಸಾದಗಳನ್ನು ಅರಿತುಕೊಳ್ಳುವಂತೆ ಮಾಡುವ ಪಾರಮಾರ್ಥಿಕ ಆತ್ಮವನ್ನು ಪಡೆದಿದ್ದೇವೆ.

13 ನಾವು ಇವುಗಳನ್ನು ಮಾನವ ಜ್ಞಾನ ಪ್ರೇರೇಪಿಸಿದ ಮಾತುಗಳಿಂದ ಹೇಳುವುದಿಲ್ಲ. ದೇವರ ಆತ್ಮದಿಂದ ಪ್ರೇರಿತವಾದ ಮಾತುಗಳಿಂದ ಹೇಳುತ್ತೇವೆ. ಹೀಗೆ ಆಧ್ಯಾತ್ಮಿಕ ಸತ್ಯಗಳನ್ನು, ಆಧ್ಯಾತ್ಮಿಕ ವ್ಯಕ್ತಿಗಳಿಗೆ ವಿವರಿಸುತ್ತೇವೆ. [14]ಭೌತಿಕ ಮನುಷ್ಯನು ದೇವರ ಆತ್ಮದ ವರಗಳನ್ನು ನಿರಾಕರಿಸುತ್ತಾನೆ. ಅವು ಅವನಿಗೆ ಹುಚ್ಚುತನವಾಗಿ ತೋರುತ್ತವೆ. ಅವುಗಳನ್ನು ಗ್ರಹಿಸಲು ಅವನಿಂದಾಗದು. ಏಕೆಂದರೆ, ಆಧ್ಯಾತ್ಮಿಕ ವಿವೇಚನೆಯಿಂದ ಮಾತ್ರ ಅವುಗಳನ್ನು ಅರಿಯಲು ಸಾಧ್ಯ. [15]ದೇವರ ಆತ್ಮವನ್ನು ಹೊಂದಿದವನು ಎಲ್ಲವನ್ನೂ ವಿಚಾರಣೆಮಾಡಿ ತಿಳಿದುಕೊಳ್ಳುತ್ತಾನೆ. ಅವನನ್ನು ಯಾರೂ ವಿಚಾರಣೆಗೆ ಗುರಿಮಾಡಲಾಗದು.

[16] "ಪ್ರಭುವಿನ ಮನಸ್ಸನ್ನರಿತವರಾರು?
ಪ್ರಭುವಿಗೆ ಉಪದೇಶಿಸುವವರಾರು?"

ಎಂದು ಲಿಖಿತವಾಗಿದೆ. ನಾವಾದರೋ, ಕ್ರಿಸ್ತಯೇಸುವಿನ ಮನೋಭಾವನೆಯುಳ್ಳವರು.

## ನರಪ್ರಾಣಿಗಳೋ? ನರಮಾನವರೋ?

**3** ಪ್ರಿಯ ಸಹೋದರರೇ, ದೇವರ ಆತ್ಮವನ್ನು ಪಡೆದವರೊಡನೆ ಮಾತನಾಡಿದಂತೆ ನಿಮ್ಮೊಡನೆ ನಾವು ಮಾತನಾಡಲಿಲ್ಲ. ಲೌಕಿಕರು ನೀವು; ಕ್ರಿಸ್ತಯೇಸುವಿನಲ್ಲಿ ಹಸುಗೂಸುಗಳು ನೀವು ಎಂದು ಭಾವಿಸಿ ನಿಮ್ಮೊಡನೆ ಮಾತನಾಡಬೇಕಾಯಿತು. [2]ನಾನು ನಿಮಗೆ ಹಾಲೂಡಿಸಿದೆನು; ಗಟ್ಟಿ ಆಹಾರವನ್ನು ಕೊಡಲಿಲ್ಲ. ಏಕೆಂದರೆ, ಅದನ್ನು ಜೀರ್ಣಿಸಿಕೊಳ್ಳಲು ನಿಮಗೆ ಶಕ್ತಿ ಇರಲಿಲ್ಲ. ಇಂದಿಗೂ ನೀವು ಶಕ್ತರಲ್ಲ. [3]ನೀವು ಇನ್ನೂ ಲೌಕಿಕರಂತೆ ಬಾಳುತ್ತಿದ್ದೀರಿ. ನಿಮ್ಮ ನಡುವೆ ದ್ವೇಷ-ಅಸೂಯೆ, ವಾದ-ವಿವಾದಗಳು ಪ್ರಬಲವಾಗಿದ್ದು ನೀವಿನ್ನೂ ಪ್ರಾಣಿಗಳಂತೆ ವರ್ತಿಸುತ್ತಿದ್ದೀರಲ್ಲವೆ? [4]ಒಬ್ಬನು, ನಾನು ಪೌಲನ ಕಡೆಯವನು; ಇನ್ನೊಬ್ಬನು, ನಾನು ಅಪೊಲೋಸನ ಕಡೆಯವನು, ಎಂದು ನಿಮ್ಮೊಳಗೆ ಕಿತ್ತಾಡುವ ನೀವು ಕೇವಲ ನರಪ್ರಾಣಿಗಳಲ್ಲದೆ ಮತ್ತೇನು?

## ದೇವರ ಸಹಕಾರ್ಮಿಕರು

5 ಅಪೊಲ್ಲೋಸನು ಯಾರು? ಪೌಲನು ಯಾರು? ನಿಮ್ಮನ್ನು ವಿಶ್ವಾಸಕ್ಕೆ ಕರೆತಂದ ದಾಸರು ನಾವಲ್ಲವೇ? ನಮ್ಮಲ್ಲಿ ಪ್ರತಿಯೊಬ್ಬನು ಪ್ರಭು ನಿಯಮಿಸುವ ಕಾರ್ಯವನ್ನು ನಿರ್ವಹಿಸುತ್ತವೆ. [6]ನಾನು ಸಸಿಯನ್ನು ನೆಟ್ಟೆನು; ಅಪೊಲ್ಲೋಸನು ನೀರೆರೆದನು; ಆದರೆ ಅದನ್ನು ಬೆಳೆಸಿದವರು ದೇವರು. [7]ಆದ್ದರಿಂದ ನೆಡುವವನಾಗಲಿ, ನೀರೆರೆಯುವವನಾಗಲಿ ಪ್ರಮುಖನಲ್ಲ; ಬೆಳವಣಿಗೆ ನೀಡುವ ದೇವರೇ ದೊಡ್ಡವರು. [8]ನೆಡುವವನೂ ನೀರೆರೆಯುವವನೂ ಇಬ್ಬರೂ ಅಗತ್ಯವಾಗಿ ಬೇಕಾದವರೇ ಅವನವನ ದುಡಿಮೆಗೆ ತಕ್ಕ ಹಾಗೆ ಪ್ರತಿಯೊಬ್ಬನೂ ಸಂಭಾವನೆ ಪಡೆಯುತ್ತಾನೆ. [9]ನಾವು ದೇವರ ಸಹಕಾರ್ಮಿಕರು. ನೀವು ದೇವರೆ ಸಾಗುವಳಿ ಮಾಡುವ ಹೊಲ; ಅವರೆ ನಿರ್ಮಿಸುತ್ತಿರುವ ಮಂದಿರ.

10 ದೇವರು ನನಗಿತ್ತ ವರದಾನಗಳಿಗೆ ಅನುಸಾರವಾಗಿ ನಾನು ಚತುರ ಶಿಲ್ಪಿಯಂತೆ ಅಸ್ತಿವಾರ ಹಾಕಿದೆ. ಇನ್ನೊಬ್ಬನು ಅದರ ಮೇಲೆ ಕಟ್ಟುತ್ತಿದ್ದಾನೆ. ಆದರೆ ಕಟ್ಟುವ ಪ್ರತಿಯೊಬ್ಬನು ತಾನು ಹೇಗೆ ಕಟ್ಟುತ್ತಿದ್ದಾನೆ ಎಂಬುದರ ಬಗ್ಗೆ ಎಚ್ಚರದಿಂದಿರಲಿ. [11]ಈಗಾಗಲೇ ಅಸ್ತಿವಾರ ಹಾಕಲಾಗಿದೆ. ಯೇಸುಕ್ರಿಸ್ತರೇ ಆ ಅಸ್ತಿವಾರ. ಇದಲ್ಲದೆ, ಬೇರೆ ಅಸ್ತಿವಾರವನ್ನು ಯಾರೂ ಹಾಕಲಾಗದು. [12]ಈ ಅಸ್ತಿವಾರದ ಮೇಲೆ ಕೆಲವರು ಚಿನ್ನ, ಬೆಳ್ಳಿ, ರತ್ನ – ಇವುಗಳನ್ನು ಉಪಯೋಗಿಸಿ ಕಟ್ಟುತ್ತಾರೆ. ಮತ್ತೆ ಕೆಲವರು ಹುಲ್ಲು, ಕಟ್ಟಿಗೆ, ಜೊಂಡು – ಇವುಗಳನ್ನು

ಬಳಸುತ್ತಾರೆ. [13]ಅವನವನ ಕೆಲಸದ ಗುಣವು ಕಡೆಯ ದಿನ ಬಟ್ಟಬಯಲಾಗುವುದು. ಯೇಸುಕ್ರಿಸ್ತರ ಆ ದಿನವು
ಬೆಂಕಿಯ ದಿನವಾಗಿ ಪ್ರಜ್ವಲಿಸುವುದು. ಪ್ರತಿಯೊಬ್ಬನ ಕೆಲಸವನ್ನು ಆ ಬೆಂಕಿ ಪರೀಕ್ಷಿಸುವುದು. [14]ಕಟ್ಟಡವು
ಸುಟ್ಟು ಹೋಗದೆ ಅಸ್ತಿವಾರದ ಮೇಲೆ ನೆಲೆಯಾಗಿ ನಿಂತರೆ ಕಟ್ಟಿದವನಿಗೆ ಸಂಭಾವನೆ ದೊರಕುತ್ತದೆ. [15]ಸುಟ್ಟು
ಹೋದರೆ ಅವನಿಗೇ ನಷ್ಟವಾಗುತ್ತದೆ. ಅವನಾದರೋ ಬೆಂಕಿಯಿಂದ ತಪ್ಪಿಸಿಕೊಂಡವನ ಹಾಗೆ ರಕ್ಷಣೆಯನ್ನು
ಹೊಂದುತ್ತಾನೆ.

16 ನೀವು ದೇವರ ಆಲಯವಾಗಿದ್ದೀರಿ. ದೇವರ ಆತ್ಮವು ನಿಮ್ಮಲ್ಲಿ ವಾಸಿಸುತ್ತದೆಂದು ನಿಮಗೆ ಚೆನ್ನಾಗಿ
ತಿಳಿದಿದೆ. [17]ಯಾವನಾದರೂ ದೇವಾಲಯವನ್ನು ನಾಶಮಾಡಿದರೆ ದೇವರು ಅವನನ್ನು ನಾಶಮಾಡುತ್ತಾರೆ.
ದೇವರ ಆಲಯವು ಪವಿತ್ರವಾದುದು. ನೀವೇ ಆ ಆಲಯ.

18 ಯಾರೂ ತನ್ನನ್ನು ತಾನೇ ವಂಚಿಸಿಕೊಳ್ಳದಿರಲಿ. ನಿಮ್ಮಲ್ಲಿ ಯಾರಾದರೂ ಈ ಲೋಕದ
ದೃಷ್ಟಿಯಲ್ಲಿ ತಾನು ಜಾಣನೆಂದು ಭಾವಿಸುವುದಾದರೆ ಅಂಥವನು ಮೊದಲು ಹುಚ್ಚನಂತಿರಲು ಕಲಿಯಲಿ.
ಆಗ ಅವನು ನಿಜವಾಗಿಯೂ ಜಾಣನಾಗುತ್ತಾನೆ. [19]ಇಹಲೋಕದ ಜಾಣತನವು ದೇವರ ದೃಷ್ಟಿಯಲ್ಲಿ
ಹುಚ್ಚುತನವೇ ಸರಿ. "ದೇವರು ಜ್ಞಾನಿಗಳನ್ನು ಅವರ ಜಾಲವುದಲ್ಲಿಯೇ ಸಿಕ್ಕಿಸುವರು" ಎಂದೂ [20]"ಜ್ಞಾನಿಗಳ
ಯೋಜನೆಗಳು ನಿಷ್ಫಲವೆಂಬುದು ಪ್ರಭುವಿಗೆ ತಿಳಿದಿದೆ" ಎಂದೂ ಲಿಖಿತವಾಗಿದೆಯಲ್ಲವೆ? [21]ಆದ್ದರಿಂದ
ಕೇವಲ ನರಮಾನವರನ್ನೇ ನೆಚ್ಚಿಕೊಂಡು ಯಾರೂ ಹೆಚ್ಚಳಪಡದಿರಲಿ. [22]ವಾಸ್ತವವಾಗಿ ಸಮಸ್ತವೂ ನಿಮ್ಮದೇ.
ಪೌಲ, ಅಪೊಲೋಸ್, ಕೇಫ – ಇವರಾಗಲಿ, ಅಥವಾ ವರ್ತಮಾನ, ಭವಿಷ್ಯತ್ಕಾಲಗಳಾಗಲಿ, ಇವೆಲ್ಲವೂ
ನಿಮ್ಮವೇ. [23]ಆದರೆ ನೀವು ಕ್ರಿಸ್ತ ಯೇಸುವಿಗೆ ಸೇರಿದವರು; ಕ್ರಿಸ್ತಯೇಸು ದೇವರಿಗೆ ಸೇರಿದವರು.

## ಪ್ರೇಷಿತರ ವರ್ತನೆ

**4** ನಾವು ಕ್ರಿಸ್ತಯೇಸುವಿನ ದಾಸರೆಂದೂ ದೇವರ ಸತ್ಯಾರ್ಥಗಳ ನಂಬಿಗಸ್ಥ ನಿರ್ವಾಹಕರೆಂದೂ ಜನರು
ನಮ್ಮನ್ನು ಪರಿಗಣಿಸಲಿ. [2]ನಿರ್ವಾಹಕರು ಪ್ರಾಮಾಣಿಕರಾಗಿರಬೇಕಾದುದು ಅತ್ಯವಶ್ಯ. [3]ನನ್ನ ವಿಷಯದಲ್ಲಿ
ಹೇಳುವುದಾದರೆ, ನಿಮ್ಮಿಂದಾಗಲಿ, ಮಾನವ ನಿಯಮಿತ ನ್ಯಾಯಾಲಯದಿಂದಾಗಲಿ, ನನ್ನ
ವಿಚಾರಣೆಯಾಗುವುದರ ಬಗ್ಗೆ ನನಗೆ ಕಿಂಚಿತ್ತೂ ಚಿಂತೆಯಿಲ್ಲ. ನನಗೆ ನಾನೇ ನ್ಯಾಯತೀರ್ಪು
ಮಾಡಿಕೊಳ್ಳುವುದೂ ಇಲ್ಲ. [4]ನನ್ನಲ್ಲಿ ದೋಷವಿದೆಯೆಂದು ನನ್ನ ಮನಸ್ಸಾಕ್ಷಿಗೆ ತೋರುವುದಿಲ್ಲ. ಆದರೂ
ನಾನು ನಿರ್ದೋಷಿಯೆಂದು ಹೇಳುವಂತಿಲ್ಲ. ನನ್ನ ನ್ಯಾಯನಿರ್ಣಯ ಮಾಡುವವರು ಪ್ರಭುವೇ. [5]ಅದೇ
ಮೇರೆಗೆ, ನೀವು ಸೂಕ್ತಕಾಲಕ್ಕೆ ಮುಂಚೆ ತೀರ್ಪುಮಾಡಬೇಡಿ; ಪ್ರಭುವಿನ ಪುನರಾಗಮನದವರೆಗೂ
ಕಾದುಕೊಂಡಿರಿ. ಕತ್ತಲಲ್ಲಿ ಗುಪ್ತವಾಗಿರುವುಗಳನ್ನು ಪ್ರಭುವು ಬೆಳಕಿಗೆ ತರುವರು; ಅಂತರಂಗದ
ಯೋಜನೆಗಳನ್ನು ಬಹಿರಂಗ ಪಡಿಸುವರು. ಆಗ ಪ್ರತಿಯೊಬ್ಬನಿಗೂ ತಕ್ಕ ಪ್ರಶಂಸೆ ದೇವರಿಂದಲೇ
ದೊರಕುವುದು.

6 ಸಹೋದರರೇ, ನಿಮ್ಮ ಪ್ರಯೋಜನಕ್ಕಾಗಿ ಇದೆಲ್ಲವನ್ನು ನನಗೂ ಅಪೊಲೋಸನಿಗೂ ಅನ್ವಯಿಸಿ
ಹೇಳಿದ್ದೇನೆ. ನೀವು ನಮ್ಮ ಆದರ್ಶವನ್ನು ಅನುಸರಿಸಬೇಕು. ಧರ್ಮಶಾಸ್ತ್ರದಲ್ಲಿ ಬರೆದಿರುವುದನ್ನು
ಮೀರಬಾರದು. ನಿಮ್ಮಲ್ಲಿ ಯಾರೂ ಒಬ್ಬನ ಪಕ್ಷವಹಿಸಿ ಜಂಬ ಕೊಚ್ಚಿಕೊಂಡು ಮತ್ತೊಬ್ಬನನ್ನು
ಕಡೆಗಣಿಸಬಾರದು. [7]ಇತರರಿಗಿಂತಲೂ ನಿನ್ನನ್ನು ಶ್ರೇಷ್ಠನನ್ನಾಗಿಸಿದವರು ಯಾರು? ದೇವರಿಂದ ಪಡೆಯದೆ
ಇರುವುದು ನಿನ್ನಲ್ಲಿ ಯಾವುದಾದರೂ ಇದೆಯೆ? ಹೀಗೆ ಎಲ್ಲವನ್ನೂ ದೇವರಿಂದ ಪಡೆದ ಮೇಲೆ,
ಪಡೆಯದವನಂತೆ ಜಂಬ ಕೊಚ್ಚಿಕೊಳ್ಳುವುದೇಕೆ? [8]ಈಗಾಗಲೇ ನೀವು ಸಂತೃಪ್ತರಾಗಿಬಿಟ್ಟಿರೋ? ಇಷ್ಟಕ್ಕೇ
ಶ್ರೀಮಂತರಾಗಿಬಿಟ್ಟಿರೋ? ನಮ್ಮನ್ನು ಬಿಟ್ಟು ನೀವು ಸಿಂಹಾಸನವೇರಿಬಿಟ್ಟಿರೋ? ನೀವು ನಿಜವಾಗಿಯೂ
ರಾಜರಾಗಿದ್ದರೆ ಚೆನ್ನಾಗಿರುತ್ತಿತ್ತು! ಆಗ ನಾವೂ ನಿಮ್ಮ ಜೊತೆ ರಾಜ್ಯ ಆಳಬಹುದಿತ್ತು! [9]ಬದಲಿಗೆ, ಪ್ರೇಷಿತರಾದ
ನಮ್ಮನ್ನು ದೇವರು ಕಟ್ಟಕಡೆಯವರನ್ನಾಗಿಸಿದ್ದಾರೆಂದು ತೋರುತ್ತದೆ. ಎಲ್ಲರ ಮುಂದೆ ಮರಣದಂಡನೆಗೆ
ಎಳೆದೊಯ್ಯಲಾಗುವವರಂತೆ ನಾವು ದೂತರಿಗೂ ಮಾನವರಿಗೂ ಇಡೀ ಜಗತ್ತಿಗೂ ಹಾಸ್ಯಾಸ್ಪದವಾದ

ನೋಟವಾಗಿದ್ದೇವೆ. 10ಕ್ರಿಸ್ತಯೇಸುವಿನ ನಿಮಿತ್ತ ನಾವಂತೂ ಹುಚ್ಚರು, ನೀವಾದರೋ ಕ್ರಿಸ್ತಯೇಸುವಿನಲ್ಲಿ
ಬುದ್ಧಿವಂತರು; ನಾವು ಬಲಹೀನರು, ನೀವು ಬಲಾಢ್ಯರು; ನಾವು ಅವಮಾನಿತರು, ನೀವು ಸನ್ಮಾನಿತರು! 11ಈ
ಗಳಿಗೆಯವರೆಗೂ ನಾವು ಹಸಿದು ಬಾಯಾರಿದವರು, ಬಟ್ಟೆಬರೆ ಇಲ್ಲದವರು, ಏಟುಪೆಟ್ಟು ತಿನ್ನುವವರು
ಮತ್ತು ಮನೆಮಠವಿಲ್ಲದೆ ಅಲೆಯುವವರು ಆಗಿದ್ದೇವೆ. 12ಸ್ವಂತ ದುಡಿಮೆಯಿಂದ ಜೀವಿಸುತ್ತೇವೆ; ನಮ್ಮನ್ನು
ಶಪಿಸುವವರನ್ನು ಆಶೀರ್ವದಿಸುತ್ತೇವೆ; ಹಿಂಸೆಗೊಳಗಾದಾಗ ಸಹಿಸಿಕೊಳ್ಳುತ್ತೇವೆ. 13ಅಪವಾದ
ಹೊರಿಸಿದವರೊಡನೆ ವಿನಯದಿಂದ ವರ್ತಿಸುತ್ತೇವೆ; ಪ್ರಪಂಚದ ಪಾಲಿಗೆ ನಾವೀಗ ಕಸಕ್ಕಿಂತಲೂ ಕಡೆ;
ವಿಶ್ವಕ್ಕೇ ಹೊಲಸು!

14 ನಿಮ್ಮನ್ನು ನಾಚಿಕೆಪಡಿಸುವುದಕ್ಕೆ ಇದನ್ನು ಬರೆಯಲಿಲ್ಲ. ನಮ್ಮ ನೆಚ್ಚಿನ ಮಕ್ಕಳಾದ ನಿಮ್ಮನ್ನು
ಎಚ್ಚರಿಸಲೆಂದು ಬರೆದೆನು. 15ನಿಮಗೆ ಕ್ರಿಸ್ತಯೇಸುವಿನಲ್ಲಿ ಸಾವಿರಾರು ಮಂದಿ ಶಿಕ್ಷಕರು ಇರಬಹುದು. ಆದರೆ
ನಿಮಗೆ ನಾನೊಬ್ಬನೇ ತಂದೆ. ಶುಭಸಂದೇಶದ ಮೂಲಕ ನಾನೇ ನಿಮ್ಮನ್ನು ಕ್ರಿಸ್ತಯೇಸುವಿನಲ್ಲಿ ಪಡೆದ ತಂದೆ.
16ಆದ್ದರಿಂದ ನನ್ನನ್ನು ಅನುಸರಿಸಿ ಬಾಳಬೇಕೆಂದು ನಿಮ್ಮನ್ನು ಒತ್ತಾಯಿಸುತ್ತೇನೆ. 17ಇದಕ್ಕಾಗಿಯೇ ಪ್ರಭುವಿನಲ್ಲಿ
ನನ್ನ ನೆಚ್ಚಿನ ಹಾಗೂ ಪ್ರಾಮಾಣಿಕ ಮಗನಾದ ತಿಮೊಥೇಯನನ್ನು ನಿಮ್ಮ ಬಳಿಗೆ ಕಳಿಸಿದ್ದೇನೆ. ಆತನು
ಕ್ರಿಸ್ತಯೇಸುವಿನಲ್ಲಿ ನನ್ನ ಬಾಳುವೆಯನ್ನು ಕುರಿತು ತಿಳಿಸುವನು; ನಾನು ಎಲ್ಲಡೆಯಲ್ಲೂ ಎಲ್ಲಾ
ಧರ್ಮಸಭೆಗಳಲ್ಲೂ ಬೋಧಿಸುತ್ತಿರುವುದನ್ನು ನಿಮ್ಮ ನೆನಪಿಗೆ ತರುವನು.

18 ಇನ್ನು ನಾನು ನಿಮ್ಮ ಬಳಿಗೆ ಬರುವುದಿಲ್ಲ ಎಂದು ಭಾವಿಸಿ ಕೆಲವರು ಅಹಂಕಾರಿಗಳಾಗಿ
ಮೆರೆಯುತ್ತಿದ್ದಾರೆಂದು ತಿಳಿದುಬಂದಿದೆ. 19ಪ್ರಭುವಿನ ಚಿತ್ತವಾದರೆ ನಾನು ಬೇಗನೆ ಬರುತ್ತೇನೆ. ಬಂದು,
ಅಹಂಕಾರಿಗಳು ಕೇವಲ ಮಾತಿನ ಮಲ್ಲರೋ ಅಥವಾ ಶಕ್ತಿವಂತರೋ ಎಂದು ಕಂಡುಹಿಡಿಯುತ್ತೇನೆ.
20ದೇವರ ಸಾಮ್ರಾಜ್ಯ ಮರುಳು ಮಾತಲ್ಲ, ಶಕ್ತಿಯ ಸಾಧನ. 21ಬೆತ್ತವನ್ನು ಹಿಡಿದು ಬಿಗಿಯಲು ಬರಲೋ?
ಅಥವಾ ಪ್ರೀತಿ ಸಹಾನುಭೂತಿಯಿಂದ ತುಂಬಿದವನಾಗಿ ಬರಲೋ? ನಿಮಗೆ ಯಾವುದು ಇಷ್ಟ?

## ದುರುಳನನ್ನು ದೂರಮಾಡಿ

**5** ಅನ್ಯಜನರಿಗೆ ಕೂಡ ಇಲ್ಲದಂಥ ದುರ್ನಡತೆ ನಿಮ್ಮಲ್ಲಿದೆಯೆಂಬುದಾಗಿ ವರದಿ ಬಂದಿದೆ. ನಿಮ್ಮಲ್ಲಿ ಒಬ್ಬನು
ತನ್ನ ತಂದೆಯ ಪತ್ನಿಯನ್ನೇ ಇಟ್ಟುಕೊಂಡಿದ್ದಾನಂತೆ. 2ಹೀಗಿರಲು, ನೀವು ಸೊಕ್ಕಿನಿಂದ ಮೆರೆಯಲು
ಕಾರಣವಾದರೂ ಎಲ್ಲಿದೆ? ಬದಲಿಗೆ, ನೀವು ವ್ಯಸನಪಟ್ಟು ಅವನನ್ನು ನಿಮ್ಮ ಸಭಾಕೂಟದಿಂದ
ಬಹಿಷ್ಕರಿಸಬೇಕಾಗಿತ್ತಲ್ಲವೆ? 3ನಾನು ಶಾರೀರಿಕವಾಗಿ ನಿಮ್ಮಿಂದ ದೂರವಿದ್ದರೂ ಆತ್ಮಿಕವಾಗಿ ನಿಮ್ಮ
ಹತ್ತಿರವಿದ್ದೇನೆ. ನಿಮ್ಮ ಸಂಗಡವೇ ಇರುವವನಂತೆ ಅವನಿಗೆ ಏನು ಮಾಡಬೇಕೆಂದು ಈಗಾಗಲೇ
ತೀರ್ಮಾನಿಸಿದ್ದೇನೆ. 4ಅದೇನೆಂದರೆ: ನೀವು ಸಭೆಸೇರಿ, ಪ್ರಭು ಯೇಸುವಿನ ಶಕ್ತಿಯ ಆಧಾರದ ಮೇಲೆ
ಅವನನ್ನು ಸೈತಾನನಿಗೆ ಒಪ್ಪಿಸಿಬಿಡಬೇಕು. ನಾನು ಆತ್ಮಿಕವಾಗಿ ನಿಮ್ಮ ಮಧ್ಯೆಯಿರುತ್ತೇನೆ. 5ಅವನ ದೇಹವು
ದಂಡನೆಗೊಳಗಾದರೂ ಅವನ ಆತ್ಮ ಪ್ರಭು ಯೇಸುವಿನ ದಿನದಂದು ಉದ್ಧಾರವಾಗುವಂತೆ ಹೀಗೆ
ಮಾಡಬೇಕು.

6 ನೀವು ಜಂಬ ಕೊಚ್ಚಿಕೊಳ್ಳುವುದು ತರವಲ್ಲ. ಒಂದಿಷ್ಟು ಹುಳಿ, ಹಿಟ್ಟನ್ನೆಲ್ಲಾ
ಹುದುಗೆಬ್ಬಿಸುತ್ತದೆಂಬುದನ್ನು ನೀವು ಚೆನ್ನಾಗಿ ಬಲ್ಲಿರಿ. 7ನೀವು ಹುಳಿಯಿಲ್ಲದ ಕಣಕವಾಗಿದ್ದೀರಿ. ಅಪ್ಪಟ
ರೊಟ್ಟಿಯಾಗುವಂತೆ ಹುಳಿಯನ್ನು ತೆಗೆದು ಹಾಕಿರಿ. ಏಕೆಂದರೆ, ಪಾಸ್ಕ ಯಜ್ಞದ ಕುರಿಮರಿಯಾದ ಕ್ರಿಸ್ತಯೇಸು
ಬಲಿಯಾಗಿದ್ದಾರೆ. 8ಆದಕಾರಣ ನಾವು ದುಷ್ಟತನ, ಕೆಡುಕುತನವೆಂಬ ಹುಳಿಹಿಟ್ಟನ್ನು ವರ್ಜಿಸೋಣ.
ಪರಿಶುದ್ಧತೆ ಮತ್ತು ಸತ್ಯತೆ ಎಂಬ ಹುಳಿಯಿಲ್ಲದ ಹೊಸ ರೊಟ್ಟಿಯನ್ನು ತಿಂದು ಪಾಸ್ಕ ಹಬ್ಬವನ್ನು
ಆಚರಿಸೋಣ.

9 ದುರಾಚಾರಿಗಳ ಸಹವಾಸ ನಿಮಗೆ ಸಲ್ಲದು, ಎಂದು ನಾನು ಬರೆದಿದ್ದೆ. 10ಅಂದರೆ, ಈ
ಲೋಕದಲ್ಲಿರುವ ದುರಾಚಾರಿಗಳು, ಲೋಭಿಗಳು, ಸುಲಿಗೆಗಾರರು, ವಿಗ್ರಹಾರಾಧಕರು – ಇಂಥವರ

ಸಹವಾಸವನ್ನು ಬಿಟ್ಟುಬಿಡಬೇಕೆಂಬುದು ನನ್ನ ಮಾತಿನ ಅರ್ಥವಲ್ಲ. ಹಾಗೆ ಮಾಡಿದರೆ ನೀವು ಈ ಲೋಕವನ್ನೇ ಬಿಟ್ಟು ಹೋಗಬೇಕಾದೀತು. [11]ಆದರೆ ತಾನು ಕ್ರೈಸ್ತ ಸಹೋದರ ಎನಿಸಿಕೊಂಡು, ದುರಾಚಾರಿಯಾಗಿಯೋ ಲೋಭಿಯಾಗಿಯೋ ವಿಗ್ರಹಾರಾಧಕನಾಗಿಯೋ ಪರನಿಂದಕನಾಗಿಯೋ ಕುಡುಕನಾಗಿಯೋ ಸುಲಿಗೆಗಾರನಾಗಿಯೋ ಯಾರಾದರೂ ಇದ್ದರೆ, ಅಂಥವನ ಸಹವಾಸ ನಿಮಗೆ ಸಲ್ಲದು. ಇದು ನನ್ನ ಪತ್ರದ ಉದ್ದೇಶ.

12–[13]ಧರ್ಮಸಭೆಗೆ ಸೇರದೆ ಇರುವವರ ಬಗ್ಗೆ ತೀರ್ಪುಮಾಡಬೇಕಾದುದು ನನ್ನ ಕೆಲಸವಲ್ಲ. ಅವರನ್ನು ಕುರಿತು ದೇವರೇ ತೀರ್ಪು ನೀಡುವರು. ನೀವು ತೀರ್ಪುಮಾಡಬೇಕಾದುದು ಧರ್ಮಸಭೆಗೆ ಸೇರಿದವರನ್ನು ಕುರಿತು. ದುರುಳನನ್ನು ನಿಮ್ಮಿಂದ ದೂರತಳ್ಳಿರಿ.

## ನ್ಯಾಯಾಲಯಕ್ಕೂ ದೇವಾಲಯಕ್ಕೂ ನಂಟು ಸಲ್ಲದು

**6** ನಿಮ್ಮಲ್ಲಿ ಒಬ್ಬನಿಗೆ ಮತ್ತೊಬ್ಬನ ಮೇಲೆ ವ್ಯಾಜ್ಯವಿದ್ದರೆ ನ್ಯಾಯವಿಚಾರಣೆಗೆ ದೇವಜನರ ಮುಂದೆ ಹೋಗದೆ, ಅನ್ಯಜನರ ಮುಂದೆ ಹೋಗುವಷ್ಟು ಸೊಕ್ಕು ನಿಮಗೆಲ್ಲಿಂದ ಬಂದಿತು? [2]ದೇವಜನರು ಈ
ಲೋಕಕ್ಕೆ ನ್ಯಾಯತೀರ್ಪು ಮಾಡುತ್ತಾರೆಂದು ನಿಮಗೆ ತಿಳಿಯದೋ? ಲೋಕವೇ ನಿಮ್ಮಿಂದ ತೀರ್ಪು ಪಡೆಯಬೇಕಾಗಿರುವಲ್ಲಿ ಸಣ್ಣಪುಟ್ಟ ವಿಷಯಗಳನ್ನು ತೀರ್ಮಾನಿಸಿಕೊಳ್ಳಲು ನೀವು ಅಸಮರ್ಥರೋ?
[3]ದೇವದೂತರಿಗೂ ನಾವು ನ್ಯಾಯತೀರ್ಪು ಮಾಡುವವೆಂದು ನಿಮಗೆ ತಿಳಿಯದೋ? ಹೀಗಿರುವಲ್ಲಿ, ಈ ಜೀವನದ ಸಮಸ್ಯೆಗಳನ್ನು ಕುರಿತು ನ್ಯಾಯತೀರ್ಪು ಮಾಡುವುದು ಎಷ್ಟೋ ಸುಲಭವಲ್ಲವೇ? [4]ಇಂಥ
ವಿಷಯಗಳು ತಲೆದೋರಿದಾಗ ಧರ್ಮಸಭೆಯಿಂದ ಮಾನ್ಯತೆ ಪಡೆಯದವರನ್ನು ಏಕೆ ನ್ಯಾಯತೀರ್ಪುಗಾರನನ್ನಾಗಿ ಮಾಡುತ್ತೀರಿ? [5]ಇದು ನಿಮಗೆ ನಾಚಿಕೆಗೇಡು! ಸಹೋದರರ ವ್ಯಾಜ್ಯವನ್ನು
ತೀರ್ಮಾನಿಸಬಲ್ಲ ಜಾಣನು ನಿಮ್ಮಲ್ಲಿ ಒಬ್ಬನೂ ಇಲ್ಲವೇ? [6]ಸಹೋದರನು ಸಹೋದರನ ವಿರುದ್ಧ
ನ್ಯಾಯಾಲಯಕ್ಕೆ ಹೋಗುವುದು, ಅದೂ ಅವಿಶ್ವಾಸಿಗಳ ಮುಂದೆ ಹೋಗುವುದು ಸರಿಯೇ?

7 ನಿಮ್ಮ ನಿಮ್ಮಲ್ಲಿರುವ ವ್ಯಾಜ್ಯಗಳೇ ನಿಮ್ಮ ಸೋಲಿನ ಸೂಚನೆಗಳು. ಅದಕ್ಕಿಂತ ಅನ್ಯಾಯವನ್ನು ಸಹಿಸಿಕೊಳ್ಳುವುದು ಒಳ್ಳೆಯದಲ್ಲವೇ? ಸುಲಿಗೆಗೆ ತುತ್ತಾದರೂ ಸಾವಧಾನದಿಂದ ಇರುವುದು ಒಳಿತಲ್ಲವೇ?
[8]ಅದಕ್ಕೆ ಬದಲು ನೀವೇ ಅನ್ಯಾಯಮಾಡುತ್ತೀರಿ; ನೀವೇ ಸುಲಿಗೆಮಾಡುತ್ತೀರಿ; ಅದೂ ಸಹೋದರರಿಗೆ ಹೀಗೆ ಮಾಡುತ್ತೀರಿ. [9]ಅಧರ್ಮಿಗಳು ದೇವರ ಸಾಮ್ರಾಜ್ಯಕ್ಕೆ ಬಾಧ್ಯರಲ್ಲವೆಂದು ನೀವು ಬಲ್ಲಿರಿ. ನಿಮ್ಮನ್ನು ನೀವೇ ವಂಚಿಸಿಕೊಳ್ಳಬೇಡಿ. ದುರಾಚಾರಿಗಳು, ವಿಗ್ರಹಾರಾಧಕರು, ವ್ಯಭಿಚಾರಿಗಳು, ಸಲಿಂಗಕಾಮಿಗಳು, [10]ಕಳ್ಳರು,
ಲೋಭಿಗಳು, ಕುಡುಕರು, ಪರನಿಂದಕರು, ಸುಲಿಗೆಗಾರರು – ಇವರಾರೂ ದೇವರ ಸಾಮ್ರಾಜ್ಯಕ್ಕೆ ಬಾಧ್ಯರಲ್ಲ.
[11]ಹಿಂದೆ ನಿಮ್ಮಲ್ಲಿ ಕೆಲವರು ಅಂಥವರಾಗಿದ್ದಿರಿ. ಆದರೆ ಈಗ ಪ್ರಭು ಯೇಸುಕ್ರಿಸ್ತರ ನಾಮದಲ್ಲಿ ಮತ್ತು ದೇವರಾತ್ಮನಲ್ಲಿ ನೀವು ಶುದ್ಧರಾಗಿದ್ದೀರಿ, ಪುನೀತರಾಗಿದ್ದೀರಿ ಹಾಗೂ ದೇವರೊಡನೆ ಸತ್ಸಂಬಂಧ ಹೊಂದಿದ್ದೀರಿ.

## 'ದೇಹವೇ ದೇಗುಲವಯ್ಯಾ'

12 "ಏನನ್ನು ಮಾಡಲೂ ನನಗೆ ಸ್ವಾತಂತ್ರ್ಯ ಇದೆ," ಎಂದು ಹೇಳುವುದುಂಟು. ಆದರೆ ಎಲ್ಲವೂ ನನಗೆ ಪ್ರಯೋಜನಕರವಲ್ಲ. ಏನನ್ನು ಮಾಡಲೂ ನನಗೆ ಸ್ವಾತಂತ್ರ್ಯವಿದೆ. ಆದರೆ ನಾನು ಯಾವುದಕ್ಕೂ ಗುಲಾಮನಲ್ಲ. [13]"ಊಟ ಹೊಟ್ಟೆಗಾಗಿ, ಹೊಟ್ಟೆ ಊಟಕ್ಕಾಗಿ," ಎಂದು ಹೇಳುವುದುಂಟು. ದೇವರು ಎರಡನ್ನೂ ನಾಶಗೊಳಿಸುವರು. ಆದರೆ ದೇಹವಿರುವುದು ದುರಾಚಾರಕ್ಕಲ್ಲ; ಪ್ರಭುವಿನ ಸೇವೆಗಾಗಿ. ಪ್ರಭುವೇ ದೇಹದ ಪರಿಪಾಲಕ. [14]ಪ್ರಭುವನ್ನು ಪುನರುತ್ಥಾನಗೊಳಿಸಿದ ದೇವರು ನಮ್ಮನ್ನೂ ತಮ್ಮ ಪರಾಕ್ರಮದಿಂದ ಎಬ್ಬಿಸುವರು.

15 ನಿಮ್ಮ ದೇಹಗಳು ಕ್ರಿಸ್ತಯೇಸುವಿನ ಅಂಗಗಳೆಂದು ನಿಮಗೆ ತಿಳಿಯದೇ? ಹಾಗಾದರೆ ನಾನು ಕ್ರಿಸ್ತಯೇಸುವಿನ ಅಂಗಗಳನ್ನು ತೆಗೆದು ವೇಶ್ಯೆಯ ಅಂಗಗಳನ್ನಾಗಿ ಮಾಡಬಹುದೇ? ಎಂದಿಗೂ ಇಲ್ಲ.
[16]"ಇಬ್ಬರೂ ಒಂದೇ ಶರೀರವಾಗುತ್ತಾರೆ" ಎಂದು ಬರೆಯಲಾಗಿದೆ. ವೇಶ್ಯೆಯ ಸಂಸರ್ಗ ಮಾಡುವವನು
ಅವಳೊಂದಿಗೆ ಒಂದೇ ದೇಹವಾಗುತ್ತಾನೆ, ಎಂದು ನಿಮಗೆ ತಿಳಿಯದೇ? [17]ಆದರೆ ಪ್ರಭುವಿನ
ಅನ್ಯೋನ್ಯತೆಯಲ್ಲಿ ಇರುವವನು ಅವರೊಂದಿಗೆ ಆಧ್ಯಾತ್ಮಿಕವಾಗಿ ಒಂದಾಗಿರುತ್ತಾನೆ. [18]ವ್ಯಭಿಚಾರದಿಂದ ದೂರ
ಸರಿಯಿರಿ. ಮಾನವನು ಮಾಡುವ ಇತರ ಪಾಪಗಳು ದೇಹಕ್ಕೆ ಬಾಹಿರವಾದುವುಗಳು. ವ್ಯಭಿಚಾರ
ಮಾಡುವಾತನು ತನ್ನ ದೇಹಕ್ಕೆ ದ್ರೋಹ ಬಗೆಯುತ್ತಾನೆ. [19]ದೇವರು ನಿಮಗೆ ಅನುಗ್ರಹಿಸಿರುವ ಪವಿತ್ರಾತ್ಮರಿಗೆ
ನಿಮ್ಮ ದೇಹ ಗರ್ಭಗುಡಿಯಾಗಿದೆ; ಆ ಪವಿತ್ರಾತ್ಮ ನಿಮ್ಮಲ್ಲಿ ವಾಸಮಾಡುತ್ತಿದ್ದಾರೆ ಎಂಬುದು ನಿಮಗೆ
ಗೊತ್ತಿಲ್ಲವೇ? ನೀವು ನಿಮ್ಮ ಸ್ವಂತ ಸೊತ್ತಲ್ಲ. [20]ಏಕೆಂದರೆ, ನೀವು ಕ್ರಯಕ್ಕೆ ಕೊಳ್ಳಲಾದವರು. ಆದ್ದರಿಂದ
ನಿಮ್ಮ ದೇಹದಲ್ಲಿ ಆ ದೇವರ ಮಹಿಮೆ ಬೆಳಗುವಂತೆ ಮಾಡಿರಿ.

**ದಾಂಪತ್ಯ ಧರ್ಮ**

**7** ನೀವು ಬರೆದು ಕೇಳಿರುವ ವಿಷಯಗಳ ಬಗ್ಗೆ ನಾನು ಹೇಳುವುದೇನೆಂದರೆ: ಒಬ್ಬ ವ್ಯಕ್ತಿ ಸ್ತ್ರೀಯೊಡನೆ
ಲೈಂಗಿಕ ಸಂಪರ್ಕವನ್ನು ಇಟ್ಟುಕೊಳ್ಳದಿರುವುದು ಒಳ್ಳೆಯದು. [2]ಲೈಂಗಿಕ ಪ್ರಲೋಭನೆಗಳು
ಪ್ರಬಲವಾಗಿರುವುದರಿಂದ ಪ್ರತಿಯೊಬ್ಬನಿಗೂ ಸ್ವಂತ ಸತಿ ಇರಲಿ, ಪ್ರತಿಯೊಬ್ಬಳಿಗೂ ಸ್ವಂತ ಪತಿ ಇರಲಿ.
[3]ಪತಿಯಾದವನು ತನ್ನ ಸತಿಗೆ ಸಲ್ಲತಕ್ಕ ದಾಂಪತ್ಯ ಕರ್ತವ್ಯಗಳನ್ನು ನೆರವೇರಿಸಲಿ. ಅಂತೆಯೇ,
ಸತಿಯಾದವಳು ತನ್ನ ಪತಿಗೆ ಸಲ್ಲತಕ್ಕ ದಾಂಪತ್ಯ ಕರ್ತವ್ಯಗಳನ್ನು ನೆರವೇರಿಸಲಿ. [4]ಸತಿಗೆ ತನ್ನ ದೇಹದ
ಮೇಲೆ ಅಧಿಕಾರವಿಲ್ಲ. ಆದರೆ ಪತಿಗೆ ಆ ಅಧಿಕಾರವಿದೆ. ಪತಿಗೆ ತನ್ನ ದೇಹದ ಮೇಲೆ ಅಧಿಕಾರವಿಲ್ಲ. ಆದರೆ
ಸತಿಗೆ ಆ ಅಧಿಕಾರವಿದೆ. [5]ಆದುದರಿಂದ ಸತಿಪತಿಯರು ಒಬ್ಬರಿಗೊಬ್ಬರು ದಾಂಪತ್ಯ ಕರ್ತವ್ಯಗಳನ್ನು
ನೆರವೇರಿಸಲು ನಿರಾಕರಿಸಬಾರದು. ಧ್ಯಾನ, ಪ್ರಾರ್ಥನೆಗಳಲ್ಲಿ ನಿರತರಾಗಿರಲು, ಸ್ವಲ್ಪಕಾಲ ಒಬ್ಬರನ್ನೊಬ್ಬರು
ಅಗಲಿರಬಹುದು. ಆದರೆ ಅದಕ್ಕೆ ಪರಸ್ಪರ ಸಮ್ಮತಿ ಇರಬೇಕು. ಅನಂತರ ಒಂದುಗೂಡಬೇಕು. ಇಲ್ಲದೆ
ಹೋದರೆ, ನಿಮ್ಮಲ್ಲಿ ಸಂಯಮ ಇಲ್ಲದಿರುವುದನ್ನು ಕಂಡು ಸೈತಾನನು ಪಾಪಕ್ಕೆ ಪ್ರಚೋದಿಸಬಹುದು.

6 ಇದು ನನ್ನ ಆಜ್ಞೆಯಲ್ಲ, ಅನುಮತಿಯಷ್ಟೆ. [7]ಎಲ್ಲರೂ ನಾನಿರುವಂತೆ ಇರಬೇಕೆಂಬುದು ನನ್ನ
ಅಭಿಲಾಷೆ. ಆದರೆ ದೇವರು ಪ್ರತಿಯೊಬ್ಬನಿಗೂ ವಿಶಿಷ್ಟ ವರವನ್ನು ದಯಪಾಲಿಸಿದ್ದಾರೆ. ಒಬ್ಬನಿಗೆ ಒಂದು ವರವಾದರೆ, ಮತ್ತೊಬ್ಬನಿಗೆ ಇನ್ನೊಂದು ವರವುಂಟು.

8 ಅವಿವಾಹಿತರಿಗೂ ವಿಧವೆಯರಿಗೂ ನನ್ನ ಬುದ್ಧಿಮಾತು ಯಾವುದೆಂದರೆ: ನಾನಿರುವಂತೆಯೇ
ಇರುವುದು ಅವರಿಗೆ ಒಳ್ಳೆಯದು. [9]ಅವರಿಗೆ ಸಂಯಮ ಇಲ್ಲದಿದ್ದರೆ ಮದುವೆ ಮಾಡಿಕೊಳ್ಳಲಿ.
ಕಾಮತಾಪದಿಂದ ಬೆಂದು ಹೋಗುವುದಕ್ಕಿಂತಲೂ ಮದುವೆ ಮಾಡಿಕೊಳ್ಳುವುದೇ ಲೇಸು.

10 ವಿವಾಹಿತರಿಗೆ ನನ್ನದೊಂದು ಆಜ್ಞೆ: ನಿಜಕ್ಕೂ ಇದು ನನ್ನದಲ್ಲ, ಪ್ರಭುವಿನ ಆಜ್ಞೆ, ಸತಿಯು ತನ್ನ
ಪತಿಯನ್ನು ಬಿಟ್ಟಗಲದಿರಲಿ. [11]ಒಂದು ವೇಳೆ ಅಗಲಿದರೆ ಮತ್ತೆ ಮದುವೆಯಾಗದಿರಲಿ. ಇಲ್ಲವೆ, ತನ್ನ
ಪತಿಯೊಂದಿಗೆ ಸಂಧಾನ ಮಾಡಿಕೊಳ್ಳಲಿ. ಅಂತೆಯೇ ಪತಿಯಾದವನು ತನ್ನ ಸತಿಯನ್ನು ಬಿಟ್ಟುಬಿಡದಿರಲಿ.

12 ಮಿಕ್ಕವರಿಗೆ ನಾನು ಹೇಳುವುದೇನೆಂದರೆ: ಇದು ನನ್ನ ಮಾತು, ಪ್ರಭುವಿನದಲ್ಲ: ಒಬ್ಬ
ಸಹೋದರನಿಗೆ ಕ್ರೈಸ್ತ ವಿಶ್ವಾಸಿಯಲ್ಲದ ಸತಿ ಇದ್ದರೆ, ಆಕೆ ಅವನೊಡನೆ ದಾಂಪತ್ಯ ಜೀವನ ನಡೆಸಲು
ಒಪ್ಪಿದರೆ, ಆಕೆಯನ್ನು ಬಿಟ್ಟುಬಿಡಬಾರದು. [13]ಹಾಗೆಯೇ ಒಬ್ಬ ಕ್ರೈಸ್ತ ಸಹೋದರಿಗೆ ಕ್ರೈಸ್ತ ವಿಶ್ವಾಸಿಯಲ್ಲದ
ಪತಿ ಇದ್ದು, ಅವನು ಆಕೆಯೊಂದಿಗೆ ದಾಂಪತ್ಯಜೀವನ ನಡೆಸಲು ಒಪ್ಪಿದರೆ, ಆಕೆ ಅವನನ್ನು
ಬಿಟ್ಟುಬಿಡಬಾರದು. [14]ಏಕೆಂದರೆ, ಕ್ರೈಸ್ತವಿಶ್ವಾಸಿಯಾದ ಸತಿಯ ಮುಖಾಂತರ ಪತಿ ದೇವಜನರೊಂದಿಗೆ
ಸಂಬಂಧ ಪಡೆಯುತ್ತಾನೆ. ಅಂತೆಯೇ ಕ್ರೈಸ್ತ ವಿಶ್ವಾಸಿಯಾದ ಪತಿಯ ಮುಖಾಂತರ ಸತಿ ದೇವಜನರೊಂದಿಗೆ
ಸಂಬಂಧ ಪಡೆಯುತ್ತಾಳೆ. ಇಲ್ಲದಿದ್ದರೆ ನಿಮ್ಮ ಮಕ್ಕಳು ಅಪವಿತ್ರರಾಗುತ್ತಿದ್ದರು. ಈಗಲಾದರೋ ಅವರು

ದೇವಜನರೊಂದಿಗೆ ಸಂಬಂಧ ಉಳ್ಳವರಾಗಿದ್ದಾರೆ. [15]ಒಂದು ವೇಳೆ, ವಿಶ್ವಾಸವಿಲ್ಲದ ಸತಿಯಾಗಲಿ,
ಪತಿಯಾಗಲಿ ಬೇರ್ಪಟ್ಟು ಹೋಗಬೇಕೆಂದಿದ್ದರೆ ಹೋಗಲಿ. ಇಂಥ ಸಂದರ್ಭಗಳಲ್ಲಿ ಕ್ರೈಸ್ತ ಸಹೋದರನು,
ಇಲ್ಲವೆ ಸಹೋದರಿಯು ವಿವಾಹ ಬಂಧನದಿಂದ ವಿಮುಕ್ತರಾಗುತ್ತಾರೆ. ಏಕೆಂದರೆ, ದೇವರು ನಿಮ್ಮನ್ನು ಶಾಂತಿ
ಸಮಾಧಾನದಿಂದ ಬಾಳಲು ಕರೆದಿದ್ದಾರೆ. [16]ಅದೂ ಅಲ್ಲದೆ ಸ್ತ್ರೀಯೇ, ಕ್ರೈಸ್ತ ವಿಶ್ವಾಸಿಯಲ್ಲದ ನಿನ್ನ ಪತಿಯನ್ನು
ಉದ್ಧಾರ ಮಾಡುವೆಯೆಂದು ಹೇಗೆ ಹೇಳಬಲ್ಲೆ? ಪುರುಷನೇ, ಕ್ರೈಸ್ತವಿಶ್ವಾಸಿಯಲ್ಲದ ನಿನ್ನ ಸತಿಯನ್ನು
ಉದ್ಧಾರ ಮಾಡುವೆಯೆಂದು ಹೇಗೆ ಹೇಳಬಲ್ಲೆ?

17 ದೇವರ ಕರೆಗೆ ಮತ್ತು ಪ್ರಭು ನೀಡಿರುವ ವರದಾನಗಳಿಗೆ ಅನುಗುಣವಾಗಿ ಪ್ರತಿಯೊಬ್ಬನೂ
ಬಾಳುವೆ ನಡೆಸಲಿ. ಎಲ್ಲ ಸಭೆಗಳಿಗೂ ನಾನಿದನ್ನೇ ವಿಧಿಸಿದ್ದೇನೆ. [18]ಸುನ್ನತಿ ಮಾಡಿಸಿಕೊಂಡವನು ದೇವರ
ಕರೆಹೊಂದಿದ್ದರೆ ಅವನು ಸುನ್ನತಿ ಮಾಡಿಸಿಕೊಂಡದ್ದಕ್ಕಾಗಿ ಚಿಂತಿಸಬೇಕಾಗಿಲ್ಲ. ಸುನ್ನತಿ ಮಾಡಿಸಿಕೊಳ್ಳದವನು
ದೇವರ ಕರೆ ಹೊಂದಿದ್ದರೆ ಅವನು ಸುನ್ನತಿ ಮಾಡಿಸಿಕೊಳ್ಳುವ ಅವಶ್ಯಕತೆಯಿಲ್ಲ. [19]ಸುನ್ನತಿ
ಮಾಡಿಸಿಕೊಳ್ಳುವುದೋ ಅಥವಾ ಮಾಡಿಸಿಕೊಳ್ಳದಿರುವುದೋ ಮುಖ್ಯವಲ್ಲ, ದೇವರ ಆಜ್ಞೆಗಳಿಗೆ
ವಿಧೇಯನಾಗಿರುವುದೇ ಮುಖ್ಯ. [20]ದೇವರು ಕರೆದಾಗ ಒಬ್ಬನು ಯಾವ ಸ್ಥಿತಿಯಲ್ಲಿದ್ದನೋ ಅದೇ ಸ್ಥಿತಿಯಲ್ಲಿ
ಮುಂದುವರಿಯಲಿ. [21]ದೇವರು ಕರೆದಾಗ ನೀನು ದಾಸ್ಯದಲ್ಲಿದ್ದೆಯೋ? ಚಿಂತೆಯಿಲ್ಲ. ಆದರೆ ಸ್ವತಂತ್ರನಾಗುವ
ಅವಕಾಶ ದೊರೆತರೆ ಅದನ್ನು ಬಿಡಬೇಡ. [22]ಪ್ರಭುವಿನಿಂದ ಕರೆಹೊಂದಿದವನು ದಾಸನಾಗಿದ್ದರೂ
ಪ್ರಭುವಿನಲ್ಲಿ ಅವನು ಸ್ವತಂತ್ರನೆ. ಅದೇ ಮೇರೆಗೆ ಸ್ವತಂತ್ರನಾದವನು ಕ್ರಿಸ್ತಯೇಸುವಿನಿಂದ ಕರೆಹೊಂದಿದ್ದರೆ
ಅವನು ಕ್ರಿಸ್ತಯೇಸುವಿನ ದಾಸನೇ ಆಗುತ್ತಾನೆ. [23]ನಿಮ್ಮನ್ನು ಕ್ರಯಕ್ಕೆ ಕೊಳ್ಳಲಾಗಿದೆ. ಆದ್ದರಿಂದ ಮಾನವರಿಗೆ
ದಾಸರಾಗಬೇಡಿ. [24]ಪ್ರಿಯ ಸಹೋದರರೇ, ದೇವರು ಕರೆದಾಗ ಒಬ್ಬನು ಯಾವ ಸ್ಥಿತಿಯಲ್ಲಿ ಇದ್ದನೋ
ಅದೇ ಸ್ಥಿತಿಯಲ್ಲಿ ದೇವರೊಂದಿಗೆ ಮುನ್ನಡೆಯಲಿ.

## ಬ್ರಹ್ಮಚರ್ಯೆಯ ಧರ್ಮ

25 ಅವಿವಾಹಿತರ ಬಗ್ಗೆ ಪ್ರಭುವಿನಿಂದ ಬಂದ ಕಟ್ಟಳೆ ಯಾವುದೂ ನನ್ನಲ್ಲಿಲ್ಲ. ಪ್ರಭುವಿನ
ಕೃಪೆಯಿಂದ ನಂಬಿಕೆಗೆ ಅರ್ಹನಾದ ವ್ಯಕ್ತಿಯಂತೆ ನನ್ನ ಅಭಿಪ್ರಾಯಗಳನ್ನು ನಿಮ್ಮ ಮುಂದೆ ಇಡುತ್ತೇನೆ.
[26]ಇಂದಿನ ಸಂದಿಗ್ಧ ಪರಿಸ್ಥಿತಿಯಲ್ಲಿ ಒಬ್ಬನು ತಾನು ಇದ್ದ ಸ್ಥಿತಿಯಲ್ಲೇ ಇರುವುದು ಉತ್ತಮವೆಂದು
ಭಾವಿಸುತ್ತೇನೆ. [27]ನಿನಗೆ ವಿವಾಹವಾಗಿದೆಯೋ? ವಿವಾಹ ವಿಚ್ಛೇದನಕ್ಕೆ ಯತ್ನಿಸಬೇಡ. ನೀನು
ಅವಿವಾಹಿತನೋ? ವಿವಾಹವಾಗಲು ಅವಸರಪಡಬೇಡ. [28]ಹಾಗೇನಾದರೂ ನೀನು ವಿವಾಹ
ಮಾಡಿಕೊಂಡರೆ ಅದು ಪಾಪವಲ್ಲ. ಅಂತೆಯೇ, ಅವಿವಾಹಿತ ಸ್ತ್ರೀಯೊಬ್ಬಳು ವಿವಾಹ ಮಾಡಿಕೊಂಡರೆ
ಅದು ಪಾಪವಲ್ಲ. ಆದರೆ ದಂಪತಿಗಳಿಗೆ ತಾಪತ್ರಯಗಳು ಅನೇಕ. ಇವುಗಳು ನಿಮ್ಮನ್ನು
ಬಾಧಿಸದಿರಲೆಂಬುದೇ ನನ್ನ ಹಾರೈಕೆ.

29 ಪ್ರಿಯ ಸಹೋದರರೇ, ನನ್ನ ಅಭಿಪ್ರಾಯ ಇದು: ಉಳಿದಿರುವ ಕಾಲವು ಕೊಂಚ ಮಾತ್ರ.
ಆದ್ದರಿಂದ ಮದುವೆಯಾದವರು ಮದುವೆಯಾಗದವರೋ ಎಂಬಂತೆ ನಡೆದುಕೊಳ್ಳಲಿ. [30]ದುಃಖಿತರು
ದುಃಖವಿಲ್ಲದವರಂತೆ, ಸಂತೋಷಭರಿತರು ಸಂತೋಷರಹಿತರಂತೆ ಹಾಗು ಕೊಂಡುಕೊಳ್ಳುವವರು
ಕೊಂಡದ್ದು ತಮ್ಮದಲ್ಲವೋ ಎಂಬಂತೆ ನಡೆದುಕೊಳ್ಳಲಿ. [31]ಲೋಕದ ವ್ಯವಹಾರದಲ್ಲಿ ಇರುವವರು
ಅದರಲ್ಲಿಯೇ ತಲ್ಲೀನರಾಗದಿರಲಿ. ಏಕೆಂದರೆ, ಲೋಕದ ರೂಪರೇಷೆಗಳು ಗತಿಸಿ ಹೋಗುತ್ತವೆ.

32 ನೀವು ಚಿಂತೆಯಿಲ್ಲದೆ ಇರಬೇಕೆಂಬುದೇ ನನ್ನ ಇಷ್ಟ. ಮದುವೆಯಾಗದವನು ಪ್ರಭುವಿನ
ಸೇವೆಯಲ್ಲಿ ತತ್ಪರನಾಗಿರುತ್ತಾನೆ; ಪ್ರಭುವನ್ನು ಮೆಚ್ಚಿಸಲು ಶ್ರಮಿಸುತ್ತಾನೆ. [33]ಮದುವೆ ಆದವನು
ಲೋಕವ್ಯವಹಾರಗಳಲ್ಲಿ ಮಗ್ನನಾಗುತ್ತಾನೆ. ತನ್ನ ಸತಿಯನ್ನು ಮೆಚ್ಚಿಸಲು ಪ್ರಯತ್ನಿಸುತ್ತಾನೆ. [34]ಅಂಥವನು
ಉಭಯ ಸಂಕಟಕ್ಕೆ ಸಿಕ್ಕಿಕೊಳ್ಳುತ್ತಾನೆ. ಮದುವೆಯಾಗದ ಮಹಿಳೆ ಅಥವಾ ಕನ್ನಿಕೆ ಪ್ರಭುವಿನ ಸೇವೆಯಲ್ಲಿ
ನಿರತಳಾಗಿರುತ್ತಾಳೆ. ದೇಹಾತ್ಮಗಳೆರಡನ್ನೂ ಪ್ರಭುವಿಗೆ ಮೀಸಲಾಗಿಡುತ್ತಾಳೆ. ಆದರೆ ವಿವಾಹಿತ ಸ್ತ್ರೀ ಲೋಕ
ವ್ಯವಹಾರಗಳಲ್ಲಿ ಮಗ್ನಳಾಗಿರುತ್ತಾಳೆ. ತನ್ನ ಪತಿಯನ್ನು ಮೆಚ್ಚಿಸಲು ಪ್ರಯತ್ನಿಸುತ್ತಾಳೆ. [35]ನಿಮ್ಮನ್ನು ಬಂಧಿಸಲು

ಅಲ್ಲ, ಬೆಂಬಲಿಸಲು ಇದನ್ನು ಹೇಳುತ್ತಿದ್ದೇನೆ. ನೀವು ಸಜ್ಜನರಾಗಿ ನಡೆದುಕೊಂಡು, ಭಿನ್ನಭಾವವಿಲ್ಲದೆ ಪ್ರಭುವಿನ ಪಾದಸೇವೆ ಮಾಡಬೇಕೆಂಬುದೇ ನನ್ನ ಆಶೆ.

36 ಒಬ್ಬನು ತನಗೆ ನಿಶ್ಚಿತವಾದ ಕನ್ಯೆಯೊಡನೆ ಅನುಚಿತ ರೀತಿಯಲ್ಲಿ ವರ್ತಿಸುತ್ತಿರಬಹುದು; ಅವನಿಗೆ ಸಂಯಮ ತಪ್ಪುವಂತಿದ್ದರೆ, ತಾನು ಆಶಿಸುವಂತೆ ಅವನು ಮದುವೆಮಾಡಿಕೊಳ್ಳಲಿ. ಅದು ಪಾಪವಲ್ಲ. [37]ಆದರೆ ಅವನು ಯಾರ ಒತ್ತಾಯಕ್ಕೂ ಮಣಿಯದೆ ದೃಢಚಿತ್ತನಾಗಿದ್ದು, ತನಗೆ ನಿಶ್ಚಿತಳಾದ ಕನ್ಯೆಯೊಡನೆ ಮದುವೆಯಾಗುವುದು ಬೇಡವೆಂದು ತೀರ್ಮಾನಿಸಿಕೊಂಡರೆ ಮತ್ತು ತನ್ನ ಸಂಯಮವನ್ನು ಹತೋಟಿಯಲ್ಲಿಟ್ಟುಕೊಂಡರೆ ಅವನು ಅಂತೆಯೇ ಮಾಡಲಿ. ಹೀಗೆ, ಮದುವೆ ಆಗದೆ ಇರುವುದು ಒಳ್ಳೆಯದು. [38]ಈ ರೀತಿ ನಿಶ್ಚಯವಾದ ಕನ್ಯೆಯನ್ನು ಮದುವೆ ಮಾಡಿಕೊಳ್ಳುವುದು ಒಳ್ಳೆಯದೇ, ಮದುವೆ ಮಾಡಿಕೊಳ್ಳದಿರುವುದು ಇನ್ನಷ್ಟು ಒಳ್ಳೆಯದೇ. [39]ಪತಿ ಬದುಕಿರುವವರೆಗೂ ಸತಿ ಅವನಿಗೆ ಬಂಧಿತಳು. ಅವನು ಸತ್ತರೆ ತಾನು ಇಷ್ಟಪಟ್ಟವನನ್ನು ಮತ್ತೆ ಮದುವೆ ಆಗಲು ಸ್ವತಂತ್ರಳು. ಆದರೆ ಅವನು ಕ್ರೈಸ್ತ ವಿಶ್ವಾಸಿಯಾಗಿರಬೇಕು. [40]ಆಕೆ ವಿವಾಹವಾಗದೆ ಹಾಗೇ ಉಳಿದರೆ ಹೆಚ್ಚು ಭಾಗ್ಯವಂತಳು. ಇದು ನನ್ನ ಅಭಿಪ್ರಾಯ. ಆದರೂ ದೇವರ ಆತ್ಮದ ಪ್ರೇರಣೆಯಿಂದ ಇದನ್ನು ಹೇಳುತ್ತಿದ್ದೇನೆ, ಎಂಬುದೇ ನನ್ನ ನಂಬಿಕೆ.

## ನೈವೇದ್ಯ ಪದಾರ್ಥ ತಿನ್ನುವುದು ನಿಷಿದ್ಧವೇ?

**8** ವಿಗ್ರಹಗಳಿಗೆ ನೈವೇದ್ಯ ಮಾಡಿದ ಆಹಾರ ಪದಾರ್ಥಗಳ ವಿಷಯವಾಗಿ ನಾನು ಹೇಳುವುದೇನೆಂದರೆ: "ನಮಗೆಲ್ಲರಿಗೂ ಜ್ಞಾನೋದಯವಾಗಿದೆ" ಎಂದು ಹೇಳಿಕೊಳ್ಳುತ್ತೀರಿ. ಜ್ಞಾನವು ನಮ್ಮನ್ನು ಅಹಂಕಾರಿಗಳನ್ನಾಗಿ ಮಾಡುತ್ತದೆ. ಪ್ರೀತಿಯಾದರೋ ಭಕ್ತಿಯನ್ನು ವೃದ್ಧಿಗೊಳಿಸುತ್ತದೆ. [2]ಯಾರಾದರೂ ತಾನು ಬಲ್ಲವನೆಂದು ಕೊಚ್ಚಿಕೊಳ್ಳುವುದಾದರೆ ತಾನು ತಿಳಿಯಬೇಕಾದುದನ್ನು ಅವನು ಸರಿಯಾಗಿ ತಿಳಿದಿರುವುದಿಲ್ಲ. [3]ಆದರೆ ದೇವರನ್ನು ಪ್ರೀತಿಸುವವನನ್ನು ದೇವರು ಗುರುತಿಸುತ್ತಾರೆ.

4 ವಿಗ್ರಹಗಳಿಗೆ ನೈವೇದ್ಯ ಮಾಡಿದ ಪದಾರ್ಥಗಳನ್ನು ತಿನ್ನುವ ಬಗ್ಗೆ ನನ್ನ ಅಭಿಪ್ರಾಯ ಹೀಗಿದೆ: ವಿಗ್ರಹಗಳಿಗೆ ನಿಜವಾದ ಅಸ್ತಿತ್ವವಿಲ್ಲ. ದೇವರು ಒಬ್ಬರೇ ಹೊರತು ಬೇರೆ ದೇವರಿಲ್ಲ. ಇದು ನಮಗೆ ತಿಳಿದ ವಿಷಯ. [5]"ದೇವರುಗಳು" ಎನಿಸಿಕೊಳ್ಳುವವರು ಇಹಪರಗಳಲ್ಲಿ ಇರಬಹುದು; ಅಂಥ ಹಲವಾರು "ದೇವರು"ಗಳನ್ನೂ "ಪ್ರಭು"ಗಳನ್ನೂ ಪೂಜಿಸುವುದುಂಟು. [6]ಆದರೆ ನಮಗೆ ಒಬ್ಬರೇ ದೇವರು. ಅವರು ನಮ್ಮ ಪರಮ ಪಿತ; ಎಲ್ಲ ಸೃಷ್ಟಿಗೂ ಮೂಲಕರ್ತ, ನಾವಿರುವುದು ಅವರಿಗಾಗಿಯೇ. ನಮಗೆ ಒಬ್ಬರೇ ಪ್ರಭು; ಅವರೇ ಯೇಸುಕ್ರಿಸ್ತ. ಅವರ ಮುಖಾಂತರವೇ ಸಮಸ್ತವೂ ಉಂಟಾಯಿತು. ಅವರ ಮುಖಾಂತರವೇ ನಾವು ಜೀವಿಸುತ್ತೇವೆ.

7 ಅದರೆ ಎಲ್ಲರಿಗೂ ಇದರ ಅರಿವಿಲ್ಲ. ಕೆಲವರು ಸಾಂಪ್ರದಾಯಕವಾಗಿ ಬಂದ ವಿಗ್ರಹಾರಾಧನೆಯಲ್ಲಿ ಭಾಗವಹಿಸಿ, ವಿಗ್ರಹಕ್ಕೆ ಅರ್ಪಿತವಾದ ನೈವೇದ್ಯ ಪದಾರ್ಥವನ್ನು ತಿನ್ನುತ್ತಾರೆ. ಆದರೆ ಅವರ ಮನಸ್ಸಾಕ್ಷಿ ದುರ್ಬಲವಾಗಿರುವುದರಿಂದ ತಾವು ಕಲುಷಿತರಾದೆವೆಂದು ಭಾವಿಸಿಕೊಳ್ಳುತ್ತಾರೆ. [8]ನಾವು ತಿನ್ನುವ ಆಹಾರ ನಮ್ಮನ್ನು ದೇವರ ಸನ್ನಿಧಿಗೆ ಸೇರಿಸಲಾರದು. ಅದನ್ನು ತಿನ್ನದಿರುವುದರಿಂದ ನಮಗೆ ನಷ್ಟವಿಲ್ಲ, ತಿಂದರೆ ಲಾಭವಿಲ್ಲ. [9]ಆದರೆ ನಿಮ್ಮ ಸ್ವಾತಂತ್ರ್ಯವನ್ನು ಉಪಯೋಗಿಸುವಾಗ ದುರ್ಬಲ ಮನಸ್ಸುಳ್ಳ ಸೋದರರ ವಿಶ್ವಾಸಕ್ಕೆ ಅಡ್ಡಿಯಾಗದಂತೆ ಎಚ್ಚರಿಕೆ ವಹಿಸಿರಿ. [10]ನೈಜ ಅರಿವುಳ್ಳವನೆಂದು ಹೇಳಿಕೊಳ್ಳುವ ನೀನು ವಿಗ್ರಹದ ಗುಡಿಯಲ್ಲಿ ಊಟಕ್ಕೆ ಕುಳಿತಿರುವುದನ್ನು ದುರ್ಬಲ ಮನಸ್ಸಾಕ್ಷಿಯುಳ್ಳ ಸೋದರನು ಕಂಡರೆ, ಅವನು ಸಹ ನೈವೇದ್ಯ ಮಾಡಿದ ಪದಾರ್ಥವನ್ನು ತಿನ್ನಲು ಧೈರ್ಯಗೊಳ್ಳಲಾರನೇ? [11]ಈ ನಿನ್ನ ಅರಿವಿನಿಂದ ದುರ್ಬಲ ಸೋದರನು ನಾಶಕ್ಕೆ ಗುರಿಯಾಗುತ್ತಾನೆ. ಯೇಸುಕ್ರಿಸ್ತರು ಅವನಿಗಾಗಿಯೂ ಪ್ರಾಣತ್ಯಾಗ ಮಾಡಲಿಲ್ಲವೇ? [12]ಹೀಗೆ ನೀವು ನಿಮ್ಮ ಸಹೋದರರ ದುರ್ಬಲ ಮನಸ್ಸಾಕ್ಷಿಯನ್ನು ನೋಯಿಸಿ, ಅವರ ವಿರುದ್ಧ ಪಾಪಕಟ್ಟಿಕೊಳ್ಳುವುದರಿಂದ ಯೇಸುಕ್ರಿಸ್ತರ ವಿರುದ್ಧವೇ ಪಾಪ ಮಾಡುತ್ತೀರಿ. [13]ನಾನು ತಿನ್ನುವ ಆಹಾರ ನನ್ನ

ಸಹೋದರನ ವಿಶ್ವಾಸಕ್ಕೆ ಅಡ್ಡಿಯಾಗುವುದಾದರೆ ಎಂದಿಗೂ ನಾನದನ್ನು ತಿನ್ನಲಾರೆ, ಅವನ ವಿಶ್ವಾಸಕ್ಕೆ
ಅಡ್ಡಿಯನ್ನು ತರಲಾರೆ.

### ಧರ್ಮಸೇವಕನ ಸಂಭಾವನೆ

**9** ನಾನು ಸ್ವತಂತ್ರನಲ್ಲವೇ? ಪ್ರೇಷಿತನಲ್ಲವೇ? ನಮ್ಮ ಪ್ರಭು ಯೇಸುವನ್ನು ಕಂಡವನಲ್ಲವೇ? ಪ್ರಭುವಿನಲ್ಲಿ
ನಾನು ಮಾಡಿದ ಸೇವೆಯ ಪ್ರತಿಫಲ ನೀವಲ್ಲವೇ? 2ಇತರರಿಗೆ ನಾನು ಪ್ರೇಷಿತನಲ್ಲದಿದ್ದರೂ ನಿಮಗಂತೂ
ನಾನು ಪ್ರೇಷಿತನೇ. ನಾನು ಪ್ರೇಷಿತನು ಎಂಬುದಕ್ಕೆ ಪ್ರಭುವಿಗೆ ಸೇರಿದವರಾದ ನೀವೇ ಜೀವಂತ ಸಾಕ್ಷಿಗಳು.

3 ನನ್ನನ್ನು ಟೀಕಿಸುವವರಿಗೆ ನನ್ನ ಉತ್ತರ ಇದು: 4ನಿಮ್ಮಿಂದ ಅನ್ನಪಾನಗಳನ್ನು ಪಡೆಯಲು ನನಗೆ
ಹಕ್ಕಿಲ್ಲವೇ? 5ಮಿಕ್ಕ ಪ್ರೇಷಿತರಂತೆ, ಪ್ರಭುವಿನ ಸಹೋದರರಂತೆ, ಕೇಫನಂತೆ ನಾನು ಸಹ
ಕ್ರೈಸ್ತವಿಶ್ವಾಸಿಯೊಬ್ಬಳನ್ನು ಮದುವೆಮಾಡಿಕೊಂಡು ಆಕೆಯೊಡನೆ ಪ್ರಯಾಣ ಕೈಗೊಳ್ಳಲು ನನಗೆ ಹಕ್ಕಿಲ್ಲವೇ?
6ಜೀವನೋಪಾಯಕ್ಕಾಗಿ ಬಾರ್ನಬ ಮತ್ತು ನಾನು ಮಾತ್ರ ದುಡಿಯಬೇಕೇ? 7ಯಾವ ಸೈನಿಕ ಸ್ವಂತ
ಖರ್ಚಿನಿಂದ ಸಮರಕ್ಕೆ ನಿಲ್ಲುತ್ತಾನೆ? ಯಾವ ತೋಟಗಾರ ತನ್ನ ಸ್ವಂತ ದ್ರಾಕ್ಷಿಯ ತೋಟದಿಂದ ದ್ರಾಕ್ಷಿಯ
ಫಲವನ್ನು ತಿನ್ನದಿರುತ್ತಾನೆ? ಯಾವ ಗೌಳಿಗ ತಾನು ಸಾಕಿದ ಹಸುವಿನ ಹಾಲನ್ನು ಕುಡಿಯದಿರುತ್ತಾನೆ?

8 ಇವು ಕೇವಲ ಲೋಕರೂಢಿಯ ಮಾತುಗಳಲ್ಲ. ಧರ್ಮಶಾಸ್ತ್ರವೂ ಇದನ್ನು ಅನುಮೋದಿಸುತ್ತದೆ.
9"ಕಣ ತುಳಿಯುವ ಎತ್ತಿನ ಬಾಯನ್ನು ಕಟ್ಟಬೇಡ," ಎಂದು ಮೋಶೆಯ ಧರ್ಮಶಾಸ್ತ್ರದಲ್ಲೇ ಲಿಖಿತವಾಗಿದೆ.
ಇಲ್ಲಿ ದೇವರಿಗೆ ಎತ್ತಿನ ಮೇಲೆ ಚಿಂತೆಯೇ? ಇಲ್ಲ. 10ಇದನ್ನು ನಮ್ಮ ಹಿತಚಿಂತನೆಯಿಂದ ಹೇಳಲಾಗಿದೆ;
ಅದೇ ಉದ್ದೇಶದಿಂದ ಬರೆಯಲಾಗಿದೆ. ಹೌದು, ಉಳುವವನೂ ಒಕ್ಕುವವನೂ ಕಾಳುಬೆಳೆಯಲ್ಲಿ
ಪಾಲುಪಡೆಯುವ ಉದ್ದೇಶದಿಂದಲೇ ದುಡಿಯುತ್ತಾರೆ. 11ನಿಮ್ಮಲ್ಲಿ ಆಧ್ಯಾತ್ಮಿಕ ಬೀಜವನ್ನು ಬಿತ್ತನೆ ಮಾಡಿದ
ನಾವು ಪ್ರತಿಫಲವಾಗಿ ದೈನಂದಿನ ಅಗತ್ಯಗಳನ್ನು ಅಪೇಕ್ಷಿಸುವುದು ಅತಿಯಾಯಿತೇ? 12ಇತರರಿಗೆ ನಿಮ್ಮ
ಮೇಲೆ ಇಂಥ ಹಕ್ಕಿದ್ದರೆ ಅದಕ್ಕಿಂತಲೂ ಹೆಚ್ಚು ಹಕ್ಕು ನಮಗಿರಬೇಕಲ್ಲವೇ? ಆದರೂ ನಾವು ಈ ಹಕ್ಕನ್ನು
ಚಲಾಯಿಸಲೇ ಇಲ್ಲ. ಬದಲಿಗೆ, ಕ್ರಿಸ್ತಯೇಸುವಿನ ಶುಭಸಂದೇಶಕ್ಕೆ ಯಾವ ಅಡ್ಡಿಯೂ ಬಾರದಿರಲೆಂದು
ಎಲ್ಲವನ್ನೂ ಸಹಿಸಿಕೊಂಡೆವು.

13 ದೇವಾಲಯದ ಸೇವೆಯಲ್ಲಿರುವವರು ದೇವಾಲಯದ ಆದಾಯದಿಂದ ಜೀವಿಸುತ್ತಾರೆ.
ಬಲಿಪೀಠದ ಬಳಿ ಸೇವೆಮಾಡುವವರು ಅರ್ಪಿತವಾದ ಬಲಿಯಿಂದ ಪಾಲನ್ನು ಪಡೆಯುತ್ತಾರೆ. ಇದು ನಿಮಗೆ
ತಿಳಿದಿದೆ. 14ಅದೇ ಪ್ರಕಾರ ಶುಭಸಂದೇಶ ಪ್ರಚಾರಕರು ಶುಭಸಂದೇಶ ಪ್ರಚಾರದ ಆದಾಯದಿಂದಲೇ ಜೀವನ
ನಡೆಸಬೇಕೆಂದು ಪ್ರಭುವೇ ಆಜ್ಞಾಪಿಸಿದ್ದಾರೆ. 15ನಾನಂತೂ ಈ ಹಕ್ಕುಗಳಲ್ಲಿ ಒಂದನ್ನೂ ಚಲಾಯಿಸಲಿಲ್ಲ.
ಚಲಾಯಿಸಬೇಕೆಂಬ ಉದ್ದೇಶದಿಂದಲೂ ಇದನ್ನು ಬರೆಯುತ್ತಿಲ್ಲ. ಅದಕ್ಕಿಂತಲೂ ಸಾಯುವುದೇ ಲೇಸು. ಈ
ನನ್ನ ಹೆಮ್ಮೆಯನ್ನು ಯಾರೂ ಅಪಹರಿಸಲಾರರು. 16ಶುಭಸಂದೇಶವನ್ನು ನಾನು ಸಾರುತ್ತಿದ್ದೇನೆಂದು
ಕೊಚ್ಚಿಕೊಳ್ಳುವುದಕ್ಕೂ ನನಗೆ ಆಸ್ಪದವಿಲ್ಲ. ಏಕೆಂದರೆ, ಸಾರಲೇಬೇಕೆಂಬ ಕರ್ತವ್ಯಕ್ಕೆ ನಾನು ಬದ್ಧನಾಗಿದ್ದೇನೆ.
ಸಾರದಿದ್ದರೆ ನನಗೆ ಧಿಕ್ಕಾರವಿರಲಿ! 17ನಾನು ಸ್ವಂತ ಇಷ್ಟದಿಂದ ಈ ಕಾರ್ಯವನ್ನು ಕೈಗೊಂಡಿದ್ದರೆ ತಕ್ಕ
ಸಂಭಾವನೆ ಇರುತ್ತಿತ್ತು. ಆದರೆ ಈ ಕರ್ತವ್ಯವನ್ನು ನನಗೆ ವಹಿಸಲಾಗಿದೆ. ಆದ್ದರಿಂದ ಕರ್ತವ್ಯಬದ್ಧನಾಗಿ
ಮಾಡುತ್ತಿದ್ದೇನೆ. 18ಹಾಗಾದರೆ ನನಗೆ ಸಿಗುವ ಸಂಭಾವನೆಯಾದರೂ ಏನು? ಶುಭಸಂದೇಶವನ್ನು
ಸಾರುವಾಗ ಜೀವನೋಪಾಯಕ್ಕಾಗಿ ನನಗಿರುವ ಹಕ್ಕನ್ನು ಬಳಸಿಕೊಳ್ಳದೆ ಉಚಿತವಾಗಿ ಸಾರುವ ಸೌಭಾಗ್ಯವೇ
ನನ್ನ ಸಂಭಾವನೆ.

19 ನಾನು ಸ್ವತಂತ್ರನು, ಯಾರಿಗೂ ದಾಸನಲ್ಲ. ಆದರೂ ಆದಷ್ಟು ಜನರನ್ನು ಗಳಿಸಿಕೊಳ್ಳಲೆಂದು
ಎಲ್ಲರಿಗೂ ದಾಸನಾದೆ. 20ಯೆಹೂದ್ಯರನ್ನು ಗಳಿಸಿಕೊಳ್ಳಲು ಯೆಹೂದ್ಯರಿಗೆ ಯೆಹೂದ್ಯನಂತಾದೆ.
ಧರ್ಮಶಾಸ್ತ್ರಕ್ಕೆ ಅಧೀನರಾದವರನ್ನು ಗಳಿಸಿಕೊಳ್ಳಲು ನಾನು ಆ ಶಾಸ್ತ್ರಕ್ಕೆ ಅಧೀನನಲ್ಲದಿದ್ದರೂ ಅವರಿಗೋಸ್ಕರ
ಅಧೀನನಂತಾದೆ. 21ಧರ್ಮಶಾಸ್ತ್ರಕ್ಕೆ ಬಾಹಿರರಾದವರನ್ನು ಗಳಿಸಿಕೊಳ್ಳಲು ನಾನು ಧರ್ಮಶಾಸ್ತ್ರಕ್ಕೆ ಬಾಹಿರನಂತೆ

ಆದೆ. ಯೇಸುಕ್ರಿಸ್ತರ ನಿಯಮಕ್ಕೆ ನಾನು ವಿಧೇಯನಾದುದರಿಂದ ದೇವರ ನಿಯಮಕ್ಕೆ ನಾನು ಬಾಹಿರನೇನೂ
ಅಲ್ಲ. 22ವಿಶ್ವಾಸದಲ್ಲಿ ದುರ್ಬಲರನ್ನು ಗಳಿಸಿಕೊಳ್ಳಲು ನಾನೂ ದುರ್ಬಲನಂತಾದೆ. ಹೇಗಾದರೂ ಸರಿ,
ಕೆಲವರನ್ನಾದರೂ ಉದ್ಧರಿಸಲು ಎಲ್ಲರಿಗೂ ಎಲ್ಲವೂ ಆದೆ. 23ಶುಭಸಂದೇಶದ ಸೌಭಾಗ್ಯದಲ್ಲಿ
ಪಾಲುಗೊಳ್ಳಲೆಂದು ಇದೆಲ್ಲವನ್ನು ಶುಭಸಂದೇಶಕ್ಕಾಗಿಯೇ ಮಾಡುತ್ತೇನೆ. 24ನಿಮಗೆ ತಿಳಿದಿರುವಂತೆ
ಕ್ರೀಡಾಂಗಣದಲ್ಲಿ ಅನೇಕರು ಓಟದ ಸ್ಪರ್ಧೆಯಲ್ಲಿ ಭಾಗವಹಿಸುತ್ತಾರೆ; ಆದರೆ ಪ್ರಥಮ ಬಹುಮಾನ
ದೊರಕುವುದು ಒಬ್ಬನಿಗೆ ಮಾತ್ರ. ಅಂತೆಯೇ ಬಹುಮಾನವನ್ನು ಪಡೆದುಕೊಳ್ಳಲು ನೀವೂ ಓಡಿ.
25ಕ್ರೀಡಾಪಟುಗಳೆಲ್ಲರೂ ತಮ್ಮನ್ನು ಹತೋಟಿಯಲ್ಲಿಟ್ಟುಕೊಳ್ಳುತ್ತಾರೆ. ಅಳಿದುಹೋಗುವ ಪದಕದ ಗಳಿಕೆಗಾಗಿ
ಪ್ರಯತ್ನಮಾಡುತ್ತಾರೆ. ನಾವಾದರೋ ಅಮರ ಪದಕದ ಗಳಿಕೆಗಾಗಿ ಶ್ರಮಿಸುತ್ತೇವೆ. 26ನಾನಾದರೋ
ಗೊತ್ತುಗುರಿಯಿಲ್ಲದವನಂತೆ ಓಡುವುದಿಲ್ಲ, ಗಾಳಿಯೊಡನೆ ಗುದ್ದಾಡುವವನಂತೆ ಹೋರಾಡುವುದಿಲ್ಲ.
27ಇತರರಿಗೆ ಕರೆಕೊಟ್ಟ ಮೇಲೆ ನಾನೇ ಅಯೋಗ್ಯನಾಗದಂತೆ, ನನ್ನ ದೇಹವನ್ನು ದಂಡಿಸಿ, ನನ್ನನ್ನೇ ನಾನು
ಹತೋಟಿಯಲ್ಲಿಟ್ಟುಕೊಳ್ಳುತ್ತೇನೆ.

## ವಿಗ್ರಹಾರಾಧನೆಯ ವಿರುದ್ಧ ಎಚ್ಚರಿಕೆ

**10** ಪ್ರಿಯ ಸಹೋದರರೇ, ನಮ್ಮ ಪೂರ್ವಜರಿಗೆ ಸಂಭವಿಸಿದವುಗಳತ್ತ ನಿಮ್ಮ ಗಮನವನ್ನು
ಸೆಳೆಯಬೇಕೆಂದಿದ್ದೇನೆ. ಅವರೆಲ್ಲರೂ ಮೋಡದ ನೆರಳಿನಲ್ಲಿಯೇ ನಡೆದರು. ಎಲ್ಲರೂ ಸಮುದ್ರವನ್ನು
ಸುರಕ್ಷಿತವಾಗಿ ದಾಟಿದರು. 2ಹೀಗೆ ಅವರು ಮೋಡದಲ್ಲಿಯೂ ಸಮುದ್ರದಲ್ಲಿಯೂ ಸ್ನಾನದೀಕ್ಷೆಯನ್ನು
ಪಡೆದು ಮೋಶೆಗೆ ಶಿಷ್ಯರಾದರು. 3ಎಲ್ಲರೂ ಒಂದೇ ದೈವಿಕ ಪಾನೀಯವನ್ನು ಕುಡಿದರು; 4ಅದೂ ತಮ್ಮೊಡನೆ
ಬರುತ್ತಿದ್ದ ದೈವಿಕ ಬಂಡೆಯಿಂದ ಕುಡಿದರು. ಕ್ರಿಸ್ತಯೇಸುವೇ ಈ ಬಂಡೆ. 5ಆದರೂ ಅವರಲ್ಲಿ ಬಹುಮಂದಿ
ದೇವರ ಮೆಚ್ಚುಗೆಗೆ ಪಾತ್ರರಾಗಲಿಲ್ಲ. ಆದ್ದರಿಂದಲೇ ಮರುಭೂಮಿಯಲ್ಲೇ ಮಡಿದು ಮಣ್ಣುಪಾಲಾದರು.

6 ಈ ಘಟನೆಗಳು ನಮಗೆ ಎಚ್ಚರಿಕೆ ನೀಡುವ ನಿದರ್ಶನಗಳಾಗಿವೆ. ಅವರಂತೆ ನಾವು
ಕೆಟ್ಟದಾದವುಗಳನ್ನು ಆಶಿಸಬಾರದು. 7ಅವರಲ್ಲಿ ಕೆಲವರು ವಿಗ್ರಹಾರಾಧಕರಾದಂತೆ ನಾವು ಆಗಬಾರದು.
ಇವರನ್ನು ಕುರಿತೇ:

“ತಿನ್ನಲೆಂದು ಕುಡಿಯಲೆಂದು ಕುಳಿತರು
ಕುಣಿಯಲೆಂದು ಕಾಮವೆದ್ದು ನಿಂತರು
ಈ ಜನರು” ಎಂದು ಬರೆದಿದೆ.

8ಅವರಲ್ಲಿ ಕೆಲವರು ಹಾದರಮಾಡಿದ್ದರಿಂದ ಒಂದೇ ದಿನದಲ್ಲಿ ಇಪ್ಪತ್ತಮೂರು ಸಾವಿರ ಮಂದಿ ಸತ್ತರು.
ನಾವು ಹಾದರದಿಂದ ದೂರವಿರಬೇಕು. 9ಅವರ ಪೈಕಿ ಕೆಲವರು ಪ್ರಭುವನ್ನು ಶೋಧಿಸಿದರು. ಪರಿಣಾಮವಾಗಿ
ಸರ್ಪಗಳಿಂದ ನಾಶವಾದರು. ಅವರಂತೆ ಪ್ರಭುವನ್ನು ಶೋಧನೆ ಮಾಡುವುದು ನಮಗೆ ಬೇಡ. 10ಮತ್ತೆ
ಕೆಲವರು ಗೊಣಗುಟ್ಟಿದರು. ಸಂಹಾರಕ ದೂತನಿಂದ ಸಂಹರಿಸಲ್ಪಟ್ಟರು. ನೀವೂ ಅವರಂತೆ
ಗೊಣಗುಟ್ಟುವವರಾಗಬೇಡಿ.

11 ಇದೆಲ್ಲ ಅವರಿಗೆ ಸಂಭವಿಸಿದುದು ಇತರರಿಗೆ ನಿದರ್ಶನವಾಗಿರಲೆಂದು. ಇವುಗಳನ್ನು
ಬರೆದಿಟ್ಟಿರುವುದು, ಯುಗಾಂತ್ಯಕ್ಕೆ ಬಂದಿರುವ ನಮಗೆ ಮುನ್ನೆಚ್ಚರಿಕೆಯಾಗಿರಲೆಂದು. 12ಆದಕಾರಣ ಸ್ಥಿರವಾಗಿ
ನಿಂತಿರುವೆನೆಂದು ಕೊಚ್ಚಿಕೊಳ್ಳುವವನೇ, ಕುಸಿದುಬೀಳದಂತೆ ಎಚ್ಚರಿಕೆಯಿಂದಿರು. 13ಮಾನವರಿಂದ
ಜಯಿಸಲಾಗದ ಶೋಧನೆಗಳೇನೂ ನಿಮಗೆ ಬಂದಿಲ್ಲ. ದೇವರು ಕೊಟ್ಟಮಾತಿಗೆ ತಪ್ಪಲಾರರು. ಗೆಲ್ಲಲಾಗದ
ಶೋಧನೆಗಳಿಗೆ ನಿಮ್ಮನ್ನೆಂದೂ ಗುರಿಪಡಿಸಲಾರರು. ಶೋಧನೆಗಳು ಬಂದಾಗ ಅವುಗಳನ್ನು ಸಹಿಸಿಕೊಳ್ಳುವ
ಶಕ್ತಿಯನ್ನೂ ತಪ್ಪಿಸಿಕೊಳ್ಳುವ ಮಾರ್ಗವನ್ನೂ ಅವರೇ ಒದಗಿಸುತ್ತಾರೆ. 14ಆದ್ದರಿಂದ ಪ್ರಿಯರೇ,
ವಿಗ್ರಹಾರಾಧನೆಯನ್ನು ತೊರೆದು ಬಿಡಿ. 15ನೀವು ಅರಿತವರೆಂದು ತಿಳಿದೇ ಇದನ್ನು ಹೇಳುತ್ತಿದ್ದೇನೆ. ನನ್ನ
ಮಾತುಗಳನ್ನು ನೀವೇ ಪರಿಶೀಲಿಸಿ ನೋಡಿ. 16ನಾವು ದೇವರಿಗೆ ಕೃತಜ್ಞತಾ ಸ್ತೋತ್ರವನ್ನು ಸಲ್ಲಿಸಿ

ಪಾನಪಾತ್ರೆಯಿಂದ ಕುಡಿಯುವಾಗ ಕ್ರಿಸ್ತಯೇಸುವಿನ ರಕ್ತದಲ್ಲಿ ಪಾಲುಗೊಳ್ಳುತ್ತೇವಲ್ಲವೇ? ರೊಟ್ಟಿಯನ್ನು
ಮುರಿದು ತಿನ್ನುವಾಗ ಕ್ರಿಸ್ತಯೇಸುವಿನ ಶರೀರದಲ್ಲಿ ಪಾಲುಗೊಳ್ಳುತ್ತೇವಲ್ಲವೇ? 17ರೊಟ್ಟಿ ಒಂದೇ; ಆದ್ದರಿಂದ
ನಾವು ಅನೇಕರಿದ್ದರೂ ಒಂದೇ ಶರೀರವಾಗುತ್ತೇವೆ. ಏಕೆಂದರೆ ನಾವೆಲ್ಲರೂ ಆ ಒಂದೇ ರೊಟ್ಟಿಯಲ್ಲಿ
ಭಾಗಿಗಳಾಗುತ್ತೇವೆ.

18 ಇಸ್ರಯೇಲರ ಪದ್ಧತಿಯನ್ನು ಗಮನಿಸಿರಿ: ಬಲಿಯಾಗಿ ಅರ್ಪಿತವಾದುದನ್ನು ಭುಜಿಸುವವರು
ಬಲಿಪೀಠದ ಸೇವೆಯಲ್ಲಿ ಭಾಗಿಯಾಗಿರುತ್ತಾರಷ್ಟೆ. 19ಹೀಗೆ ನಾನು ಹೇಳುವಾಗ ವಿಗ್ರಹಕ್ಕೆ ನೈವೇದ್ಯ ಮಾಡಿದ
ಪದಾರ್ಥವು ವಾಸ್ತವವಾದುದು ಅಥವಾ ವಿಗ್ರಹವೇ ವಾಸ್ತವವಾದುದು ಎಂದು ಅರ್ಥವೇ? 20ಯಾವುದೂ
ಅಲ್ಲ. ನಾನು ಹೇಳುವುದೇನೆಂದರೆ: ಅನ್ಯಜನರು ಬಲಿಯನ್ನು ದೆವ್ವಗಳಿಗೆ ಅರ್ಪಿಸುತ್ತಾರೆ ಹೊರತು
ದೇವರಿಗಲ್ಲ. ಹೀಗೆ ನೀವು ದೆವ್ವಗಳೊಂದಿಗೆ ಭಾಗಿಯಾಗುವುದನ್ನು ನಾನೆಂದಿಗೂ ಇಷ್ಟಪಡುವುದಿಲ್ಲ. 21ನೀವು
ಪ್ರಭುವಿನ ಪಾತ್ರೆಯಿಂದ ಹಾಗೂ ದೆವ್ವಗಳ ಪಾತ್ರೆಯಿಂದ ಕುಡಿಯಲಾಗದು. ಪ್ರಭುವಿನ ಪಂಕ್ತಿಯಲ್ಲೂ
ಅಂತೆಯೇ ದೆವ್ವಗಳ ಪಂಕ್ತಿಯಲ್ಲೂ ಊಟಮಾಡಲಾಗದು. 22ನಾವು ಪ್ರಭುವನ್ನು ಅಸೂಯೆಗೆಬ್ಬಿಸಬಹುದೇ?
ಅವರಿಗಿಂತ ನಾವು ಬಲಾಢ್ಯರೇ?

23 "ಏನನ್ನು ಮಾಡಲೂ ಸ್ವಾತಂತ್ರ್ಯವಿದೆ," ಎಂದು ಹೇಳುವುದುಂಟು. ಆದರೆ ಎಲ್ಲವೂ
ಪ್ರಯೋಜನಕರವಲ್ಲ. ಏನನ್ನು ಮಾಡಲೂ ಸ್ವಾತಂತ್ರ್ಯವಿದೆ, ಆದರೆ ಎಲ್ಲವೂ ಅಭಿವೃದ್ಧಿಕರವಲ್ಲ.
24ಪ್ರತಿಯೊಬ್ಬನೂ ತನ್ನ ಹಿತವನ್ನು ಮಾತ್ರ ಬಯಸದೆ ಪರರ ಹಿತವನ್ನೂ ಬಯಸಬೇಕು. 25ಮನಸ್ಸಾಕ್ಷಿಯನ್ನು
ಕೆದಕುವ ಪ್ರಶ್ನೆಗಳಿಗೆ ಎಡೆಕೊಡದೆ ಮಾಂಸದ ಮಾರುಕಟ್ಟೆಯಲ್ಲಿ ಮಾರುವುದೆಲ್ಲವನ್ನೂ ನೀವು ತಂದು
ತಿನ್ನಬಹುದು. 26ಏಕೆಂದರೆ, "ಭೂಮಂಡಲವೂ ಅದರಲ್ಲಿರುವುದೆಲ್ಲವೂ ಪ್ರಭುವಿನದೆ."

27 ಕ್ರೈಸ್ತವಿಶ್ವಾಸಿ ಅಲ್ಲದವನು, ನಿಮ್ಮನ್ನು ಊಟಕ್ಕೆ ಕರೆದಾಗ, ನಿಮಗಿಷ್ಟವಿದ್ದರೆ ಹೋಗಿರಿ;
ಮನಸ್ಸಾಕ್ಷಿಯನ್ನು ಕೆದಕುವ ಪ್ರಶ್ನೆಗಳಿಗೆ ಎಡೆಕೊಡದೆ ಅವನು ಬಡಿಸಿದ್ದನ್ನು ಊಟಮಾಡಿರಿ. 28ಆಗ
ಯಾರಾದರೂ, "ಇದು ವಿಗ್ರಹಗಳಿಗೆ ಬಲಿಕೊಟ್ಟದ್ದು," ಎಂದು ಹೇಳಿದರೆ, ಹಾಗೆ ತಿಳಿಸಿದವನ ಸಲುವಾಗಿ
ಹಾಗೂ ಮನಸ್ಸಾಕ್ಷಿಯ ಸಲುವಾಗಿ ಅದನ್ನು ಊಟಮಾಡಬೇಡಿ. 29ಅಂದರೆ, ನಿನ್ನ ಸ್ವಂತ ಮನಸ್ಸಾಕ್ಷಿಯ
ಸಲುವಾಗಿ ಅಲ್ಲ, ನಿನಗೆ ತಿಳಿಸಿದವನ ಮನಸ್ಸಾಕ್ಷಿಯ ಸಲುವಾಗಿ ಊಟಮಾಡಬೇಡ. ನಿಮ್ಮಲ್ಲಿ ಒಬ್ಬನು,
"ನನ್ನ ಸ್ವಾತಂತ್ರ್ಯಕ್ಕೆ ಇನ್ನೊಬ್ಬನ ಮನಸ್ಸಾಕ್ಷಿ ಏಕೆ ಅಡ್ಡಿಯಾಗಬೇಕು?" ಎಂದು ಕೇಳಬಹುದು. 30ಹಾಗೂ
"ನಾನು ದೇವರಿಗೆ ಕೃತಜ್ಞತಾಸ್ತೋತ್ರ ಮಾಡಿ ಊಟಮಾಡಿದೆನಾದರೆ ಹಾಗೆ ಸ್ತೋತ್ರ ಸಲ್ಲಿಕೆಯೊಂದಿಗೆ
ಮಾಡಿದ ಊಟಕ್ಕಾಗಿ ನನ್ನ ಮೇಲೆ ದೂಷಣೆ ಏಕೆ?" ಎಂದು ಕೇಳಬಹುದು.

31 ಅದಕ್ಕೆ ನನ್ನ ಉತ್ತರ ಇದು: ನೀವು ಉಂಡರೂ ಕುಡಿದರೂ ಏನು ಮಾಡಿದರೂ ಎಲ್ಲವನ್ನೂ
ದೇವರ ಮಹಿಮೆಗಾಗಿ ಮಾಡಿ. 32ಯೆಹೂದ್ಯರಿಗಾಗಲಿ, ಗ್ರೀಕರಿಗಾಗಲಿ, ದೇವರ ಧರ್ಮಸಭೆಗಾಗಲಿ
ಬಾಧಕರಾಗಿರಬೇಡಿ. 33ನಾನಂತೂ ನನ್ನ ಸ್ವಂತ ಹಿತವನ್ನು ಲೆಕ್ಕಿಸದೆ ಸರ್ವರ ಉದ್ಧಾರಕ್ಕಾಗಿ ಅವರ ಹಿತವನ್ನು
ಅಪೇಕ್ಷಿಸಿ, ಎಲ್ಲರನ್ನೂ ಎಲ್ಲದರಲ್ಲೂ ಮೆಚ್ಚಿಸಲು ಪ್ರಯತ್ನಿಸುತ್ತೇನೆ.

### ಸಭಾರಾಧನೆಯಲ್ಲಿ ಸಭ್ಯತೆ ಇರಲಿ

**11** ನಾನು ಕ್ರಿಸ್ತಯೇಸುವನ್ನು ಅನುಸರಿಸುವಂತೆ, ನೀವೂ ನನ್ನನ್ನು ಅನುಸರಿಸಿರಿ. 2ನೀವು ಸದಾ ನನ್ನನ್ನು
ಸ್ಮರಿಸಿಕೊಂಡು ನಾನು ನಿಮಗೆ ತಿಳಿಸಿಕೊಟ್ಟ ಸಾಂಪ್ರದಾಯಿಕ ರೀತಿನೀತಿಗಳನ್ನು ಸರಿಯಾಗಿ ಪಾಲಿಸಿಕೊಂಡು
ಬರುತ್ತಿದ್ದೀರಿ; ಇದಕ್ಕಾಗಿ ನಿಮ್ಮನ್ನು ಮೆಚ್ಚುತ್ತೇನೆ. 3ಒಂದು ವಿಷಯ ನಿಮಗೆ ತಿಳಿದಿರಲಿ. ಪ್ರತಿಯೊಬ್ಬ ವ್ಯಕ್ತಿಗೂ
ಕ್ರಿಸ್ತಯೇಸುವೇ ಶಿರಸ್ಸು. ಪ್ರತಿಯೊಬ್ಬ ಸ್ತ್ರೀಗೂ ಪುರುಷನೇ ಶಿರಸ್ಸು. ಕಿಸ್ತಯೇಸುವಿಗೆ ದೇವರೇ ಶಿರಸ್ಸು.
4ಪುರುಷನು ತಲೆಯಮೇಲೆ ಮುಸುಕು ಹಾಕಿಕೊಂಡು ಪ್ರಾರ್ಥಿಸುವುದಾದರೆ ಅಥವಾ ದೇವರ ವಾಕ್ಯವನ್ನು
ಪ್ರವಚಿಸುವುದಾದರೆ ತನ್ನ ಶಿರಸ್ಸಾದ ಕ್ರಿಸ್ತಯೇಸುವಿಗೆ ಅವಮಾನ ತರುತ್ತಾನೆ. 5ಸ್ತ್ರೀಯು ತಲೆಯ ಮೇಲೆ

ಮುಸುಕು ಹಾಕದೆ ಪ್ರಾರ್ಥಿಸುವುದಾದರೆ ಅಥವಾ ದೇವರ ವಾಕ್ಯವನ್ನು ಪ್ರವಚಿಸುವುದಾದರೆ ತನ್ನ ಶಿರಸ್ಸಾದ ಪತಿಗೆ ಅವಮಾನ ತರುತ್ತಾಳೆ. ಮುಸುಕು ಹಾಕದ ಸ್ತ್ರೀ ತಲೆಯನ್ನು ಮುಂಡನ ಮಾಡಿಸಿ ಕೊಂಡಂತೆಯೇ. [6]ಹಾಗೆ ಮುಸುಕುಹಾಕದ ಸ್ತ್ರೀ ತನ್ನ ತಲೆಗೂದಲನ್ನು ತೆಗೆದು ಬಿಡಲಿ. ಸ್ತ್ರೀಗೆ ತಲೆಗೂದಲನ್ನು ಕತ್ತರಿಸುವುದಾಗಲಿ, ಬೋಳಿಸುವುದಾಗಲಿ ಲಜ್ಜಾಸ್ಪದವಾಗಿದ್ದರೆ, ಆಕೆ ತಲೆಗೆ ಮುಸುಕು ಹಾಕಿಕೊಳ್ಳಲಿ. [7]ಪುರುಷನು ತಲೆಯ ಮೇಲೆ ಮುಸುಕು ಹಾಕಬೇಕಾಗಿಲ್ಲ. ಏಕೆಂದರೆ, ಅವನು ದೇವರ ರೂಪ ಹಾಗೂ ಅವರ ಮಹಿಮೆಯ ಪ್ರತಿಬಿಂಬ. ಸ್ತ್ರೀಯಾದರೋ, ಪುರುಷನ ಮಹಿಮೆಯ ಪ್ರತಿಬಿಂಬ. [8]ಸ್ತ್ರೀಯಿಂದ ಪುರುಷನಲ್ಲ; ಪುರುಷನಿಂದ ಸ್ತ್ರೀ ಉತ್ಪತ್ತಿ ಆದಳು. [9]ಅಂತೆಯೇ ಸ್ತ್ರೀಗಾಗಿ ಪುರುಷನಲ್ಲ; ಪುರುಷನಿಗಾಗಿ ಸ್ತ್ರೀ ಸೃಷ್ಟಿಯಾದಳು. [10]ಹೀಗೆ ದೇವದೂತರ ಸಲುವಾಗಿಯಾದರೂ ಸ್ತ್ರೀಯು ಗೌರವ ಸೂಚಿಸಲು ಮುಸುಕನ್ನು ಹಾಕಬೇಕು. [11]ಆದರೂ ಪ್ರಭುವಿನ ಮಟ್ಟಿಗೆ ಪುರುಷನಿಲ್ಲದೆ ಸ್ತ್ರೀಯು ಇಲ್ಲ; ಸ್ತ್ರೀ ಇಲ್ಲದೆ ಪುರುಷನೂ ಇಲ್ಲ. [12]ಏಕೆಂದರೆ ಸ್ತ್ರೀ ಪುರುಷನಿಂದ ಉತ್ಪತ್ತಿಯಾದಂತೆ ಪುರುಷನು ಸ್ತ್ರೀಯಿಂದ ಜನಿಸುತ್ತಾನೆ. ಸಮಸ್ತವೂ ದೇವರಿಂದ ಹುಟ್ಟುತ್ತದೆ.

13 ಸ್ತ್ರೀ ಮುಸುಕಿಲ್ಲದೆ ದೇವರನ್ನು ಪ್ರಾರ್ಥಿಸುವುದು ಲಕ್ಷಣವೇ? ನೀವೇ ತೀರ್ಮಾನಿಸಿರಿ. [14–15]ಉದ್ದ ಕೂದಲು ಪುರುಷನಿಗೆ ಲಜ್ಜಾಸ್ಪದವೆಂಬುದೂ ನೀಳ ಕೂದಲು ಸ್ತ್ರೀಗೆ ಭೂಷಣವೆಂಬುದೂ ಸ್ವಭಾವಸಿದ್ಧವಲ್ಲವೇ? ಕೇಶರಾಶಿ ಸ್ತ್ರೀಗೆ ರಕ್ಷಾವರಣವಲ್ಲವೇ? [16]ಇದರ ಬಗ್ಗೆ ಯಾರಾದರೂ ತರ್ಕಿಸಿದರೆ ಅಂಥವನಿಗೆ ಇದು ತಿಳಿದಿರಲಿ: ಇಂಥ ಪದ್ಧತಿ ನಮ್ಮಲ್ಲಿ ಇಲ್ಲ; ಇನ್ನಾವ ಧರ್ಮಸಭೆಗಳಲ್ಲೂ ಇಲ್ಲ.

### ಪರಮ ಪ್ರಸಾದವೇ ಪ್ರಭುವಿನ ಭೋಜನ

17 ಈಗ ನಾನು ಹೇಳಲಿರುವ ವಿಷಯದಲ್ಲಿ ನಿಮ್ಮನ್ನು ಮೆಚ್ಚಲಾರೆ. ನೀವು ಸಭೆ ಸೇರುವುದು ಒಳಿತಿಗಿಂತಲೂ ಹೆಚ್ಚಾಗಿ ಕೇಡನ್ನೇ ಉಂಟು ಮಾಡುತ್ತಿದೆ. [18]ಮೊದಲನೆಯದಾಗಿ, ನೀವು ಸೇರುವ ಸಭೆಯಲ್ಲಿ ಪಂಗಡಗಳಿವೆಯಂತೆ, ಸ್ವಲ್ಪ ಮಟ್ಟಿಗಾದರೂ ಈ ಸಮಾಚಾರ ನಿಜವೆಂದು ನನಗನ್ನಿಸುತ್ತದೆ. [19]ನಿಮ್ಮಲ್ಲಿ ಭಿನ್ನಾಭಿಪ್ರಾಯಗಳು ಇರುವುದು ಸಹಜ. ಹಾಗಿರುವಾಗಲೇ ಪ್ರಾಮಾಣಿಕರು ಯಾರೆಂದು ಕಂಡುಕೊಳ್ಳಲು ಸಾಧ್ಯ. [20]ಆದರೂ ನೀವೆಲ್ಲಾ ಒಂದಾಗಿ ಸೇರುವಾಗ ನೀವು ಮಾಡುವ ಭೋಜನ ಪ್ರಭುವಿನ ಭೋಜನವಲ್ಲ. [21]ಏಕೆಂದರೆ, ಭೋಜನ ಸಮಯದಲ್ಲಿ ಒಬ್ಬೊಬ್ಬನೂ ತಾನು ತಂದದ್ದನ್ನು ತಿನ್ನಲು ಇತರರಿಗಿಂತ ಮುಂಚಿತವಾಗಿಯೇ ಕುಳಿತುಕೊಳ್ಳುತ್ತಾನೆ. ಒಬ್ಬನು ಹಸಿದಿರುತ್ತಾನೆ; ಇನ್ನೊಬ್ಬನು ಕುಡಿದು ಮತ್ತನಾಗುತ್ತಾನೆ. [22]ತಿನ್ನಲು, ಕುಡಿಯಲು ನಿಮಗೆ ಸ್ವಂತ ಮನೆಗಳಿಲ್ಲವೇ? ನಿರ್ಗತಿಕರನ್ನು ನಾಚಿಕೆಗೀಡುಮಾಡಿ, ದೇವರ ಸಭೆಯನ್ನು ಉಪೇಕ್ಷಿಸಬೇಕೆಂದಿರುವಿರೋ? ಇದರ ಬಗ್ಗೆ ನಿಮಗೆ ನಾನು ಏನು ಹೇಳಲಿ? ನಿಮ್ಮನ್ನು ಹೊಗಳುವುದೋ, ತೆಗಳುವುದೋ? ಖಂಡಿತವಾಗಿ ನಿಮ್ಮನ್ನು ಹೊಗಳಲಾರೆ.

23 ನಿಮಗೆ ಮಾಡಿದ ಉಪದೇಶವನ್ನು ನಾನು ಪ್ರಭುವಿನಿಂದಲೇ ಪಡೆದೆನು. ಅದೇನೆಂದರೆ; ಪ್ರಭುಯೇಸು, ತಮ್ಮನ್ನು ಹಿಡಿದುಕೊಡಲಾದ ಆ ರಾತ್ರಿ ರೊಟ್ಟಿಯನ್ನು ತೆಗೆದುಕೊಂಡು [24]ದೇವರಿಗೆ ಕೃತಜ್ಞತಾಸ್ತೋತ್ರವನ್ನು ಸಲ್ಲಿಸಿ ಅದನ್ನು ಮುರಿದು, "ಇದು ನಿಮಗಾಗಿ ಒಪ್ಪಿಸಲಾಗುವ ನನ್ನ ಶರೀರ, ಇದನ್ನು ನನ್ನ ಸ್ಮರಣೆಗಾಗಿ ಮಾಡಿ," ಎಂದರು. [25]ಅಂತೆಯೇ ಭೋಜನದ ಕೊನೆಯಲ್ಲಿ ಪಾನ ಪಾತ್ರೆಯನ್ನು ತೆಗೆದುಕೊಂಡು, "ಈ ಪಾತ್ರೆ ನನ್ನ ರಕ್ತದಿಂದ ಮುದ್ರಿತವಾದ ಹೊಸ ಒಡಂಬಡಿಕೆ; ಇದನ್ನು ನೀವು ಪಾನಮಾಡುವಾಗಲೆಲ್ಲಾ ನನ್ನ ಸ್ಮರಣೆಗಾಗಿ ಮಾಡಿರಿ," ಎಂದರು. [26]ಎಂದೇ, ನೀವು ಈ ರೊಟ್ಟಿಯನ್ನು ಭುಜಿಸಿ ಈ ಪಾತ್ರೆಯಿಂದ ಪಾನಮಾಡುವಾಗಲೆಲ್ಲಾ ಪ್ರಭು ಬರುವ ತನಕ ಅವರ ಮರಣವನ್ನು ಸಾರುತ್ತೀರಿ.

27 ಯಾರಾದರೂ ಅಯೋಗ್ಯವಾಗಿ ಈ ರೊಟ್ಟಿಯನ್ನು ಭುಜಿಸಿದರೆ, ಅಥವಾ ಪ್ರಭುವಿನ ಪಾತ್ರೆಯಿಂದ ಪಾನಮಾಡಿದರೆ ಅವನು ಪ್ರಭುವಿನ ಶರೀರಕ್ಕೂ ರಕ್ತಕ್ಕೂ ದ್ರೋಹವೆಸಗುತ್ತಾನೆ. [28]ಪ್ರತಿಯೊಬ್ಬನೂ ಮೊಟ್ಟಮೊದಲು ತನ್ನನ್ನು ಪರಿಶೋಧಿಸಿಕೊಂಡು ಅನಂತರ ಆ ರೊಟ್ಟಿಯನ್ನು ಭುಜಿಸಲಿ; ಮತ್ತು ಆ ಪಾತ್ರೆಯಿಂದ ಪಾನಮಾಡಲಿ. [29]ಏಕೆಂದರೆ, ಅದು ಪ್ರಭುವಿನ ಶರೀರವೆಂದು ಪರಿಗ್ರಹಿಸದೆ, ಭುಜಿಸಿ, ಪಾನಮಾಡುವಾತನು ನ್ಯಾಯತೀರ್ಪನ್ನು ತನ್ನ ಮೇಲೆ ಬರಮಾಡಿಕೊಳ್ಳುವುದಕ್ಕಾಗಿಯೇ ತಿನ್ನುತ್ತಾನೆ, ಕುಡಿಯುತ್ತಾನೆ. [30]ನಿಮ್ಮಲ್ಲಿ ಅನೇಕರು ಈ ಕಾರಣದಿಂದಲೇ ದುರ್ಬಲರು, ಅಸ್ವಸ್ಥರು ಆಗಿದ್ದೀರಿ; ಮತ್ತು

ಎಷ್ಟೋ ಮಂದಿ ಸತ್ತಿದ್ದಾರೆ. 31ನಮ್ಮನ್ನು ನಾವೇ ಪರಿಶೋಧಿಸಿಕೊಂಡರೆ ನಾವು ನ್ಯಾಯತೀರ್ಪಿಗೆ
ಒಳಗಾಗುವುದಿಲ್ಲ. 32ಹಾಗೇನಾದರೂ ಪ್ರಭುವಿನ ವಿಚಾರಣೆಗೆ ನಾವು ಒಳಪಟ್ಟರೆ ಅವರು ನಮ್ಮನ್ನು ದಂಡಿಸಿ,
ತಿದ್ದುತ್ತಾರೆ. ಪ್ರಪಂಚದೊಂದಿಗೆ ನಾವು ತಪ್ಪಿತಸ್ಥರಾಗದಂತೆ ಮಾಡುತ್ತಾರೆ.
33 ಆದ್ದರಿಂದ ಪ್ರಿಯ ಸಹೋದರರೇ, ಪ್ರಭುವಿನ ಭೋಜನಕ್ಕಾಗಿ ನೀವು ಒಂದಾಗಿ ಸೇರುವಾಗ
ಒಬ್ಬರಿಗೊಬ್ಬರು ಕಾದುಕೊಂಡಿರಿ. 34ನೀವು ಹಸಿವು ನೀಗಿಸಿಕೊಳ್ಳುವುದಕ್ಕಾಗಿ ಸಭೆಗೆ ಬರುವುದಾದರೆ
ಮನೆಯಲ್ಲೇ ಊಟಮಾಡಿ. ಆಗ ಸಭೆಸೇರಿ ನೀವು ನ್ಯಾಯ ವಿಚಾರಣೆಗೆ ಗುರಿಯಾಗುವುದಿಲ್ಲ. ಇನ್ನುಳಿದ
ವಿಷಯಗಳನ್ನು ನಾನು ಬಂದು ಇತ್ಯರ್ಥ ಮಾಡುತ್ತೇನೆ.

## ಪವಿತ್ರಾತ್ಮ ಅವರ ವರದಾನಗಳು

**12** ಸಹೋದರರೇ, ಪವಿತ್ರಾತ್ಮ ಅವರ ವರದಾನಗಳ ಬಗ್ಗೆ ನೀವು ಸರಿಯಾದ ಅರಿವುಳ್ಳವರಾಗಿರಬೇಕು.
2ನೀವು ಅನ್ಯಮತಸ್ಥರಾಗಿದ್ದಾಗ, ನಿಮಗೆ ಮನಸ್ಸು ಬಂದಂತೆಲ್ಲಾ ಮೂಕ ವಿಗ್ರಹಗಳ ಬಳಿ ಹೋಗಿ
ಬರುತ್ತಿದ್ದಿರಿ; ಇದನ್ನು ನೀವೇ ಬಲ್ಲಿರಿ. 3ಇಷ್ಟು ಮಾತ್ರ ನಿಮಗೆ ಸ್ಪಷ್ಟವಾಗಿ ತಿಳಿದಿರಲಿ; ಪವಿತ್ರಾತ್ಮ
ಪ್ರೇರಣೆಯಿಂದ ಮಾತನಾಡುವ ಯಾವಾತನೂ, "ಯೇಸುವಿಗೆ ಧಿಕ್ಕಾರ!" ಎನ್ನಲಾರನು. ಅಂತೆಯೇ,
ಪವಿತ್ರಾತ್ಮ ಪ್ರೇರಣೆಯಿಂದಲ್ಲದೆ ಯಾವಾತನೂ, "ಯೇಸುವೇ ಪ್ರಭು," ಎಂದು ಒಪ್ಪಿಕೊಳ್ಳಲಾರನು.
4 ವರದಾನಗಳು ವಿಧವಿಧವಾಗಿವೆ; ಅವುಗಳನ್ನು ಕೊಡುವ ಪವಿತ್ರಾತ್ಮ ಒಬ್ಬರೇ. 5ಸೇವೆಗಳು
ವಿಧವಿಧವಾಗಿವೆ; ಅವುಗಳನ್ನು ಸ್ವೀಕರಿಸುವ ಪ್ರಭುವು ಒಬ್ಬರೇ. 6ಶಕ್ತಿಸಾಮರ್ಥ್ಯವು ನಾನಾ ವಿಧ; ಅವುಗಳನ್ನು
ಎಲ್ಲರಲ್ಲೂ ಸಾಧಿಸುವ ದೇವರು ಒಬ್ಬರೇ. 7ಪ್ರತಿಯೊಬ್ಬನಲ್ಲಿ ಕಂಡು ಬರುವ ಪವಿತ್ರಾತ್ಮರ ವರದಾನಗಳನ್ನು
ಸರ್ವರ ಒಳಿತಿಗಾಗಿಯೇ ಕೊಡಲಾಗಿದೆ. 8ಪವಿತ್ರಾತ್ಮ ಮುಖಾಂತರ ಒಬ್ಬನಿಗೆ ಜ್ಞಾನೋಕ್ತಿಗಳು, ಇನ್ನೊಬ್ಬನಿಗೆ
ಅವರ ಮುಖಾಂತರವೇ ವಿದ್ಯೋಕ್ತಿಗಳು ಲಭಿಸುತ್ತವೆ; 9ಅದೇ ಪವಿತ್ರಾತ್ಮರಿಂದ ಒಬ್ಬನಿಗೆ ಅಗಾಧ ವಿಶ್ವಾಸವೂ
ಇನ್ನೊಬ್ಬನಿಗೆ ಸ್ವಸ್ಥತೆಯನ್ನೀಯುವ ಶಕ್ತಿಯೂ ದೊರಕುತ್ತದೆ. 10ಒಬ್ಬನಿಗೆ ಪವಾಡಗಳನ್ನು ಎಸಗುವ
ಪರಾಕ್ರಮವನ್ನು, ಇನ್ನೊಬ್ಬನಿಗೆ ಪ್ರವಾದನೆ ಮಾಡುವ ಪ್ರತಿಭೆಯನ್ನು, ಮತ್ತೊಬ್ಬನಿಗೆ ಸತ್ಯಾಸತ್ಯವನ್ನು
ವಿವೇಚಿಸುವ ಜಾಣ್ಮೆಯನ್ನು, ಮಗದೊಬ್ಬನಿಗೆ ವಿವಿಧ ಭಾಷೆಗಳನ್ನಾಡುವ ಸಾಮರ್ಥ್ಯವನ್ನು, ಮತ್ತೂ ಒಬ್ಬನಿಗೆ
ಅವುಗಳನ್ನು ಅರ್ಥೈಸುವ ಅರಿವನ್ನು ಆ ಪವಿತ್ರಾತ್ಮರಿಂದಲೇ ಕೊಡಲಾಗುತ್ತದೆ. 11ಈ ವರಗಳನ್ನೆಲ್ಲ ಆ
ಪವಿತ್ರಾತ್ಮ ಒಬ್ಬರೇ ತಮ್ಮ ಇಷ್ಟಾನುಸಾರ ಪ್ರತಿಯೊಬ್ಬನಿಗೂ ಹಂಚುತ್ತಾರೆ.
12 ದೇಹ ಒಂದೇ; ಅಂಗಗಳು ಹಲವು. ಆ ಅಂಗಗಳು ಅನೇಕವಿದ್ದರೂ ಅವು ಸೇರಿ ಒಂದೇ
ದೇಹವಾಗುತ್ತದೆ. ಅಂತೆಯೇ ಕ್ರಿಸ್ತಯೇಸು. 13ಯೆಹೂದ್ಯರಾಗಿರಲಿ, ಗ್ರೀಕರಾಗಿರಲಿ, ಪರತಂತ್ರರಾಗಿರಲಿ,
ಸ್ವತಂತ್ರರಾಗಿರಲಿ – ನಾವೆಲ್ಲರೂ ಒಂದೇ ದೇಹವಾಗುವಂತೆ ಒಂದೇ ಆತ್ಮದಿಂದ ದೀಕ್ಷಾಸ್ನಾನ ಹೊಂದಿದ್ದೇವೆ.
ಒಂದೇ ಆತ್ಮವನ್ನು ನಮ್ಮೆಲ್ಲರಿಗೂ ಪಾನವಾಗಿ ಕೊಡಲಾಗಿದೆ.

## ಕ್ರಿಸ್ತೇಸುವಿನ ಅಂಗಾಂಗಗಳು ನಾವು

14 ದೇಹವು ಏಕ ಅಂಗದಿಂದ ಅಲ್ಲ, ಅನೇಕ ಅಂಗಗಳಿಂದ ಕೂಡಿದೆ. 15ಎಂದಾದರೂ ಕಾಲು,
"ನಾನು ಕೈ ಅಲ್ಲ, ಈ ಕಾರಣ ನಾನು ದೇಹಕ್ಕೆ ಸೇರಿಲ್ಲ," ಎಂದು ಹೇಳಿದ್ದಾದರೆ ಅದು ದೇಹದ
ಅಂಗವಾಗಿರುವುದು ತಪ್ಪೀತೆ? 16ಅಥವಾ ಕಿವಿ, "ನಾನು ಕಣ್ಣಲ್ಲ, ಈ ಕಾರಣ ನಾನು ದೇಹಕ್ಕೆ ಸೇರಿಲ್ಲ,"
ಎಂದು ಹೇಳಿದ್ದಾದರೆ ಅದು ದೇಹದ ಅಂಗವಾಗಿರುವುದು ತಪ್ಪೀತೆ? 17ದೇಹವಿಡೀ ಕಣ್ಣೇ ಆದರೆ ಅದು
ಕೇಳುವ ಬಗೆ ಹೇಗೆ? ಅಥವಾ ಅದು ಇಡೀ ಕಿವಿಯೇ ಆದರೆ, ಮೂಸಲು ಮೂಗು ಎಲ್ಲಿ? 18ಸದ್ಯ, ದೇವರು
ತಮ್ಮ ಚಿತ್ತಾನುಸಾರ, ಪ್ರತಿಯೊಂದು ಅಂಗವನ್ನು ಸರಿಯಾಗಿ ಜೋಡಿಸಿದ್ದಾರೆ. 19ಅವೆಲ್ಲವೂ ಒಂದೇ
ಅಂಗವಾಗಿದ್ದರೆ ಆಗ ದೇಹವೆಲ್ಲಿ? 20ಹೀಗೆ ಅಂಗಗಳು ಅನೇಕವಾಗಿದ್ದರೂ ದೇಹ ಮಾತ್ರ ಏಕ.

21 ಹೀಗಿರಲಾಗಿ, “ನಿನ್ನ ಅವಶ್ಯಕತೆ ನನಗಿಲ್ಲ,” ಎಂದು ಕೈಗೆ, ಕಣ್ಣು ಹೇಳಲಾಗದು. ಅಂತೆಯೇ,
“ನಿನ್ನ ಅವಶ್ಯಕತೆ ನನಗಿಲ್ಲ,” ಎಂದು ಕಾಲುಗಳಿಗೆ, ತಲೆ ಹೇಳಲಾಗದು. 22ಅಷ್ಟು ಮಾತ್ರವಲ್ಲ, ಬಲಹೀನವಾಗಿ
ತೋರುವ ಅಂಗಗಳೂ ನಮಗೆ ಬೇಕೇಬೇಕು. 23ಅಲ್ಪವೆಂದೆಣಿಸುವ ಅಂಗಗಳನ್ನು ಅಧಿಕವಾಗಿ
ಮಾನ್ಯಮಾಡುತ್ತೇವೆ. ಗೋಪ್ಯವಾಗಿಡತಕ್ಕವುಗಳನ್ನು ಶೀಲದಿಂದ ಸಂರಕ್ಷಿಸುತ್ತೇವೆ. 24ಬಾಹ್ಯ ಅಂಗಗಳಿಗೆ
ಇಂಥ ಸಂರಕ್ಷಣೆ ಅಗತ್ಯವಿರುವುದಿಲ್ಲ. ದೇಹವನ್ನು ನಿರ್ಮಿಸಿದ ದೇವರು ಗೌಣವೆಂದೆಣಿಸಲಾಗುವ
ಅಂಗಗಳಿಗೂ ವಿಶೇಷ ಘನತೆಯನ್ನು ಇತ್ತಿದ್ದಾರೆ. 25ದೇಹದಲ್ಲಿ ಭಿನ್ನಭೇದವಿಲ್ಲದೆ ಅಂಗಗಳು ಒಂದಕ್ಕೊಂದರ
ಹಿತವನ್ನು ಗಮನಿಸುವಂತೆ ಮಾಡಿದ್ದಾರೆ. 26ಒಂದು ಅಂಗಕ್ಕೆ ನೋವಾದರೆ, ಎಲ್ಲಾ ಅಂಗಗಳೂ
ಅದರೊಂದಿಗೆ ನೋವನ್ನು ಅನುಭವಿಸುತ್ತವೆ. ಒಂದು ಅಂಗಕ್ಕೆ ನಲಿವಾದರೆ, ಮಿಕ್ಕೆಲ್ಲಾ ಅಂಗಗಳು
ಅದರೊಡನೆ ಸೇರಿ ನಲಿದಾಡುತ್ತವೆ.

27 ನೀವೆಲ್ಲರೂ ಕ್ರಿಸ್ತಯೇಸುವಿನ ದೇಹ ಆಗಿದ್ದೀರಿ; ಪ್ರತಿಯೊಬ್ಬನೂ ಈ ದೇಹದ ಅಂಗವಾಗಿದ್ದಾನೆ.
28ದೇವರು ತಮ್ಮ ಸಭೆಯಲ್ಲಿ, ಮೊದಲನೆಯದಾಗಿ ಪ್ರೇಷಿತರನ್ನು, ಎರಡನೆಯದಾಗಿ ಪ್ರವಾದಿಗಳನ್ನು,
ಮೂರನೆಯದಾಗಿ ಬೋಧಕರನ್ನು ನೇಮಿಸಿದ್ದಾರೆ. ಅನಂತರ ಪವಾಡಗಳನ್ನು ಎಸಗುವವರನ್ನು,
ರೋಗಗಳನ್ನು ಗುಣಪಡಿಸುವವರನ್ನು, ಪರೋಪಕಾರಿಗಳನ್ನು, ಪರಿಪಾಲಕರನ್ನು, ಬಹುಭಾಷಾ ಪಂಡಿತರನ್ನು
ನೇಮಿಸಿದ್ದಾರೆ. 29ಎಲ್ಲರೂ ಪ್ರೇಷಿತರಲ್ಲ, ಎಲ್ಲರೂ ಪ್ರವಾದಿಗಳಲ್ಲ, ಎಲ್ಲರೂ ಬೋಧಕರಲ್ಲ, ಎಲ್ಲರೂ
ಪವಾಡಪುರುಷರಲ್ಲ, 30ಎಲ್ಲರೂ ರೋಗಗಳನ್ನು ಗುಣಪಡಿಸುವವರಲ್ಲ, ಎಲ್ಲರೂ ಪರೋಪಕಾರಿಗಳಲ್ಲ,
ಎಲ್ಲರೂ ಪರಿಪಾಲಕರಲ್ಲ, ಎಲ್ಲರೂ ಬಹುಭಾಷಾಪಂಡಿತರಲ್ಲ, ಅಥವಾ ಎಲ್ಲರೂ ಆ ಭಾಷೆಗಳನ್ನು ವಿವರಿಸಿ
ಹೇಳುವವರಲ್ಲ.

31 ಶ್ರೇಷ್ಠವಾದ ವರಗಳನ್ನು ನೀವು ಶ್ರದ್ಧಾಪೂರ್ವಕವಾಗಿ ಅಪೇಕ್ಷಿಸಿರಿ. ನಾನು ನಿಮಗೆ ಇನ್ನೂ
ಸರ್ವೋತ್ತಮವಾದ ಮಾರ್ಗವನ್ನು ತೋರಿಸುತ್ತೇನೆ:

## **ಪರಮ ಪ್ರೀತಿ**

**13** ಸುರನರರ ನುಡಿಗಳ ನಾನಾಡಬಲ್ಲೆ
ನಾದರೂ
ಪರಮ ಪ್ರೀತಿಯೊಂದೆನಗಿಲ್ಲದಿರಲು
ನಾ ಕೇವಲ ಗಣಗಣಿಸುವ ಘಂಟೆ,
ಝಣಝಣಿಸುವ ಜಾಗಟೆ.
2 ಪ್ರವಾದನೆಯ ವರವೆನಗಿರಬಹುದು
ಇರಬಹುದು ನಿಗೂಢ ರಹಸ್ಯಗಳರಿವು
ಎಲ್ಲದರ ಪರಿಜ್ಞಾನ, ಪರ್ವತವನೇ ಕದಲಿಪ
ವಿಶ್ವಾಸ
ಪ್ರೀತಿಯೊಂದಿಲ್ಲದಿರೆ ನಾ ಶೂನ್ಯಸಮಾನ.
3 ನನಗಿರುವುದೆಲ್ಲವನು ನಾ ದಾನಮಾಡೆ
ದೇಹವನೆ ಸಜೀವ ದಹಿಸಲು ನೀಡೆ
ನಾನಾಗಿರೆ ಪರಮ ಪ್ರೀತಿ ವಿಹೀನ
ಏನದು ಜೀವನ, ನನಗೇನದು ಪ್ರಯೋಜನ?
4–6 ಸಹನೆ ಸ್ಥೈರಣೆ, ದಯೆದಾಕ್ಷಿಣ್ಯ ಪ್ರೀತಿಯಲ್ಲಿವೆ.
ಎಡೆಯಿಲ್ಲ ಅದರಲಿ ಗರ್ವಕೆ, ಮರ್ಮಕೆ,
ಮೆರೆತಕೆ, ಮತ್ಸರಕೆ, ಸಿಡುಕಿಗೆ, ಸೊಕ್ಕಿಗೆ,

ಸ್ವಾರ್ಥಕೆ, ಸೇಡುಗಳೆಣಿಕೆಗೆ.
ನಲಿಯದು ಪ್ರೀತಿ ಅನೀತಿಯಲಿ
ನಲಿಯದಿರದದು ಸತ್ಯದ ಜಯದಲಿ.
7 ನಂಬುವುದೆಲ್ಲವನು, ನಿರೀಕ್ಷಿಸುವುದೆಲ್ಲವನು,
ಸಹಿಸಿಕೊಳ್ಳುವುದು ಸಮಸ್ತವನು
ಪ್ರೀತಿಯದೆಂದೂ ಅರಿಯದು ಸೋಲನು.
8–9 ಅಳಿದುಹೋಗುವುವು ಭವಿಷ್ಯವಾಣಿ
ಗತಿಸಿಹೋಗುವುದು ಬಹುಭಾಷಾ ಶಕ್ತಿ
ಹೋಗುವುವು ನಶಿಸಿ ಜ್ಞಾನ, ಬುದ್ಧಿ.
ಆದರೆ ಅಮರವಾದುದು ಪರಮ ಪ್ರೀತಿ.
10 ಅಪೂರ್ವವಾದುದು ನಮ್ಮಾ ಅರಿವೆಲ್ಲ
ಪೂರ್ಣವಾದುದಲ್ಲ ಪ್ರವಾದನವದೆಲ್ಲ;
ಪರಿಪೂರ್ಣತೆ ಪ್ರಾಪ್ತವಾಗಲು
ಇಲ್ಲವಾಗುವುದು ಅಪೂರ್ಣತೆಯೆಲ್ಲ.
11 ಬಾಲಕ ನಾನಾಗಿರೆ ಆಡಿದೆ, ಮಾತಾಡಿದೆ,
ಚಿಂತಿಸಿದೆ, ಸುಖದುಃಖಗಳ ಸವಿದೆ
ಬಾಲಕನಂತೆ.
ಬಲಿತು ಬೆಳೆದು ಮನುಜನಾದುದೆ
ಬಾಲಿಶವಾದುದೆಲ್ಲವನು ಬದಿಗೊತ್ತಿದೆ.
12 ನಾವೀಗ ಕಾಂಬುದು ದರ್ಪಣದ ಬಿಂಬವನು
ಮುಸುಕಾಗಿ
ತರುವಾಯ ಕಾಂಬೆವು ದೇವರನು
ಮುಖಾಮುಖಿಯಾಗಿ.
ಈಗಿರುವುದೆನ್ನ ಅರಿವು ತುಂಡುತುಂಡಾಗಿ
ನಂತರ ದೇವನೆನ್ನ ಅರಿತಂತೆ
ಈ ಮೂರರಲಿ ನಾನರಿವೆನು ಅಖಂಡವಾಗಿ
13 ನಿಲ್ಲುವುವು ನಂಬಿಕೆ, ನಿರೀಕ್ಷೆ, ಪ್ರೀತಿ ನೆಲೆಯಾಗಿ;
ಈ ಮೂರರಲಿ ಪ್ರೀತಿಯೇ ಪರಮೋನ್ನತ
ವೆಂಬುದ ನೀನರಿ.

### ಪರವಶಾಭಾಷೆಯೋ? ಪ್ರಬೋಧನೆಯೋ?

**14** ಪ್ರೀತಿಯನ್ನು ಅರಸಿರಿ. ಪವಿತ್ರಾತ್ಮರ ವರಗಳನ್ನು ಬಯಸಿರಿ. ದೇವರ ಸಂದೇಶವನ್ನು ಸಾರಲು
ಹಂಬಲಿಸಿರಿ. 2ಪರವಶಾ ಭಾಷೆಯನ್ನು ಆಡುವವನು ಮಾನವನೊಡನಲ್ಲ, ದೇವರೊಡನೆ ಮಾತನಾಡುತ್ತಾನೆ.
ಪವಿತ್ರಾತ್ಮರ ಪ್ರೇರಣೆಯಿಂದ ನಿಗೂಢ ವಿಷಯಗಳ ಬಗ್ಗೆ ಮಾತನಾಡುವುದರಿಂದ ಯಾರೂ ಆತನ ಮಾತನ್ನು
ಅರ್ಥಮಾಡಿಕೊಳ್ಳಲಾರರು. 3ಅವನ ಮಾತು ಭಕ್ತಿಯನ್ನು ವೃದ್ಧಿಸುತ್ತದೆ. ಉತ್ಸಾಹವನ್ನುಂಟು ಮಾಡುತ್ತದೆ,
ಉಪಶಮನವನ್ನು ತರುತ್ತದೆ. 4ಪರವಶಾಭಾಷೆಗಳನ್ನು ಆಡುವವನು ತನ್ನನ್ನೇ ಅಭಿವೃದ್ಧಿಗೊಳಿಸಿಕೊಳ್ಳುತ್ತಾನೆ.
ಆದರೆ ದೇವರ ವಾಕ್ಯವನ್ನು ಸಾರುವವನು ಇಡೀ ಧರ್ಮಸಭೆಯನ್ನೇ ಅಭಿವೃದ್ಧಿಗೊಳಿಸುತ್ತಾನೆ. 5ನೀವೆಲ್ಲರೂ
ಪರವಶಾಭಾಷೆಗಳನ್ನು ಆಡಬಹುದಾದರೂ ದೇವರ ವಾಕ್ಯವನ್ನು ಸಾರುವವರಾಗಬೇಕೆಂಬುದೇ ನನ್ನ

ಅಭಿಲಾಷೆ. ಪರವಶಾ ಭಾಷೆಗಳನ್ನು ಆಡುವಾತನು ಧರ್ಮಸಭೆಯ ಅಭಿವೃದ್ಧಿಗಾಗಿ ತನ್ನ ಮಾತಿನ
ಅರ್ಥವನ್ನು ಹೇಳಲಾರನಾದರೆ, ಅವನಿಗಿಂತಲೂ ದೇವರ ವಾಕ್ಯವನ್ನು ಸಾರುವವನೇ ಶ್ರೇಷ್ಠನು.

6 ಸಹೋದರರೇ, ನಾನು ನಿಮ್ಮ ಬಳಿಗೆ ಬಂದು ದೇವರ ಶ್ರುತಿಯನ್ನು, ನೈಜ ಜ್ಞಾನವನ್ನು, ದೇವರ
ವಾಕ್ಯವನ್ನು, ದಿವ್ಯ ಬೋಧೆಯನ್ನು ನೀಡದೆ ಪರವಶಾಭಾಷೆಗಳಲ್ಲಿಯೇ ಮಾತನಾಡಿದರೆ ನಿಮಗೆ ಸಿಗುವ
ಲಾಭವಾದರೂ ಏನು? 7ಕೊಳಲು, ವೀಣೆ ಮೊದಲಾದ ನಿರ್ಜೀವ ವಾದ್ಯಗಳು ನಾದವನ್ನು ಹೊಮ್ಮಿಸುತ್ತವೆ;
ಅವುಗಳ ಸ್ವರಗಳಲ್ಲಿ ಯಾವ ವ್ಯತ್ಯಾಸವೂ ಕಂಡು ಬರದಿದ್ದರೆ, ನುಡಿಸಿದ್ದು, ಬಾಜಿಸಿದ್ದು ಇಂತಹುದೇ
ರಾಗವೆಂದು ತಿಳಿಯುವುದು ಹೇಗೆ? 8ರಣಕಹಳೆಯು ನಿರ್ದಿಷ್ಟವಾದ ಧ್ವನಿಯನ್ನು ಮೊಳಗಿಸದಿದ್ದರೆ ಯಾರು
ತಾನೇ ಯುದ್ಧ ಸನ್ನದ್ಧರಾಗಿರುತ್ತಾರೆ? 9ಅಂತೆಯೇ, ನೀವು ಸಹ ಪರವಶಾಭಾಷೆಯನ್ನು ಆಡುವಾಗ,
ಇತರರಿಗೆ ಅದು ಅರ್ಥವಾಗದಿದ್ದರೆ, ಅವರು ನಿಮ್ಮ ಮಾತನ್ನು ತಿಳಿದುಕೊಳ್ಳುವುದಾದರೂ ಹೇಗೆ? ನಿಮ್ಮ
ಮಾತು ಗಾಳಿ ಪಾಲಾಗುತ್ತದಷ್ಟೆ. 10ಜಗತ್ತಿನಲ್ಲಿ ಎಷ್ಟೋ ಭಾಷೆಗಳಿವೆ. ಅವುಗಳಲ್ಲಿ ಒಂದಾದರೂ
ಅರ್ಥರಹಿತವಾದುದಲ್ಲ. 11ಭಾಷೆಯ ಅರ್ಥವು ನನಗಾಗದಿದ್ದರೆ ಮಾತನಾಡುವವನಿಗೆ ನಾನು
ಪರಕೀಯನಂತಾಗುತ್ತೇನೆ; ನನಗೆ ಅವನು ಪರಕೀಯನಂತಾಗುತ್ತಾನೆ. 12ಆದ್ದರಿಂದ ಪವಿತ್ರಾತ್ಮ ವರಗಳ
ಮೇಲೆ ಆಸಕ್ತಿಯುಳ್ಳ ನೀವು, ಧರ್ಮಸಭೆಯನ್ನು ಅಭಿವೃದ್ಧಿಗೊಳಿಸಬಲ್ಲ ವರಗಳ ಮೇಲೆ ಆಸಕ್ತರಾಗಿರಿ.

13 ಪರವಶಾಭಾಷೆಗಳಲ್ಲಿ ಮಾತನಾಡುವವನು ತಾನಾಡುವ ಮಾತಿನ ಅರ್ಥವನ್ನು ಹೇಳುವ
ಸಾಮರ್ಥ್ಯಕ್ಕಾಗಿ ದೇವರನ್ನು ಪ್ರಾರ್ಥಿಸಲಿ. 14ಏಕೆಂದರೆ, ನಾನು ಪರವಶಾಭಾಷೆಯಲ್ಲಿ ಪ್ರಾರ್ಥಿಸಿದರೆ ನನ್ನ
ಆತ್ಮವೇನೋ ಪ್ರಾರ್ಥಿಸಿದಂತೆ ಆಗುತ್ತದೆ; ಆದರೆ ಮನಸ್ಸು ಮಾತ್ರ ಅದನ್ನು ಗ್ರಹಿಸುವುದಿಲ್ಲ. 15ಹಾಗಾದರೆ
ಈಗ ನಾನೇನು ಮಾಡಬೇಕು? ಆತ್ಮದಿಂದಲೂ ಪ್ರಾರ್ಥಿಸಬೇಕು, ಮನಸ್ಸಿನಿಂದಲೂ ಪ್ರಾರ್ಥಿಸಬೇಕು,
ಆತ್ಮದಿಂದಲೂ 16ಸಭೆಯಲ್ಲಿ ನೀನು ಆತ್ಮದಿಂದ ಮಾತ್ರ ದೇವರ ಸ್ತುತಿಮಾಡಿದರೆ ನಿನ್ನ ಹಾಗೆ
ಪರವಶನಲ್ಲದವನು ನಿನ್ನ ಕೃತಜ್ಞತಾ ಸ್ತುತಿಗೆ 'ಆಮೆನ್' ಎಂದು ಹೇಗೆ ತಾನೇ ಹೇಳಬಲ್ಲನು? ನೀನು
ಹೇಳುವುದೇ ಅವನಿಗೆ ತಿಳಿಯುವುದಿಲ್ಲವಲ್ಲಾ! 17ನೀನು ಮಾಡುವ ಕೃತಜ್ಞತಾಸ್ತುತಿ ಎಷ್ಟು ಚೆನ್ನಾಗಿದ್ದರೂ
ಅವನ ಮಟ್ಟಿಗೆ ಅದು ನಿಷ್ಪ್ರಯೋಜಕವೇ.

18 ನಾನಾದರೋ ದೇವರ ದಯೆಯಿಂದ ನಿಮಗಿಂತಲೂ ಮಿಗಿಲಾಗಿ ಪರವಶಾಭಾಷೆಗಳನ್ನು
ಆಡಬಲ್ಲೆ. 19ಆದರೂ ಸಭೆಯಲ್ಲಿ ಪರವಶನಾಗಿ ಹತ್ತು ಸಾವಿರ ನುಡಿಗಳನ್ನಾಡುವ ಬದಲು ಮನಸ್ಸಾರೆ ಐದೇ
ಮಾತುಗಳನ್ನಾಡಿ ಉಪದೇಶಿಸುವುದು ಉತ್ತಮವೆಂದು ನನಗೆ ತೋರುತ್ತದೆ.

20 ಸಹೋದರರೇ, ಬುದ್ಧಿಯ ವಿಷಯದಲ್ಲಿ ಬಾಲಕರಾಗಿರಬೇಡಿ. ದುಷ್ಟ ವಿಷಯಗಳಲ್ಲಿ
ಶಿಶುಗಳಂತೆ ಮುಗ್ಧರಾಗಿರಿ; ಬುದ್ಧಿಯ ವಿಷಯದಲ್ಲಿ ಪ್ರಾಯಸ್ಥರಂತೆ ಪ್ರೌಢರಾಗಿರಿ. 21ಪವಿತ್ರ ಗ್ರಂಥದಲ್ಲಿ
ಇಂತಿದೆ:

"ಅನ್ಯ ಭಾಷೆಯವರ ಮುಖಾಂತರ
ಅನ್ಯ ದೇಶೀಯರ ಬಾಯ ಮುಖಾಂತರ
ನಾನೆನ್ನ ಜನರೊಡನೆ ಮಾತಾಡಿದಾಗಲೂ
ಎನ್ನ ಮಾತಿಗೆ ಕಿವಿಗೊಡರವರು, ಎಂದರು
ಪ್ರಭು."

22ಪರವಶಾಭಾಷೆಗಳನ್ನು ಆಡುವವರ ಸಾಕ್ಷ್ಯ ವಿಶ್ವಾಸಿಗಳಿಗಲ್ಲ, ಅವಿಶ್ವಾಸಿಗಳಿಗೆ. ದೇವರ ವಾಕ್ಯವನ್ನು
ಪ್ರಬೋಧಿಸುವುದರ ಸಾಕ್ಷ್ಯವು ಅವಿಶ್ವಾಸಿಗಳಿಗಲ್ಲ, ವಿಶ್ವಾಸಿಗಳಿಗೆ. 23ಒಂದು ಕಡೆ ಎಲ್ಲರೂ ಸಭೆ ಸೇರಿದಾಗ
ಪ್ರತಿಯೊಬ್ಬನೂ ಪರವಶಾಭಾಷೆಗಳನ್ನು ಆಡಲು ಆರಂಭಿಸಿದರೆ ಅಲ್ಲಿಗೆ ಬರುವ ಅಪರಿಚಿತರು, ಅವಿಶ್ವಾಸಿಗಳು
ನಿಮ್ಮನ್ನು ಹುಚ್ಚರೆಂದು ಕರೆಯಲಾರರೇ? 24ಬದಲಾಗಿ, ಬರುವ ಅಪರಿಚಿತರ ಹಾಗೂ ಅವಿಶ್ವಾಸಿಗಳ ಮುಂದೆ
ಎಲ್ಲರೂ ದೇವರ ವಾಕ್ಯವನ್ನು ಪ್ರಬೋಧಿಸಿದರೆ ಅವರಲ್ಲಿ ಒಬ್ಬನಾದರೂ ತಾನು ಕೇಳಿದ ಮಾತಿನಿಂದ ತನ್ನ
ಪಾಪವನ್ನು ಒಪ್ಪಿಕೊಳ್ಳುತ್ತಾನೆ; ಅವನು ಎಲ್ಲರ ಮಾತಿನಿಂದ ತನ್ನನ್ನು ತಾನೇ ಪರೀಕ್ಷಿಸಿಕೊಳ್ಳುತ್ತಾನೆ. 25ಅವನ
ಅಂತರಾಳದ ವಿಚಾರಗಳು ಬಯಲಾಗುತ್ತವೆ. ಅವನು ಅಡ್ಡಬಿದ್ದು ದೇವರನ್ನು ಆರಾಧಿಸುತ್ತಾನೆ. "ದೇವರು
ನಿಜವಾಗಿಯೂ ನಿಮ್ಮ ಮಧ್ಯೆ ಇದ್ದಾರೆ," ಎಂದು ಪ್ರಚುರಪಡಿಸುತ್ತಾನೆ.

26 ಹಾಗಾದರೆ ಪ್ರಿಯ ಸಹೋದರರೇ, ನಾವು ನಡೆದುಕೊಳ್ಳಬೇಕಾದ ಬಗೆ ಹೇಗೆ? ನೀವು ಸಭೆ ಸೇರಿದಾಗ ನಿಮ್ಮಲ್ಲಿ ಒಬ್ಬನು ಹಾಡುತ್ತಾನೆ; ಇನ್ನೊಬ್ಬನು ಉಪದೇಶ ಮಾಡುತ್ತಾನೆ; ಮತ್ತೊಬ್ಬನು ದೇವರು ತನಗೆ ಶ್ರುತಪಡಿಸಿದ್ದನ್ನು ತಿಳಿಸುತ್ತಾನೆ; ಇನ್ನೂ ಒಬ್ಬನು ಪರವಶಾಭಾಷೆಯನ್ನಾಡುತ್ತಾನೆ. ಮಗದೊಬ್ಬನು ಅದಕ್ಕೆ ಅರ್ಥ ಹೇಳುತ್ತಾನೆ ಎಂದಿಟ್ಟುಕೊಳ್ಳೋಣ. ನೀವು ಏನು ಮಾಡಿದರೂ ಧರ್ಮಸಭೆಯ ಅಭಿವೃದ್ಧಿಗಾಗಿಯೇ ಮಾಡಬೇಕು. [27]ಪರವಶಾಭಾಷೆಯನ್ನು ಆಡುವುದಾದರೆ ಇಬ್ಬರು, ಹೆಚ್ಚೆಂದರೆ ಮೂವರು ಮಾತನಾಡಲಿ. ಆದರೆ ಒಬ್ಬರ ನಂತರ ಇನ್ನೊಬ್ಬರು ಮಾತನಾಡಲಿ. ಬೇರೊಬ್ಬರು ವಿವರಿಸಲಿ. [28]ವಿವರಿಸಬಲ್ಲವರು ಯಾರೂ ಇಲ್ಲವಾದರೆ, ಪರವಶಾಭಾಷೆಯನ್ನು ಆಡುವವನು ಸಭೆಯಲ್ಲಿ ಮೌನದಿಂದಿರಲಿ. ತನ್ನೊಳಗೆ ದೇವರೊಡನೆ ಮಾತನಾಡಿಕೊಳ್ಳಲಿ. [29]ದೇವರ ವಾಕ್ಯವನ್ನು ಬೋಧಿಸುವವರು ಇಬ್ಬರು ಇಲ್ಲವೆ ಮೂವರು ಮಾತ್ರ ಮಾತನಾಡಲಿ. ಉಳಿದವರು ಅವರ ಮಾತನ್ನು ವಿವೇಚಿಸಲಿ. [30]ಸಭೆಯಲ್ಲಿ ಕುಳಿತವರಲ್ಲಿ ಒಬ್ಬನಿಗೆ ದೇವರ ಶ್ರುತಿಲಭಿಸಿತೆಂದರೆ ಮೊದಲು ಮಾತನಾಡುತ್ತಿದ್ದವನು ಮೌನ ತಳೆಯಲಿ. [31]ನೀವು, ಒಬ್ಬರಾದ ಮೇಲೆ ಒಬ್ಬರು ದೇವರ ವಾಕ್ಯವನ್ನು ಬೋಧಿಸಬಹುದು. ಆಗ ಎಲ್ಲರೂ ಕಲಿತುಕೊಂಡು ಪ್ರೋತ್ಸಾಹ ಪಡೆಯಲು ಸಾಧ್ಯವಾಗುತ್ತದೆ. [32]ದೇವರ ವಾಕ್ಯವನ್ನು ಬೋಧಿಸುವವರು ತಮ್ಮ ವಾಕ್ಚಾತುರ್ಯವನ್ನು ಸ್ವಾಧೀನದಲ್ಲಿಟ್ಟುಕೊಳ್ಳಬೇಕು. [33]ದೇವರು ಗಲಿಬಿಲಿಯನ್ನು ಬಯಸುವವರಲ್ಲ; ಅವರು ಶಾಂತಿ ಮತ್ತು ಸುವ್ಯವಸ್ಥೆಯ ದೇವರು.

34 ಎಲ್ಲ ಕ್ರೈಸ್ತಸಭೆಗಳಲ್ಲಿ ರೂಢಿಯಲ್ಲಿರುವಂತೆ ಮಹಿಳೆಯರು ಮೌನವಾಗಿರಲಿ; ಮಾತನಾಡಲು ಅವರಿಗೆ ಅನುಮತಿಯಿಲ್ಲ. ಧರ್ಮಶಾಸ್ತ್ರದಲ್ಲಿ ಹೇಳಿರುವಂತೆ ಅವರು ಅಧೀನರಾಗಿರಬೇಕು. [35]ಅವರು ಏನನ್ನಾದರೂ ತಿಳಿಯಬಯಸಿದರೆ, ಮನೆಯಲ್ಲಿ ತಮ್ಮ ತಮ್ಮ ಗಂಡಂದಿರನ್ನು ಕೇಳಿ ತಿಳಿದುಕೊಳ್ಳಲಿ. ಮಹಿಳೆಯರು ಸಭಾಕೂಟದಲ್ಲಿ ಮಾತನಾಡುವುದು ಲಕ್ಷಣವಲ್ಲ.

36 ದೇವರ ವಾಕ್ಯ ನಿಮ್ಮಿಂದ ಹೊರಟಿತೋ? ಅಥವಾ ನಿಮಗೆ ಮಾತ್ರ ತಲುಪಿತೋ? [37]ನಿಮ್ಮಲ್ಲಿ ಯಾರಾದರೊಬ್ಬನು ತಾನು ದೇವರ ವಾಕ್ಯವನ್ನು ಬೋಧಿಸುವವನು ಅಥವಾ ಪವಿತ್ರಾತ್ಮ ಪ್ರೇರಣೆಯನ್ನು ಹೊಂದಿದವನು ಎಂದು ಭಾವಿಸುವುದಾದರೆ, ನಾನು ನಿಮಗೆ ಬರೆದಿರುವುದೆಲ್ಲ ಪ್ರಭುವಿನ ಆಜ್ಞೆಯೆಂದು ಚೆನ್ನಾಗಿ ತಿಳಿದುಕೊಳ್ಳಲಿ. [38]ಯಾರಾದರು ಇದನ್ನು ಒಪ್ಪಿಕೊಳ್ಳದಿದ್ದರೆ, ನೀವು ಅವರನ್ನು ಒಪ್ಪಿಕೊಳ್ಳಬೇಕಾಗಿಲ್ಲ. [39]ಸಹೋದರರೇ, ದೇವರ ವಾಕ್ಯವನ್ನು ಸಾರುವುದರಲ್ಲಿ ಆಸಕ್ತರಾಗಿರಿ. ಪರವಶಾಭಾಷೆಗಳನ್ನು ಆಡುವವರನ್ನು ತಡೆಯಬೇಡಿ. [40]ಆದರೆ ಎಲ್ಲವನ್ನು ಒಪ್ಪವಾಗಿ, ಓರಣವಾಗಿ ಮಾಡಿರಿ.

## ಪುನರುತ್ಥಾನದ ಪ್ರಮಾಣ

**15** ಪ್ರಿಯ ಸಹೋದರರೇ, ನಾನು ನಿಮಗೆ ಬೋಧಿಸಿದ ಶುಭಸಂದೇಶವನ್ನು ನೆನಪಿಗೆ ತಂದುಕೊಳ್ಳಿರಿ. ನೀವು ಅದನ್ನು ಸ್ವೀಕರಿಸಿದ್ದೀರಿ. ಅದರಲ್ಲಿ ನೆಲೆಯಾಗಿ ನಿಂತಿದ್ದೀರಿ. [2]ನಾನು ನಿಮಗೆ ಶುಭಸಂದೇಶವೆಂದು ತಿಳಿಸಿದ ಸಂಗತಿಯನ್ನು ದೃಢವಾಗಿ ವಿಶ್ವಾಸಿಸಿದರೆ ನೀವು ಜೀವೋದ್ಧಾರವನ್ನು ಪಡೆಯುವಿರಿ. ಇಲ್ಲವಾದರೆ ನಿಮ್ಮ ವಿಶ್ವಾಸ ನಿರರ್ಥಕವಾದೀತು.

3 ನಾನು ಪಡೆದುಕೊಂಡದ್ದನ್ನು ಮುಖ್ಯವಾದುದು ಎಂದೆಣಿಸಿ ನಿಮಗೆ ಒಪ್ಪಿಸಿದ್ದೇನೆ. ಅದು ಯಾವುದೆಂದರೆ, ಪವಿತ್ರಗ್ರಂಥದಲ್ಲಿ ಹೇಳಿರುವ ಪ್ರಕಾರ ಕ್ರಿಸ್ತಯೇಸು ನಮ್ಮ ಪಾಪಗಳ ಪರಿಹಾರಕ್ಕಾಗಿ ಪ್ರಾಣತ್ಯಾಗ ಮಾಡಿದರು. [4]ಅವರನ್ನು ಭೂಸ್ಥಾಪನೆ ಮಾಡಲಾಯಿತು. ಅದೇ ಗ್ರಂಥದ ಪ್ರಕಾರ ಮೂರನೆಯ ದಿನ ಅವರು ಪುನರುತ್ಥಾನ ಹೊಂದಿದರು. [5]ಅನಂತರ ಕೇಫನಿಗೂ ಹನ್ನೆರಡು ಮಂದಿಗೂ ಕಾಣಿಸಿಕೊಂಡರು. [6]ತರುವಾಯ ಒಂದೇ ಸಮಯದಲ್ಲಿ ಐನೂರಕ್ಕೂ ಹೆಚ್ಚಿನ ಮಂದಿ ಸಹೋದರರಿಗೆ ಪ್ರತ್ಯಕ್ಷರಾದರು. ಅವರಲ್ಲಿ ಕೆಲವರು ಸತ್ತುಹೋಗಿದ್ದರೂ ಬಹು ಮಂದಿ ಇಂದಿಗೂ ಬದುಕಿದ್ದಾರೆ. [7]ಅದಾದ ಮೇಲೆ ಯಕೋಬನಿಗೂ ಅನಂತರ ಪ್ರೇಷಿತರೆಲ್ಲರಿಗೂ ಕಾಣಿಸಿಕೊಂಡರು. [8]ಕಟ್ಟಕಡೆಗೆ ದಿನ ತುಂಬುವ ಮೊದಲೇ ಹುಟ್ಟಿದವನಂತಿರುವ ನನಗೂ ಕಾಣಿಸಿಕೊಂಡರು. [9]ನಾನಾದರೋ ಪ್ರೇಷಿತರಲ್ಲಿ ಕನಿಷ್ಠನು,

ಪ್ರೇಷಿತನೆಂಬ ಹೆಸರಿಗೂ ಅಪಾತ್ರನು. ಏಕೆಂದರೆ, ನಾನು ದೇವರ ಸಭೆಯನ್ನು ಹಿಂಸಿಸಿದೆನು. 10ನಾನು ಈಗ
ಈ ಸ್ಥಿತಿಯಲ್ಲಿ ಇರುವುದು ದೇವರ ಅನುಗ್ರಹದಿಂದಲೇ. ಅವರ ಅನುಗ್ರಹ ನನ್ನಲ್ಲಿ ವ್ಯರ್ಥವಾಗಲಿಲ್ಲ. ನಾನು
ಅವರೆಲ್ಲರಿಗಿಂತಲೂ ಹೆಚ್ಚು ಶ್ರಮಪಟ್ಟು ಸೇವೆಮಾಡಿದ್ದೇನೆ. ಅದನ್ನು ಮಾಡಿದವನು ನಾನಲ್ಲ, ನನ್ನಲ್ಲಿರುವ
ದೇವರ ಅನುಗ್ರಹವೇ. 11ನಾನಾದರೇನು, ಅವರಾದರೇನು? ನಾವು ಸಾರುವ ಸಂದೇಶ ಒಂದೇ. ಅದನ್ನು
ನೀವು ನಂಬಿದ್ದೀರಿ.

**ಪುನರುತ್ಥಾನದ ಫಲ**

12 ಕ್ರಿಸ್ತಯೇಸು ಮರಣದಿಂದ ಪುನರುತ್ಥಾನ ಹೊಂದಿದರು ಎಂದು ನಾವು ಸಾರುತ್ತಿರುವಲ್ಲಿ,
ಸತ್ತವರು ಪುನರುತ್ಥಾನರಾಗುವುದಿಲ್ಲ ಎಂದು ನಿಮ್ಮಲ್ಲಿ ಕೆಲವರು ವಾದಿಸುವುದು ಹೇಗೆ? 13ಸತ್ತವರಿಗೆ
ಪುನರುತ್ಥಾನ ಇಲ್ಲವೆಂಬುದು ನಿಜವಾದರೆ ಕ್ರಿಸ್ತಯೇಸು ಪುನರುತ್ಥಾನ ಹೊಂದಲಿಲ್ಲ ಎಂದ ಹಾಗಾಯಿತು.
14ಕ್ರಿಸ್ತಯೇಸು ಪುನರುತ್ಥಾನರಾಗಲಿಲ್ಲ ಎಂದರೆ ನಮ್ಮ ಬೋಧನೆ ಬರಿದು; ನಿಮ್ಮ ವಿಶ್ವಾಸವೂ ಬರಿದು.
15ಸತ್ತವರು ಪುನರುತ್ಥಾನ ಹೊಂದುವುದಿಲ್ಲ ಎಂಬುದು ನಿಜವಾದರೆ ದೇವರು ಕ್ರಿಸ್ತಯೇಸುವನ್ನು
ಪುನರುತ್ಥಾನಗೊಳಿಸಿಲ್ಲ ಎಂದಂತಾಯಿತು. ದೇವರು ಕ್ರಿಸ್ತಯೇಸುವನ್ನು ಸಾವಿನಿಂದ
ಪುನರುತ್ಥಾನಗೊಳಿಸಿದ್ದಾರೆ ಎಂದು ಸಾಕ್ಷಿ ಹೇಳಿದ ನಾವು ಆಗ ದೇವರ ಬಗ್ಗೆಯೇ ಸುಳ್ಳುಸಾಕ್ಷಿ
ಹೇಳಿದಂತಾಯಿತು.

16 ಸತ್ತವರು ಪುನರುತ್ಥಾನ ಹೊಂದುವುದಿಲ್ಲ ಎಂದರೆ ಕ್ರಿಸ್ತಯೇಸುವು ಪುನರುತ್ಥಾನ ಹೊಂದಲಿಲ್ಲ
ಎಂದಂತಾಯಿತು. 17ಕ್ರಿಸ್ತಯೇಸುವೇ ಪುನರುತ್ಥಾನ ಹೊಂದಿಲ್ಲ ಎಂದಮೇಲೆ ನಿಮ್ಮ ವಿಶ್ವಾಸವೇ ನಿರರ್ಥಕ;
ಮತ್ತು ನೀವಿನ್ನೂ ನಿಮ್ಮ ಪಾಪಗಳಲ್ಲಿಯೇ ಮುಳುಗಿದ್ದೀರಿ; 18ಅಷ್ಟೇ ಅಲ್ಲದೆ, ಕ್ರಿಸ್ತಯೇಸುವಿನಲ್ಲಿ
ಮೃತರಾದವರೆಲ್ಲರೂ ವಿನಾಶವಾದರು. 19ಕ್ರಿಸ್ತಯೇಸುವಿನಲ್ಲಿ ನಮಗಿರುವ ನಂಬಿಕೆ ಕೇವಲ ಬದುಕಿಗೆ
ಸೀಮಿತವಾಗಿದ್ದರೆ ಜಗತ್ತಿನಲ್ಲಿ ನಮಗಿಂತ ನಿರ್ಭಾಗ್ಯರು ಬೇರೆ ಯಾರೂ ಇಲ್ಲ.

20 ಕ್ರಿಸ್ತಯೇಸು ಪುನರುತ್ಥಾನಹೊಂದಿದ್ದೇನೋ ಸತ್ಯಸ್ಯ ಸತ್ಯ. ಅವರ ಪುನರುತ್ಥಾನವು, ಸತ್ತವರು
ಪುನರುತ್ಥಾನ ಹೊಂದುತ್ತಾರೆ ಎನ್ನುವುದಕ್ಕೆ ಪ್ರಮಾಣ. 21ಒಬ್ಬ ಮನುಷ್ಯನಿಂದ ಸಾವು ಸಂಭವಿಸಿದಂತೆಯೇ
ಒಬ್ಬ ಮನುಷ್ಯನಿಂದಲೇ ಸತ್ತವರಿಗೆ ಪುನರುತ್ಥಾನವು ಪರಿಣಮಿಸಿತು. 22ಆದಾಮನ ಸಂಬಂಧದಿಂದ ಎಲ್ಲರೂ
ಸಾವಿಗೀಡಾದಂತೆ ಕ್ರಿಸ್ತಯೇಸುವಿನ ಸಂಬಂಧದಿಂದ ಎಲ್ಲರೂ ಜೀವಂತರಾಗಿ ಏಳುತ್ತಾರೆ. 23ಈ ಭಾಗ್ಯವನ್ನು
ಒಬ್ಬೊಬ್ಬನೂ ಕ್ರಮಬದ್ಧ ರೀತಿಯಲ್ಲಿ ಪಡೆಯುತ್ತಾನೆ. ಪ್ರಪ್ರಥಮ ಫಲವಾಗಿ ಕ್ರಿಸ್ತಯೇಸುವೇ ಜೀವಂತರಾದರು.
ಅನಂತರ, ಕ್ರಿಸ್ತಯೇಸುವಿಗೆ ಸೇರಿದವರು ಯೇಸು ಪುನರಾಗಮಿಸುವಾಗ ಜೀವಂತರಾಗುತ್ತಾರೆ. 24ಅಂತ್ಯ
ಬರುವುದು ಅನಂತರವೇ. ಆಗ ಯೇಸು ಎಲ್ಲಾ ಆಧಿಪತ್ಯವನ್ನೂ ಅಧಿಕಾರವನ್ನೂ ಶಕ್ತಿಯನ್ನೂ
ನಿರ್ಮೂಲಮಾಡಿ ತಂದೆಯಾದ ದೇವರಿಗೆ ಸಾಮ್ರಾಜ್ಯವನ್ನು ಒಪ್ಪಿಸಿಕೊಡುವರು. 25ಶತ್ರುಗಳೆಲ್ಲರನ್ನು ತಮ್ಮ
ಪಾದಪೀಠವಾಗಿಸಿಕೊಳ್ಳುವ ತನಕ ಅವರು ರಾಜ್ಯವಾಳಬೇಕಾಗಿದೆ. 26ಕಟ್ಟಕಡೆಗೆ ನಿರ್ಮೂಲವಾಗುವ
ಶತ್ರುವೆಂದರೆ ಮೃತ್ಯುವೇ. 27"ದೇವರು ಎಲ್ಲವನ್ನು ಅಧೀನಪಡಿಸಿ, ಆತನ ಪಾದಪೀಠವನ್ನಾಗಿಸಿದ್ದಾರೆ,"
ಎಂದು ಲಿಖಿತವಾಗಿದೆ. "ಎಲ್ಲವನ್ನೂ ಅಧೀನಪಡಿಸಲಾಗಿದೆ," ಎಂದು ಹೇಳುವಾಗ, ಹಾಗೆ ಅಧೀನಪಡಿಸಿದ
ದೇವರು ಅದರಲ್ಲಿ ಸೇರಲಿಲ್ಲ ಎಂಬುದು ಸುಸ್ಪಷ್ಟವಾಗಿದೆ. 28ಎಲ್ಲವೂ ಕ್ರಿಸ್ತಯೇಸುವಿಗೆ ಅಧೀನವಾದಾಗ
ಪುತ್ರನಾದ ಅವರೇ, ಎಲ್ಲವನ್ನು ತನಗೆ ಅಧೀನಪಡಿಸಿದ ದೇವರಿಗೆ ಅಧೀನರಾಗುತ್ತಾರೆ. ಆಗ ದೇವರು
ಸರ್ವರಿಗೆ ಸರ್ವಸ್ವವೂ ಆಗುತ್ತಾರೆ.

29 ಸತ್ತವರಿಗೆ ಪುನರುತ್ಥಾನವಿಲ್ಲದಿದ್ದರೆ, ಸತ್ತವರಿಗೋಸ್ಕರ ದೀಕ್ಷಾಸ್ನಾನ ಮಾಡಿಸಿಕೊಳ್ಳುತ್ತಾರಲ್ಲ
ಅದರ ಉದ್ದೇಶವೇನು? ಸತ್ತವರಿಗೆ ಪುನರುತ್ಥಾನವೇ ಇಲ್ಲವಾದರೆ ಅವರಿಗೋಸ್ಕರ ದೀಕ್ಷಾಸ್ನಾನ
ಪಡೆಯುವುದರ ಪ್ರಯೋಜನ ಏನು? 30ನಾವು ಕೂಡ ಏಕೆ ಪ್ರತಿಕ್ಷಣದಲ್ಲಿಯೂ ಆಪತ್ತು ವಿಪತ್ತುಗಳನ್ನು
ಎದುರಿಸುತ್ತಿದ್ದೇವೆ. 31ಹೌದು ಸಹೋದರರೇ, ಪ್ರತಿದಿನವೂ ನಾನು ಸಾವಿನ ದವಡೆಯಲ್ಲಿದ್ದೇನೆ. ನಮ್ಮ ಪ್ರಭು
ಯೇಸುಕ್ರಿಸ್ತರಲ್ಲಿ ನಿಮ್ಮ ಬಗ್ಗೆ ನನಗಿರುವ ಹೆಮ್ಮೆಯಿಂದ ಇದನ್ನು ಪ್ರಮಾಣವಾಗಿ ಹೇಳುತ್ತಿದ್ದೇನೆ. 32ಲೋಕ
ಪ್ರಶಂಸೆಗಾಗಿ ನಾನು ಈ ಎಫೆಸದ 'ಕಾಡುಮೃಗ'ಗಳೊಡನೆ ಹೋರಾಡಿದೆನಾದರೆ, ಅದರಿಂದ ಬರುವ

ಲಾಭವಾದರೂ ಏನು? ಸತ್ತವರಿಗೆ ಪುನರುತ್ಥಾನವಿಲ್ಲವಾದರೆ, "ಬನ್ನಿರಿ; ತಿನ್ನೋಣ, ಕುಡಿಯೋಣ, ಕಾದಿದೆಯಲ್ಲ ನಾಳೆ ಮರಣ," ಎಂಬ ನಾಣ್ಣುಡಿಯಂತೆ ನಡೆಯಬಹುದಲ್ಲಾ. [33]ಮೋಸ ಹೋಗದಿರಿ. ಏಕೆಂದರೆ, "ದುರ್ಜನರ ಸಂಗ, ಸದಾಚಾರದ ಭಂಗ." [34]ಜಾಗೃತರಾಗಿರಿ, ದುರ್ಮಾರ್ಗವನ್ನು ಬಿಟ್ಟುಬಿಡಿ, ಸನ್ಮತಿಯುಳ್ಳವರಾಗಿರಿ. ದೇವರನ್ನು ಅರಿಯದ ಮೂಢರು ನಿಮ್ಮಲ್ಲಿ ಕೆಲವರು ಇದ್ದಾರೆ. ನಿಮಗೆ ನಾಚಿಕೆ ಆಗಲೆಂದೇ ಇದನ್ನು ಹೇಳುತ್ತಿದ್ದೇನೆ.

**ಪುನರುತ್ಥಾನದ ಪರಿಣಾಮ**

35 ಸತ್ತವರನ್ನು ಮರಳಿ ಜೀವಂತರಾಗಿಸುವುದು ಹೇಗೆ ಸಾಧ್ಯ? ಅವರ ದೇಹಾಕೃತಿ ಹೇಗಿರುತ್ತದೆ? ಎಂದು ಯಾರಾದರೂ ಕೇಳಿಯಾರು. [36]ಮತಿಹೀನನೇ, ನೀನು ಬಿತ್ತಿದ ಬೀಜ ಸಾಯದಿದ್ದರೆ ಅದು ಜೀವ ತಾಳುವುದುಂಟೆ? ಇಲ್ಲ. [37]ನೀನು ಬಿತ್ತುವುದು ಗೋದಿಯನ್ನು ಅಥವಾ ಇನ್ನಾವುದೋ ಕಾಳನ್ನು; ಮುಂದಕ್ಕೆ ಬೆಳೆಯಲಿರುವ ಇಡೀ ಗಿಡವನ್ನಲ್ಲ. [38]ದೇವರು ತಮ್ಮ ಚಿತ್ತಾನುಸಾರ ಅದಕ್ಕೆ ದೇಹಾಕೃತಿಯನ್ನು ಕೊಡುತ್ತಾರೆ. ಒಂದೊಂದು ಬೀಜಕ್ಕೂ ಅದರದರ ದೇಹಾಕೃತಿಯನ್ನು ಕೊಡುತ್ತಾರೆ.

39 ಎಲ್ಲಾ ಶರೀರಗಳು ಒಂದೇ ವಿಧವಾಗಿಲ್ಲ; ಮನುಷ್ಯನ ಶರೀರ ಬೇರೆ, ಪಶುಗಳ ಶರೀರ ಬೇರೆ, ಪಕ್ಷಿಗಳ ಶರೀರ ಬೇರೆ, ಮೀನುಗಳ ಶರೀರ ಬೇರೆ. [40]ಸ್ವರ್ಗೀಯ ಶರೀರಗಳೂ ಇವೆ. ಪೃಥ್ವಿಯ ಶರೀರಗಳೂ ಇವೆ. ಆದರೆ ಒಂದರ ಸ್ವರೂಪ ಮತ್ತೊಂದರಂತೆ ಇಲ್ಲ. [41]ಸೂರ್ಯನ ಪ್ರಕಾಶ ಒಂದಾದರೆ, ಚಂದ್ರನ ಪ್ರಕಾಶವೇ ಇನ್ನೊಂದು; ನಕ್ಷತ್ರದ ಪ್ರಕಾಶವೇ ಬೇರೊಂದು. ನಕ್ಷತ್ರ ನಕ್ಷತ್ರಗಳ ಪ್ರಕಾಶವು ಸಹ ವೈವಿಧ್ಯವಾದುದು.

42 ಸತ್ತವರ ಪುನರುತ್ಥಾನವೂ ಹಾಗೆಯೇ. ಬಿತ್ತುವಂಥದ್ದು ಅಳಿದುಹೋಗುವಂಥದ್ದು. ಪುನರುತ್ಥಾನವಾಗುವಂಥದ್ದು, ಅಮರವಾದುದು. ಬಿತ್ತಿದ್ದು ಬಲಹೀನವಾದುದು; ಪುನರುತ್ಥಾನ ಹೊಂದುವಂಥದ್ದು, ಬಲಿಷ್ಠವಾದುದು. [43]ಬಿತ್ತದ್ದು ಕುರೂಪಿಯಾದುದು; ಪುನರುತ್ಥಾನ ಹೊಂದುವುದು ಕೋಮಲವಾದುದು. [44]ಬಿತ್ತಿದ್ದು ಭೌತಿಕ ದೇಹ; ಪುನರುತ್ಥಾನ ಹೊಂದುವಂಥದ್ದು ಆಧ್ಯಾತ್ಮಿಕ ದೇಹ. ಭೌತಿಕ ದೇಹ ಇರುವುದು ಸತ್ಯವಾದರೆ ಆಧ್ಯಾತ್ಮಿಕ ದೇಹ ಇರುವುದೂ ಸತ್ಯ. [45]ಪವಿತ್ರ ಗ್ರಂಥದಲ್ಲಿ ಲಿಖಿತವಾಗಿರುವಂತೆ ಮೊದಲ ಮಾನವನಾದ ಆದಾಮನು ಜೀವ ಪಡೆದ ವ್ಯಕ್ತಿ; ಕಡೆಯ ಆದಾಮನಾದರೋ ಜೀವ ಕೊಡುವ ಆತ್ಮ. [46]ಮೊದಲು ಆದುದು ಆಧ್ಯಾತ್ಮಿಕವಾದುದಲ್ಲ, ಪ್ರಾಕೃತವಾದುದು. ಅನಂತರ ಆದುದು ಆಧ್ಯಾತ್ಮಿಕವಾದುದು. [47]ಮೊದಲನೆಯ ಮಾನವನು ಮಣ್ಣಿನಿಂದಾದವನು; ಮಣ್ಣಿಗೆ ಸಂಬಂಧಪಟ್ಟವನು. ಎರಡನೆಯ ಮಾನವನಾದರೋ ಸ್ವರ್ಗದಿಂದ ಬಂದವನು. [48]ಮಣ್ಣಿಗೆ ಸಂಬಂಧಪಟ್ಟವರು ಮಣ್ಣಿನಿಂದ ಆದವನಂತೆಯೇ ಇರುತ್ತಾರೆ. ಸ್ವರ್ಗಕ್ಕೆ ಸಂಬಂಧಪಟ್ಟವರು ಸ್ವರ್ಗದಿಂದ ಬಂದವನಂತೆಯೇ ಇರುತ್ತಾರೆ. [49]ಮಣ್ಣಿನಿಂದ ಆದವನ ರೂಪವನ್ನು ನಾವು ಧರಿಸಿರುವಂತೆಯೇ ಸ್ವರ್ಗದಿಂದ ಬಂದಾತನ ರೂಪವನ್ನು ಧರಿಸುತ್ತೇವೆ.

50 ಸಹೋದರರೇ, ನಾನು ನಿಮಗೆ ಹೇಳುವುದೇನೆಂದರೆ: ರಕ್ತಮಾಂಸವು ದೇವರ ಸಾಮ್ರಾಜ್ಯಕ್ಕೆ ಬಾಧ್ಯವಾಗಲು ಸಾಧ್ಯವಿಲ್ಲ. ಅಂತೆಯೇ, ಅಳಿದುಹೋಗುವಂಥದ್ದು ಅಮರತ್ವಕ್ಕೆ ಬಾಧ್ಯವಾಗಲು ಸಾಧ್ಯವಿಲ್ಲ.

51–[52]ಇಗೋ, ಕೇಳಿ! ಇದುವರೆಗೂ ನಿಗೂಢವಾಗಿದ್ದ ರಹಸ್ಯವನ್ನು ನಾನು ನಿಮಗೆ ತಿಳಿಸುತ್ತೇನೆ. ನಾವೆಲ್ಲರೂ ಸಾಯುವುದಿಲ್ಲ. ಅಂತಿಮ ಕಹಳೆಯು ಮೊಳಗಿದಾಗ, ಕ್ಷಣಮಾತ್ರದಲ್ಲಿ, ರೆಪ್ಪೆಬಡಿಯುವಷ್ಟರಲ್ಲಿ ನಾವೆಲ್ಲರೂ ಮಾರ್ಪಡುವೆವು. ಹೌದು, ಕಹಳೆ ಮೊಳಗುವುದು. ಸತ್ತವರು ಪುನರುತ್ಥಾನಹೊಂದಿ ಅಮರರಾಗುವರು ಮತ್ತು ನಾವು ಮಾರ್ಪಡುವೆವು. [53]ಏಕೆಂದರೆ, ಅಳಿದು ಹೋಗುವ ಶರೀರ ಅಮರತ್ವವನ್ನು ಧರಿಸಲೇಬೇಕು. ಮರ್ತ್ಯವಾದ ಶರೀರ ಅಮರತ್ವವನ್ನು ಧರಿಸಲೇ ಬೇಕು. [54]ಅಳಿದುಹೋಗುವಂಥದ್ದು ಅಮರತ್ವವನ್ನೂ ಮರ್ತ್ಯವಾದುದು ಅಮರ್ತ್ಯವನ್ನೂ ಧರಿಸಿಕೊಂಡಾಗ ಪವಿತ್ರಗ್ರಂಥದ ಈ ವಾಕ್ಯ ನೆರವೇರುವುದು:

[55] ಸಾವಿಗೆ ಸೋಲಾಯಿತು
ಜಯವು ಸಂಪೂರ್ಣವಾಯಿತು.

ಎಲೈ ಸಾವೇ, ನಿನ್ನ ಜಯವೆಲ್ಲಿ?
ಎಲೈ ಸಾವೇ, ನಿನ್ನ ವಿಷಕೊಂಡಿಯೆಲ್ಲಿ?
[56]ಪಾಪವೇ ಸಾವಿನ ವಿಷಕೊಂಡಿ. ಪಾಪಕ್ಕೆ ಶಕ್ತ್ಯಾಧಾರ ಶಾಸ್ತ್ರವಿಧಿಗಳೇ. [57]ಆದರೆ ನಮ್ಮ ಪ್ರಭುವಾದ ಯೇಸುಕ್ರಿಸ್ತರ ಮುಖಾಂತರ ನಮಗೆ ಜಯವನ್ನು ದೊರಕಿಸಿಕೊಟ್ಟಿರುವ ದೇವರಿಗೆ ಸ್ತೋತ್ರ ಸಲ್ಲಲಿ!

58 ನನ್ನ ಪ್ರಿಯ ಸಹೋದರರೇ, ಸ್ಥಿರ ಚಿತ್ತರಾಗಿರಿ, ನಿಶ್ಚಲರಾಗಿರಿ. ಪ್ರಭುವಿನ ಸೇವೆಯಲ್ಲಿ ನೀವು ಪಡುವ ಪ್ರಯಾಸ ಎಂದಿಗೂ ನಿಷ್ಫಲವಾಗದು. ಆದ್ದರಿಂದ ಅವರ ಸೇವೆಯಲ್ಲಿ ನಿರಂತರ ಶ್ರದ್ಧೆಯುಳ್ಳವರಾಗಿರಿ.

### ದೇವಜನರಿಗೆ ದಾನ

**16** ದೇವಜನರಿಗೋಸ್ಕರ ಹಣ ಸಂಗ್ರಹಿಸುವುದರ ವಿಷಯವಾಗಿ ಹೇಳುವುದಾದರೆ: ಗಲಾತ್ಯದ ಸಭೆಗಳಿಗೆ ನಾನು ಕೊಟ್ಟ ನಿಯಮವನ್ನೇ ನೀವೂ ಅನುಸರಿಸಿರಿ. ನಾನು ಬಂದಾಗ ಹಣ ಸಂಗ್ರಹಿಸುವ ಅವಶ್ಯಕತೆ ಇರಬಾರದು. [2]ಈ ಕಾರಣ, ನಿಮ್ಮಲ್ಲಿ ಪ್ರತಿ ಒಬ್ಬನೂ ತನ್ನ ಸಂಪಾದನೆಗೆ ತಕ್ಕಂತೆ ಸ್ವಲ್ಪ ಹಣವನ್ನು ಪ್ರತಿವಾರದ ಮೊದಲನೆಯ ದಿನವೇ ಪ್ರತ್ಯೇಕಿಸಿ ಇಡಲಿ. [3]ನಾನು ಬಂದನಂತರ ನಿಮ್ಮ ಕೊಡುಗೆಯನ್ನು ಪರಿಚಯ ಪತ್ರದ ಸಮೇತ ನೀವು ಆರಿಸಿದವರ ಕೈಯಲ್ಲಿ ಜೆರುಸಲೇಮಿಗೆ ಕಳುಹಿಸುತ್ತೇನೆ. [4]ನಾನೇ ಹೋಗುವುದು ಉಚಿತವೆನಿಸಿದರೆ, ಅವರೂ ನನ್ನ ಜೊತೆಗೆ ಬರಲಿ.

### ಭೇಟಿಮಾಡುವ ಬಯಕೆ

5 ನಾನು ಮೊದಲು ಮಕೆದೋನಿಯದ ಪ್ರವಾಸವನ್ನು ಮುಗಿಸಿಕೊಂಡು ಅನಂತರ ನಿಮ್ಮ ಬಳಿಗೆ ಬರುತ್ತೇನೆ. [6]ಬಹುಶಃ ನಾನು ನಿಮ್ಮೊಡನೆ ತಂಗಬಹುದು. ಚಳಿಗಾಲವನ್ನು ಪೂರ್ತಿಯಾಗಿ ನಿಮ್ಮಲ್ಲಿ ಕಳೆಯಬೇಕಾಗಬಹುದು. ಆಮೇಲೆ ನಾನು ಹೋಗಬೇಕಾದ ಸ್ಥಳಕ್ಕೆ ನೀವು ನನ್ನನ್ನು ಕಳುಹಿಸಿಕೊಡಬೇಕು. [7]ಪ್ರಯಾಣದ ನಡುವೆ ನಿಮ್ಮನ್ನು ನೋಡಿ ಹೋಗಲು ನನಗೆ ಇಷ್ಟವಿಲ್ಲ. ಪ್ರಭುವಿನ ಚಿತ್ತವಾದರೆ, ಕೊಂಚಕಾಲವಾದರೂ ನಿಮ್ಮೊಡನೆ ಕಾಲಕಳೆಯಬೇಕೆಂದಿದ್ದೇನೆ. [8]ಪಂಚಾಶತ್ತಮ ಹಬ್ಬದ ತನಕ ನಾನು ಎಫೆಸದಲ್ಲಿಯೇ ಇರುತ್ತೇನೆ. [9]ಇಲ್ಲಿ ಅನೇಕ ವಿರೋಧಿಗಳಿದ್ದರೂ ಶುಭಸಂದೇಶದ ಕಾರ್ಯವನ್ನು ಕೈಗೊಳ್ಳಲು ಮಹಾದ್ವಾರಗಳು ನನಗೆ ತೆರೆದಿವೆ.

10 ತಿಮೊಥೇಯನು ಬಂದರೆ ಆತನಿಗೆ ಯಾವ ಚಿಂತೆಯೂ ಇರದಂತೆ ನೋಡಿಕೊಳ್ಳಿ. ಆತನು ನನ್ನ ಹಾಗೆ ಪ್ರಭುವಿನ ಸೇವೆಯಲ್ಲಿಯೇ ನಿರತನಾಗಿರುತ್ತಾನೆ. [11]ಯಾರೂ ಆತನನ್ನು ತಾತ್ಸಾರ ಮಾಡದಿರಲಿ. ಸಮಾಧಾನದಿಂದ ಆತನು ನನ್ನ ಬಳಿಗೆ ಬರುವಂತೆ ಕಳುಹಿಸಿಕೊಡಿ. ಆತನ ಆಗಮನವನ್ನು ನಾನು ಇತರ ಸಹೋದರರೊಡನೆ ಎದುರುನೋಡುತ್ತಿದ್ದೇನೆ. [12]ಸಹೋದರರೇ, ಅಪೊಲೋಸನ ವಿಷಯವಾಗಿ ಹೇಳುವುದಾದರೆ, ಆತನು ಇತರ ಸಹೋದರರೊಡನೆ ನಿಮ್ಮ ಬಳಿಗೆ ಬರಬೇಕೆಂದು ನಾನು ಬಹಳವಾಗಿ ಪ್ರೋತ್ಸಾಹಿಸಿದ್ದೇನೆ. ತಕ್ಷಣವೇ ಬರಲು ಆತನಿಗೆ ಮನಸ್ಸಿಲ್ಲ; ಸದವಕಾಶ ದೊರಕಿದಾಗ ಬರುತ್ತಾನೆ.

### ವಿದಾಯ ವಂದನೆ

13 ಜಾಗರೂಕರಾಗಿರಿ, ವಿಶ್ವಾಸದಲ್ಲಿ ದೃಢರಾಗಿರಿ, ಧೈರ್ಯಶಾಲಿಗಳಾಗಿರಿ, ಸ್ಥೈರ್ಯದಿಂದ ಬಾಳಿರಿ. [14]ನೀವು ಮಾಡುವುದನ್ನೆಲ್ಲಾ ಪ್ರೀತಿಯಿಂದ ಮಾಡಿರಿ. [15]ಸ್ತೇಫನನನ್ನು ಮತ್ತು ಆತನ ಕುಟುಂಬದವರನ್ನು ನೀವು ಬಲ್ಲಿರಿ. ಅವರು ಅಖಾಯದ ಪ್ರಥಮ ಕ್ರೈಸ್ತವಿಶ್ವಾಸಿಗಳು. ದೇವಜನರ ಸೇವೆಗೆ ತಮ್ಮನ್ನೇ ಸಮರ್ಪಿಸಿಕೊಂಡವರು. ನಾನು ನಿಮ್ಮಲ್ಲಿ ವಿನಂತಿಸುವುದೇನೆಂದರೆ: [16]ಇಂಥವರನ್ನು ಮತ್ತು ಅವರೊಡನೆ ದುಡಿದು ಸೇವೆಮಾಡುವವರನ್ನು ಮುಂದಾಳುಗಳೆಂದು ಸನ್ಮಾನಿಸಿರಿ. [17]ಸ್ತೇಫನನು, ಪೋರ್ತುನಾತನು ಮತ್ತು ಅಖಾಯಿಕನು ಬಂದುದರಿಂದ ನನಗೆ ಸಂತೋಷವುಂಟಾಯಿತು. ನೀವು ಇಲ್ಲದ್ದರಿಂದ ನನಗುಂಟಾದ

ಕೊರತೆಯನ್ನು ಅವರು ನೀಗಿಸಿದ್ದಾರೆ. [18]ಅವರು ನಿಮ್ಮನ್ನು ಸಂತೈಸಿದಂತೆ ನನ್ನನ್ನೂ ಸಂತೈಸಿದ್ದಾರೆ,
ಇಂಥವರನ್ನು ಗೌರವಿಸಬೇಕು.

19 ಏಷ್ಯ ಸೀಮೆಯಲ್ಲಿರುವ ಧರ್ಮಸಭೆಗಳ ಸಹೋದರರು ನಿಮಗೆ ವಂದನೆಗಳನ್ನು ತಿಳಿಸಿರುತ್ತಾರೆ.
ಅಕ್ವಿಲನು ಮತ್ತು ಪ್ರಿಸಿಲ್ಲಳು ಹಾಗು ಅವರ ಮನೆಯಲ್ಲಿ ಸಭೆಸೇರುವ ಎಲ್ಲರೂ ಪ್ರಭುವಿನ ಹೆಸರಿನಲ್ಲಿ ನಿಮಗೆ
ಹಾರ್ದಿಕ ಶುಭಾಶಯಗಳನ್ನು ಕೋರಿದ್ದಾರೆ. [20]ಇಲ್ಲಿಯ ಸಹೋದರರೆಲ್ಲರೂ ನಿಮಗೆ ನಮಸ್ಕಾರ ಹೇಳಿದ್ದಾರೆ.
ನೀವು ಸಹ ಪವಿತ್ರವಾದ ಮುದ್ದಿಟ್ಟು ಒಬ್ಬರನ್ನೊಬ್ಬರು ವಂದಿಸಿರಿ. [21]ಪೌಲನಾದ ನಾನು ನನ್ನ ಸ್ವಂತ
ಕೈಬರಹದಿಂದ ನಿಮಗೆ ವಂದನೆಯನ್ನು ಬರೆಯುತ್ತಿದ್ದೇನೆ. [22]ಯಾರಾದರೂ ಪ್ರಭುವನ್ನು ಪ್ರೀತಿಸದೆ
ಹೋದರೆ ಅವರಿಗೆ ಧಿಕ್ಕಾರ! "ಮಾರನಥ" ಪ್ರಭುವೇ ಬನ್ನಿ.

23 ನಮ್ಮ ಪ್ರಭು ಯೇಸುಕ್ರಿಸ್ತರ ಅನುಗ್ರಹವು ನಿಮ್ಮೆಲ್ಲರಲ್ಲಿರಲಿ. [24]ಕ್ರಿಸ್ತ ಯೇಸುವಿನಲ್ಲಿ ನಿಮ್ಮೆಲ್ಲರಿಗೂ
ನನ್ನ ಪ್ರೀತಿವಾತ್ಸಲ್ಯಗಳು!